VOLUME: 16 | 24 APRIL 2026 | ಶನಿವಾರ | RS: 2 | PAGE: 06 ISSUE: 80 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಖ್ಯಾತ ನಟಿ ಕಾಜೋಲ್ ಅವರು ಹಲವು ರೊಮ್ಯಾಂಟಿಕ್ ಸಿನಿಮಾಗಳಲ್ಲಿ ನಟಿಸಿದರೂ ಕೂಡ ಕಿಸ್ಸಿಂಗ್ ಸೀನ್ ಒಪ್ಪಿಕೊಂಡಿರಲಿಲ್ಲ. ಆದರೆ 30 ವರ್ಷಗಳ ಬಳಿಕ ಅವರು ಆ ನಿಯಮವನ್ನು ಮುರಿದರು. ಅದಕ್ಕೆ ಕಾರಣ ಏನು ಎಂಬುದನ್ನು ಅವರೀಗ ಬಹಿರಂಗಪಡಿಸಿದ್ದಾರೆ. 'ದಿ ಟ್ರಯಲ್' ಸರಣಿಯ ಬಿಡುಗಡೆ ಬಗ್ಗೆ ಮಾತನಾಡಿರುವ ಅವರು, ಪಾತ್ರ, ಆಲೋಚನೆಗಳು, ನಂಬಿಕೆಗಳು ಮತ್ತು ಆಕೆ ಏನನ್ನು ಬಯಸುತ್ತಿದ್ದಳು ಎಂಬುದನ್ನು ತೋರಿಸಲು ಆ ದೃಶ್ಯ ಅನಿವಾರ್ಯವಾಗಿತ್ತು ಎಂದಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
ಸಂಪಾದಕ ಗಂಡಸಿ ಸದಾನಂದಸ್ವಾಮಿ





# ಒಳ ಮೀಸಲಾತಿಗೆ ಸಂಪುಟ ಒಪ್ಪಿಗೆ

ಬೆಂಗಳೂರು: ಪರಿಶಿಷ್ಟ ಜಾತಿಯ ಎಲ್ಲ ಸಮುದಾಯಗಳಿಗೂ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಇಂದಿನ ಸಚಿವ ಸಂಪುಟ ಸಭೆ ಐತಿಹಾಸಿಕ ನಿರ್ಧಾರವನ್ನು ತೆಗೆದುಕೊಂಡಿದ್ದು, ಎಡ, ಬಲ ಹಾಗೂ ಇತರೇ ಸಮುದಾಯಗಳಿಗೆ 5.25:5.25:4.5 ಮೀಸಲಾತಿ ಕಲ್ಪಿಸಲು ಸರ್ವಾನುಮತದಿಂದ ಒಪ್ಪಿಗೆ ನೀಡಿದೆ.

ಒಳಮೀಸಲಾತಿಗೆ ಸಂಬಂಧಿಸಿದಂತೆ ಇಂದು ನಡೆದ ಸಂಪುಟ ಸಭೆಯ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಮೀಸಲಾತಿಯನ್ನು ಶೇ.50ಕ್ಕೆ ಮಿತಿಗೊಳಿಸುವ ಹೈಕೋರ್ಟ್ ತೀರ್ಪಿನ ಪ್ರಕಾರ ಪರಿಶಿಷ್ಟ ಜಾತಿಯೊಳಗೆ ಒಳ ಮೀಸಲಾತಿಯನ್ನು ಮರು ನಿಗಧಿಪಡಿಸಿ ಪರಿಶಿಷ್ಟ ಜಾತಿಗೆ 15% ಹಾಗೂ ಪರಿಶಿಷ್ಟ ವರ್ಗಗಳಿಗೆ ಶೇ3 ರಷ್ಟು ಮೀಸಲಾತಿ ನೀಡಲಾಗಿದೆ.

ಒಳಮೀಸಲಾತಿಗೆ ರಚಿಸಲಾಗಿದ್ದ ಕಾಯ್ದೆಗೆ ಅನುಗುಣವಾಗಿ 17 % ಮೀಸಲಾತಿಗೆ 6:6:5 ಇದ್ದರೆ, ಇದೀಗ 15 % ಮೀಸಲಾತಿಗೆ 5.3, 5.3 ಹಾಗೂ 4.4 ಮೀಸಲಾತಿಯನ್ನು ನಿಗದಿ ಮಾಡಿ ವರದಿ ನೀಡಲಾಗಿದ್ದು, ಅಂತಿಮವಾಗಿ ಸಚಿವ ಸಂಪುಟ ಸಭೆಯು ಎಡಗೈ ಸಂಬಂಧಿತ ಜಾತಿಗಳಿಗೆ 5.25, ಬಲಗೈ ಜಾತಿಗಳಿಗೆ 5.25



ಬೋವಿ , ಲಂಬಾಣಿ, ಕೊರಚ, ಕೊರಮ ಹಾಗೂ 59 ಅಲೆಮಾರಿ ಜಾತಿಗಳು ಸೇರಿ 4.5 ಮೀಸಲಾತಿ ನೀಡಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದರು.

ಈ ನಿರ್ಧಾರದಿಂದ ಎಲ್ಲ ಸಮುದಾಯಗಳಿಗೂ ಸಮಾನ ನ್ಯಾಯ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು ನೇಮಕಾತಿ ಮಾಡುವ ಸಂದರ್ಭದಲ್ಲಿ ಒಳಮೀಸಲಾತಿಯನ್ನು ಇದರನ್ವಯ ನಿರ್ಧರಿಸಬೇಕು ಎಂದರು.

ಶೇ. ಆರರಷ್ಟು ಮೀಸಲಾತಿಗೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯ ಅಂತಿಮವಾಗಿ ತೀರ್ಮಾನ ಕೈಗೊಳ್ಳುವವರೆಗೆ ಬ್ಯಾಕ್ ಲಾಗ್ ಎಂದು ಪರಿಗಣಿಸಲಾಗುವುದು ಎಂದರು.

ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿಗೆ ಸಂಬಂಧಿಸಿದಂತೆ ರಾಷ್ಟ್ರದಲ್ಲಿಯೇ ಮಹತ್ವಪೂರ್ಣ ನಿರ್ಧಾರ ಇದಾಗಿದ್ದು, ರೋಸ್ಟರ್ ಸಂಬಂಧಿಸಿದಂತೆ ಸೂಕ್ತ ಪರಿಹಾರವನ್ನು ಕೈಗೊಂಡು ರಾಜ್ಯದ ಶೋಷಿತ ವರ್ಗಗಳ ಬದುಕಿನಲ್ಲಿ ತಿರುವು ನೀಡಲಾಗುತ್ತಿದೆ ಎಂದರು.

ಒಳಮೀಸಲಾತಿ ಕುರಿತು ಬಹುಕಾಲದಿಂದ ಅನೇಕ ಹೋರಾಟಗಳು ನಡೆದಿವೆ. ನಂತರ ಚಿತ್ರದುರ್ಗದಲ್ಲಿ ನಡೆದ ಪರಿಶಿಷ್ಟ ಜಾತಿ ಸಮಾವೇಶದಲ್ಲಿ ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ಕಲ್ಪಿಸುವ ಐತಿಹಾಸಿಕ ನಿರ್ಧಾರವನ್ನು ಕೈಗೊಳ್ಳಲಾಗಿತ್ತು. ಈ ಸಮಾವೇಶದಲ್ಲಿ 101 ಪರಿಶಿಷ್ಟ ಜಾತಿಗಳು ಸೇರಿದಂತೆ ಅಲೆಮಾರಿ ಸೇರಿದಂತೆ 59 ಜಾತಿಗಳ ಪ್ರತಿನಿಧಿಗಳು ಪಾಲ್ಗೊಂಡು ಒಳಮೀಸಲಾತಿಗೆ ಸರ್ವಾನುಮತದಿಂದ ಒಪ್ಪಿಗೆ ನೀಡಿದ್ದರು ಎಂದು ವಿವರಿಸಿದ ಮುಖ್ಯಮಂತ್ರಿಗಳು ಗೃಹ ಸಚಿವ ಡಾ: ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಪ್ರಣಾಳಿಕಾ ಸಮಿತಿಯಲ್ಲಿಯೂ ಒಳಮೀಸಲಾತಿಯನ್ನು ಸರ್ಕಾರ ನೀಡಲಿದೆ ಎಂಬ ಭರವಸೆ ನೀಡಲಾಗಿತ್ತು.

ಸುಪ್ರೀಂ ಕೋರ್ಟ್ ಒಳಮೀಸಲಾತಿ ಕಲ್ಪಿಸುವ ತೀರ್ಮಾನವನ್ನು ಆಯಾ ರಾಜ್ಯಗಳೇ ತೆಗೆದುಕೊಳ್ಳಬಹುದು ಎಂದು ಆದೇಶ ನೀಡಿದ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗ ರಚಿಸಲಾಯಿತು. ಅವರು ನೀಡಿದ ವರದಿ ಆಧರಿಸಿ ಸಚಿವ ಸಂಪುಟವು ಪರಿಶಿಷ್ಟ ಜಾತಿಯ ಬಲ, ಎಡ ಸಮುದಾಯಗಳು ಹಾಗೂ ಇತರೇ ಅಲೆಮಾರಿ ಜಾತಿಗಳಿಗೆ ಕ್ರಮವಾಗಿ 6:6:5 ಮೀಸಲಾತಿ ಕಲ್ಪಿಸುವ ನಿರ್ಧಾರ ತೆಗೆದುಕೊಳ್ಳಲಾಯಿತು. ಪರಿಶಿಷ್ಟ ಜಾತಿಗೆ ಒಟ್ಟು 24 % ಅಂದರೆ ಶೇ 7% ರಷ್ಟು ಎಸ್.ಟಿಗೆ ಹಾಗೂ 17% ಎಸ್ .ಸಿ ಸಮುದಾಯಗಳಿಗೆ ಮೀಸಲಿಡಲಾಯಿತು. ಹೀಗಾಗಿ ಒಟ್ಟು ಶೇ 56% ರಷ್ಟು ಮೀಸಲಾತಿ ನೀಡಿದಂತಾಯಿತು. ನ್ಯಾಯಾಲಯವು

> ಒಳಮೀಸಲಾತಿ ಕುರಿತು ಬಹುಕಾಲದಿಂದ ಅನೇಕ ಹೋರಾಟಗಳು ನಡೆದಿವೆ. ನಂತರ ಚಿತ್ರದುರ್ಗದಲ್ಲಿ ನಡೆದ ಪರಿಶಿಷ್ಟ ಜಾತಿ ಸಮಾವೇಶದಲ್ಲಿ ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ಕಲ್ಪಿಸುವ ಐತಿಹಾಸಿಕ ನಿರ್ಧಾರವನ್ನು ಕೈಗೊಳ್ಳಲಾಗಿತ್ತು. ಈ ಸಮಾವೇಶದಲ್ಲಿ 101 ಪರಿಶಿಷ್ಟ ಜಾತಿಗಳು ಸೇರಿದಂತೆ ಅಲೆಮಾರಿ ಸೇರಿದಂತೆ 59 ಜಾತಿಗಳ ಪ್ರತಿನಿಧಿಗಳು ಪಾಲ್ಗೊಂಡು ಒಳಮೀಸಲಾತಿಗೆ ಸರ್ವಾನುಮತದಿಂದ ಒಪ್ಪಿಗೆ ನೀಡಿದ್ದರು ಎಂದು ವಿವರಿಸಿದ ಮುಖ್ಯಮಂತ್ರಿಗಳು ಗೃಹ ಸಚಿವ ಡಾ: ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಪ್ರಣಾಳಿಕಾ ಸಮಿತಿಯಲ್ಲಿಯೂ ಒಳಮೀಸಲಾತಿಯನ್ನು ಸರ್ಕಾರ ನೀಡಲಿದೆ ಎಂಬ ಭರವಸೆ ನೀಡಲಾಗಿತ್ತು.

ಇಂದಿರಾ ಸಹಾನಿ ಪ್ರಕರಣವನ್ನು ಉಲ್ಲೇಖಿಸಿ ಮೀಸಲಾತಿ ಶೇ 50 ರಷ್ಟು ಮೀರಬಾರದು ಎಂದು ಪುನರುಚ್ಚರಿಸಿತ್ತು ಎಂದರು.

ಆದರೆ ಈ ಮೀಸಲಾತಿಗೆ ಅಪಸ್ವರಗಳು ಎದ್ದ ನಂತರ ಗೊಂದಲ ನಿವಾರಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ತಾಂತ್ರಿಕ ಸಮಿತಿ ರಚಿಸಿ ವರದಿಯನ್ನು ಪಡೆಯಲಾಗಿದೆ. ಅದರಂತೆ ಕೋರ್ಟ್ ಆದೇಶದ ಶೇಕಡ 50 ಮಿತಿಗೆ ಒಳಪಟ್ಟು ಇಂದಿನ ಸಚಿವ ಸಂಪುಟದಲ್ಲಿ ಎಡ, ಬಲ ಹಾಗೂ ಇತರೇ ಸಮುದಾಯಗಳಿಗೆ 5.25:5.25:4.5 ಮೀಸಲಾತಿ ಕಲ್ಪಿಸುವ ದಿಟ್ಟ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದರು.

ಈಗಾಗಲೇ ಬಜೆಟ್ ನಲ್ಲಿ ಘೋಷಿಸಿರುವಂತೆ ಈ ವರ್ಷ 56432 ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಶೀಘ್ರದಲ್ಲೇ ಅಧಿಸೂಚನೆ ಹೊರಡಿಸಿ, ತುರ್ತು ಕ್ರಮ ಕೈಗೊಳ್ಳಲಾಗುವುದು. ನೇಮಕಾತಿಗಳಲ್ಲಿ

ಶೇಕಡ 50ರ ಮೀಸಲಾತಿಯು ನ್ಯಾಯಾಲಯವು ಅಂತಿಮ ತೀರ್ಮಾನ ತೆಗೆದುಕೊಳ್ಳುವವರೆಗೆ. ನಮ್ಮ ಸರ್ಕಾರವು ಈಗಾಗಲೇ ಶೇಕಡ 56ರ ಮೀಸಲಾತಿ ನೀಡಬೇಕೆನ್ನುವ ನಿರ್ಧಾರಕ್ಕೆ ಬದ್ಧವಾಗಿದೆ. ಸಿ ಕೆಟಗರಿಯಲ್ಲಿ ನೇಮಕಾತಿಗೆ ಲಭ್ಯವಾಗುವ ಹುದ್ದೆಗಳಲ್ಲಿ ಶೇ.20ರಷ್ಟು ನ್ನು 59 ಅಲೆಮಾರಿ ಜಾತಿಗಳಿಗೆ ಮೀಸಲಿಡಲು ಸಂಪುಟದಲ್ಲಿ ನಿರ್ಧರಿಸಲಾಗಿದೆ.

## ಜನಿವಾರ ತೆಗೆಸಿ ಮತ್ತೆ ಕಿರಿಕ್..!

ಬೆಂಗಳೂರು: ರಾಜ್ಯದಲ್ಲಿ ಮತ್ತೆ ಜನಿವಾರ ದಂಗಲ್ ಶುರುವಾಗಿದೆ, ಗುರುವಾರ (ಏ.23) ನಡೆದ ಸಿಇಟಿ ಪರೀಕ್ಷೆಯಲ್ಲಿ 5ಕ್ಕೂ ಅಧಿಕ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಆರೋಪ ಕೇಳಿಬಂದಿದೆ.

ಮಡಿವಾಳದ ಕೃಪಾನಿಧಿ ಕಾಲೇಜು ಪರೀಕ್ಷೆ ಕೇಂದ್ರದಲ್ಲಿ ಆನಂದ್ ಸುಧೀರ್ ರಾವ್ ಎಂಬ ವಿದ್ಯಾರ್ಥಿ ಸೇರಿದಂತೆ ಐದಕ್ಕೂ ಹೆಚ್ಚು ಮಕ್ಕಳ ಜನಿವಾರ ತೆಗೆಸಿದ್ದಾರೆ. ಈ ವೇಳೆ ವಿದ್ಯಾರ್ಥಿ ತೆಗೆಯಲ್ಲ ಅಂತ ಹೇಳಿದಕ್ಕೆ ಮನೆಗೆ ವಾಪಸ್ ಹೋಗಿ ಅಂದಿದ್ದಾರೆ. ಅದಕ್ಕೆ ಕೊನೆಗೆ ಪೋಷಕರು ಮಗನ ಭವಿಷ್ಯದ ದೃಷ್ಟಿಯಿಂದ ಜನಿವಾರ ತೆಗೆದು ಪರೀಕ್ಷೆ ಕೇಂದ್ರಕ್ಕೆ ಕಳುಹಿಸಿದ್ದಾರೆ. ಇದರ ಬೆನ್ನಲ್ಲೇ ಕಾಲೇಜಿಗೆ ತಹಶೀಲ್ದಾರ್, ಶಿಕ್ಷಣಾಧಿಕಾರಿಗಳು, ಪೊಲೀಸರು ಭೇಟಿ ನೀಡಿದ್ದಾರೆ.

**ಪೋಷಕರ ಮನವೊಲಿಸಿ ಎಲ್ಲೂ ಈ ಬಗ್ಗೆ ಹೇಳದ್ದಂತೆ ಒತ್ತಾಯ ಮಾಡಿ ಲೆಟರ್ ಹಾಕಿಸಿಕೊಂಡಿದ್ದರು. ಇಂದು ಅದೇ ಕಾಲೇಜು ಸಿಬ್ಬಂದಿ ಪೋಷಕರಿಗೆ ಕ್ಷಮೆ ಕೇಳಿ, ಜನಿವಾರ ಹಾಕಿಕೊಂಡು ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಟ್ಟಿದ್ದಾರೆ.**

ಇಂದು ಪರೀಕ್ಷಾ ಕೇಂದ್ರಕ್ಕೆ ಉನ್ನತ ಶಿಕ್ಷಣ ಇಲಾಖೆ ಸಚಿವ ಎಂ.ಸಿ. ಸುಧಾಕರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಡ್ರೆಸ್ ಕೋಡ್ ಬಗ್ಗೆ ಅರಿವು ಮೂಡಿಸಲಾಗಿದೆ.

ವೆಬ್‌ಸೈಟ್‌ನಲ್ಲಿ ವಸ್ತ್ರಸಂಹಿತೆ ಬಗ್ಗೆ ಮಾಹಿತಿ ಕೊಡಲಾಗಿದೆ. ಸಣ್ಣಪುಟ್ಟ ಘಟನೆ ಮೂಗುತಿ ವಿಚಾರ ಅನಿವಾರ್ಯ ಸ್ಥಿತಿಯಲ್ಲಿ ಆಗಿದೆ. ಕೃಪನಿಧಿ ಕಾಲೇಜ್ ವಿಚಾರ ಕೆಇಎ ಗಮನಕ್ಕೆ ಬಂದಿಲ್ಲ. ಆ ರೀತಿ ಆಗಿದ್ದರೆ, ಕೇಂದ್ರದ ಸಿಬ್ಬಂದಿ ಹಾಗೆ ಮಾಡಿದ್ರೆ ವರದಿ ಪಡೆದು ಕ್ರಮ ತೆಗೆದುಕೊಳ್ತೀವಿ ಎಂದಿದ್ದಾರೆ.

ಕೆಲವರಿಗೆ ಮನಸ್ಥಿತಿ ಹಾಗೆ ಇರುತ್ತದೆ. ಉದ್ದೇಶಪೂರ್ವಕವಾಗಿ ಕೆಟ್ಟ ಹೆಸರು ತರಲು ಕೆಲವರು ಸಮಾಜದಲ್ಲಿ ಮಾಡ್ತಾರೆ. ಅಂತಹದ್ದಕ್ಕೆ ನಾವು ಆಸ್ಪದ ಕೊಡಲ್ಲ. ಕೃಪನಿಧಿ ಸೆಂಟರ್‌ನಲ್ಲಿ ಆಗಿರೋ ಬಗ್ಗೆ ವರದಿ ಪಡೆದು ಆಗಿದರೆ ಕ್ರಮ ತೆಗೆದುಕೊಳ್ತೀವಿ ಎಂದು ತಿಳಿಸಿದ್ದಾರೆ.

ಕಳೆದ ವರ್ಷ ಸಿಇಟಿ ಪರೀಕ್ಷೆ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ಸುಚಿವ್ರತ್ ಕುಲಕರ್ಣಿ ಎಂಬ ವಿದ್ಯಾರ್ಥಿಗೆ ಜನಿವಾರ ಧರಿಸಿದ್ದಕ್ಕಾಗಿ ಗಣಿತ ಪರೀಕ್ಷೆಗೆ ಅವಕಾಶ ನೀಡಿರಲಿಲ್ಲ. ಅದಾದ ಬಳಿಕ ಈ ರೀತಿ ಆಗದಂತೆ ಪರೀಕ್ಷಾ ಪ್ರಾಧಿಕಾರ ಕ್ರಮ ಕೈಗೊಳ್ಳುವುದಾಗಿ ಮಾಹಿತಿ ನೀಡಿತ್ತು. ಆದರೆ ಇದೀಗ ಮತ್ತೆ ಜನಿವಾರ ತೆಗೆಸಿರುವುದು ಮುನ್ನೆಲೆಗೆ ಬಂದಿದೆ.

## ಪ್ರಧಾನಿ ಮೋದಿ ದೋಣಿ ವಿಹಾರ

ಕೋಲ್ಕತ್ತಾ: ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯ ಮೊದಲ ಹಂತದ ಮತದಾನ ಮುಗಿಯುತ್ತಿದ್ದಂತೆ ಪ್ರಧಾನಿ ನರೇಂದ್ರ ಮೋದಿ ಅವರಿಂದು (ಏ.24) ಹೂಗ್ಲಿ ನದಿಯಲ್ಲಿ ದೋಣಿ ವಿಹಾರ ನಡೆಸಿದ್ದಾರೆ.

ಏ.29ರಂದು ನಡೆಯಲಿರುವ ಎರಡನೇ ಹಂತದ ಮತದಾನಕ್ಕೆ ಸಿದ್ಧತೆ ನಡೆಸುತ್ತಿರುವ ಹೊತ್ತಿನಲ್ಲಿ ದೋಣಿ ವಿಹಾರ ನಡೆಸುತ್ತಿರುವ ಕೆಲವು ಫೋಟೋಗಳನ್ನು ನರೇಂದ್ರ ಮೋದಿ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. 1ನೇ ಹಂತದ ಮತದಾನ ಮುಗಿಯುತ್ತಿದ್ದಂತೆ ಇಂದು ಬೆಳಿಗ್ಗೆ ಕೋಲ್ಕತ್ತಾದ ಗಂಗಾ ನದಿಯ ಉಪನದಿಯಾಗಿರುವ ಹೂಗ್ಲಿ ನದಿಯಲ್ಲಿ ಕೈಯಲ್ಲಿ ಕ್ಯಾಮರಾ ಹಿಡಿದು ದೋಣಿ ವಿಹಾರವನ್ನು ಆನಂದಿಸುತ್ತಿರುವುದು ಕಂಡುಬಂದಿದೆ.

ಪ್ರತಿಯೊಬ್ಬ ಬಂಗಾಳಿಗನಿಗೂ, ಗಂಗಾ ನದಿ ಬಹಳ ವಿಶೇಷ ಹಾಗೂ ಪವಿತ್ರವಾದ ಸ್ಥಾನವನ್ನು ಹೊಂದಿದೆ. ಗಂಗಾ ಕೇವಲ ನದಿಯಾಗಿರದೇ ಇಲ್ಲಿನ ಸಂಸ್ಕೃತಿ, ಇತಿಹಾಸ, ಜೀವನಶೈಲಿಯನ್ನು ಎತ್ತಿತೋರಿಸುವ ಬಂಗಾಳದ ಆತ್ಮದ ಮೂಲಕ ಹರಿಯುತ್ತದೆ. ಇಲ್ಲಿನ ನೀರು ನಾಗರಿಕತೆಯ ಚೆತನ್ಯವನ್ನು ಹೊತ್ತೊಯ್ಯುತ್ತದೆ. ಇಂದು ಬೆಳಿಗ್ಗೆ ನಾನು ಕೋಲ್ಕತ್ತಾದ ಹೂಗ್ಲಿ ನದಿಯ ದಡದಲ್ಲಿ ಸ್ವಲ್ಪ ಸಮಯ ಕಳೆದು, ಗಂಗಾ ಮಾತೆಗೆ ಕೃತಜ್ಞತೆ ಸಲ್ಲಿಸಿದೆ.



ಇದೇ ವೇಳೆ ವಿದ್ಯಾಸಾಗರ್ ಸೇತು ಹಾಗೂ ಹೌರಾ ಸೇತುವೆ ಕಣ್ತುಂಬಿಕೊಂಡೆ. ಹೂಗ್ಲಿ ನದಿಯ ದಡದಲ್ಲಿ ನಿಂತು, ಪಶ್ಚಿಮ ಬಂಗಾಳದ ಅಭಿವೃದ್ಧಿ ಮತ್ತು ಬಂಗಾಳಿಗರ ಸಮೃದ್ಧಿಗಾಗಿ ಶ್ರಮಿಸುವ ನಮ್ಮ ಭರವಸೆಯನ್ನು ಒತ್ತಿ ಹೇಳಿದ್ದೇನೆ ಎಂದು ಬರೆದುಕೊಂಡಿದ್ದಾರೆ.

ಪಶ್ಚಿಮ ಬಂಗಾಳ ಚುನಾವಣೆಯ ಮೊದಲ ಹಂತದ ಮತದಾನ ಗುರುವಾರ (ಏ.23) ನಡೆದಿದೆ. ಸಂಜೆ 6 ಗಂಟೆ ಹೊತ್ತಿಗೆ ದಾಖಲೆಯ ಶೇ.92.88ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ.

ಇನ್ನು ಏ.29ರಂದು 142 ಕ್ಷೇತ್ರಗಳಿಗೆ ಎರಡನೇ ಹಂತದ ಮತದಾನ ನಡೆಯಲಿದೆ. ಮೇ 4ರಂದು ಮತ ಎಣಿಕೆ ನಡೆಯಲಿದೆ.

## 21 ದಿನ ಕದನ ವಿರಾಮ

ವಾಷಿಂಗ್ಟನ್: ಇಸ್ರೇಲ್ ಮತ್ತು ಲೆಬನಾನ್ ನಡುವಿನ ಕದನ ವಿರಾಮ ಮೂರು ವಾರಗಳವರೆಗೆ (21 ದಿನಗಳು) ವಿಸ್ತರಣೆಯಾಗಿದೆ. ಎರಡೂ ದೇಶಗಳು ಕದನ ವಿರಾಮ ವಿಸ್ತರಿಸಲು ಒಪ್ಪಿಕೊಂಡಿವೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.

ಶ್ವೇತಭವನದಲ್ಲಿ ಏ.23 ರಂದು ನಡೆದ ಎರಡನೇ ಸುತ್ತಿನ ಉನ್ನತ ಮಟ್ಟದ ಮಾತುಕತೆಗಳ ನಂತರ ಈ ಮಹತ್ವದ ನಿರ್ಧಾರಕ್ಕೆ ಬರಲಾಗಿದೆ. ಟ್ರಂಪ್ ಅವರ ಮಧ್ಯಸ್ಥಿಕೆಯಲ್ಲಿ ಏಪ್ರಿಲ್ 16 ರಂದು ಮೊದಲ ಬಾರಿಗೆ 10 ದಿನಗಳ ಕದನ ವಿರಾಮ ಘೋಷಿಸಲಾಗಿತ್ತು.

ಎರಡೂ ರಾಷ್ಟ್ರಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯು ಅತ್ಯಂತ ಯಶಸ್ವಿಯಾಗಿದೆ ಎಂದು ಟ್ರಂಪ್ ತಮ್ಮ 'ಟ್ರೂತ್ ಸೋಶಿಯಲ್' ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಹಿಜ್ಬುಲ್ಲಾ ಉಗ್ರಗಾಮಿ ಸಂಘಟನೆಯಿಂದ ತನ್ನನ್ನು ತಾನು ರಕ್ಷಿಸಿಕೊಳ್ಳಲು ಅಮೆರಿಕವು ಲೆಬನಾನ್‌ಗೆ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಅವರು ಭರವಸೆ ನೀಡಿದ್ದಾರೆ.



ಎರಡು ದೇಶಗಳ ನಡುವಿನ ಈ ಒಪ್ಪಂದವನ್ನು ಐತಿಹಾಸಿಕ ಕ್ಷಣ ಎಂದು ಟ್ರಂಪ್ ಬಣ್ಣಿಸಿದ್ದು, ಮಧ್ಯಪ್ರಾಚ್ಯದಲ್ಲಿ ಶಾಂತಿ ಸ್ಥಾಪಿಸಲು ಇದು ದೊಡ್ಡ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ. ಮುಂಬರುವ ವಾರಗಳಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಲೆಬನಾನ್ ಅಧ್ಯಕ್ಷ ಜೋಸೆಫ್ ಔನ್ ಅವರು ಶ್ವೇತಭವನಕ್ಕೆ ಭೇಟಿ ನೀಡಲಿದ್ದಾರೆ ಮತ್ತು ಶಾಶ್ವತ ಶಾಂತಿಗಾಗಿ ಮಾತುಕತೆ ನಡೆಸಲಿದ್ದಾರೆ ಎಂದು ತಿಳಿಸಿದ್ದಾರೆ.

ಶಾಂತಿ ಮಾತುಕತೆಗಳ ನಡುವೆಯೂ ಇರಾನ್ ತನ್ನ ಹಿಜ್ಬುಲ್ಲಾ ಸಂಘಟನೆಗೆ ನೀಡುತ್ತಿರುವ ಧನಸಹಾಯವನ್ನು ನಿಲ್ಲಿಸಬೇಕು ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ಯಾವುದೇ ಅಡಚಣೆ ಉಂಟುಮಾಡಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಈ ಕದನ ವಿರಾಮ ಒಪ್ಪಂದವು ಕೇವಲ ದಾಳಿಯನ್ನು ನಿಲ್ಲಿಸುವುದಲ್ಲದೆ ಕೆಲವು ಪ್ರಮುಖ ಷರತ್ತನ್ನು ಒಳಗೊಂಡಿದೆ. ಇಸ್ರೇಲ್ ತನ್ನ ದೇಶದ ಮೇಲೆ ಸಂಭವನೀಯ ಅಥವಾ ಯೋಜಿತ ದಾಳಿಗಳು ನಡೆದರೆ ಅವುಗಳ ವಿರುದ್ಧ 'ಆತ್ಮರಕ್ಷಣೆಗಾಗಿ' ಕ್ರಮ ತೆಗೆದುಕೊಳ್ಳುವ ಹಕ್ಕನ್ನು ಕಾಯ್ದಿರಿಸಿಕೊಂಡಿದೆ. ಲೆಬನಾನ್ ಸರ್ಕಾರವು ತನ್ನ ಭೂಪ್ರದೇಶದಿಂದ ಹಿಜ್ಬುಲ್ಲಾ ಅಥವಾ ಯಾವುದೇ ಇತರ ಸಶಸ್ತ್ರ ಗುಂಪುಗಳು ಇಸ್ರೇಲ್ ಮೇಲೆ ದಾಳಿ ನಡೆಸದಂತೆ ತಡೆಯಲು ಕ್ರಮಕೈಗೊಳ್ಳಬೇಕೆಂದು ಒಪ್ಪಂದ ಹೇಳುತ್ತದೆ.

## ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ: ಸುರೇಶ್‌ಗೌಡ ಭವಿಷ್ಯ..!

ತುಮಕೂರು: ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ನಂತರ ಕರ್ನಾಟಕದಲ್ಲಿ ರಾಜಕೀಯ ಬದಲಾವಣೆಗಳು ವೇಗ ಪಡೆಯಲಿವೆ. ಕಾಂಗ್ರೆಸ್ ಸರ್ಕಾರದ ಆಂತರಿಕ ಕಚ್ಚಾಟದಿಂದಾಗಿ ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿಯಾದರೂ ಅಚ್ಚರಿಯಿಲ್ಲ ಎಂದು ತುಮಕೂರು ಗ್ರಾಮಾಂತರ ಕ್ಷೇತ್ರದ ಬಿಜೆಪಿ ಶಾಸಕ ಬಿ ಸುರೇಶ್ ಗೌಡ ಭವಿಷ್ಯ ನುಡಿದಿದ್ದಾರೆ.



ಕಾಂಗ್ರೆಸ್ ನಾಯಕರ ನಡುವಿನ ಶೀತಲ ಸಮರವನ್ನು ಉಲ್ಲೇಖಿಸಿದ ಅವರು, ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ನಡೆಗಳು ಸರ್ಕಾರವನ್ನು ಪತನದ ಅಂಚಿಗೆ ತಳ್ಳುತ್ತಿವೆ ಎಂದು ಆರೋಪಿಸಿದರು.

ಸಿಎಂ ರೇಸ್‌ನಲ್ಲಿ ಕೈ ನಾಯಕರ ಮಧ್ಯೆ ಸ್ಪರ್ಧೆ ನಡೆಯುತ್ತಿದೆ. ಡಾ. ಜಿ. ಪರಮೇಶ್ವರ್, ಸತೀಶ್ ಜಾರಕಿಹೊಳಿ ಮತ್ತು ಎಂ.ಬಿ. ಪಾಟೀಲ್ ಅವರು ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ಮುಖ್ಯಮಂತ್ರಿಯಾಗಲು ತಯಾರಿ ನಡೆಸಿದ್ದಾರೆ. ಮೇ 10ರಂದು ಮುಹೂರ್ತ ಕೂಡ ನಿಗದಿಯಾಗಿದೆ ಎಂಬ ಸ್ಫೋಟಕ ಮಾಹಿತಿಯನ್ನು ಗೌಡರು ಹಂಚಿಕೊಂಡಿದ್ದಾರೆ.

ರಾಜ್ಯ ಸರ್ಕಾರದ ಆಡಳಿತ ವೈಖರಿಯಿಂದ ಜನರು ಬೇಸತ್ತಿದ್ದಾರೆ. ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿದ್ದು, ಕೇವಲ ಕುರ್ಚಿ ಉಳಿಸಿಕೊಳ್ಳುವ ಆಟ ನಡೆಯುತ್ತಿದೆ. ಕಾಂಗ್ರೆಸ್ ಒಳಜಗಳದಿಂದಾಗಿ ರಾಜ್ಯದ ಆಡಳಿತ ಯಂತ್ರ ಕುಸಿದಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

## ಶೌಚಾಲಯದಲ್ಲಿ ಸಿರಿಂಜ್..!

ತುಮಕೂರು: ಜಿಲ್ಲೆಯ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ರಾಷ್ಟ್ರಮಟ್ಟದ ಕ್ರೀಡಾಕೂಟಕ್ಕೆ ಕಲ್ಪತರು ನಾಡು ತುಮಕೂರು ಸಾಕ್ಷಿಯಾಗಿದೆ.

20 ವರ್ಷದೊಳಗಿನವರ 24ನೇ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಇಂದು ಅದ್ದೂರಿ ಚಾಲನೆ ಸಿಕ್ಕಿದ್ದು, ದೇಶದ ವಿವಿಧ ಭಾಗಗಳಿಂದ ಬಂದ ನೂರಾರು ಯುವ ಪ್ರತಿಭೆಗಳು ತಮ್ಮ ಸಾಧನೆ ಪ್ರದರ್ಶಿಸಲು ಸಜ್ಜಾಗಿದ್ದಾರೆ.

ಆದರೆ, ಆರಂಭದ ದಿನವೇ ಕ್ರೀಡಾಂಗಣದ ಶೌಚಾಲಯದಲ್ಲಿ ಸಿರಿಂಜ್‌ಗಳು ಪತ್ತೆಯಾಗಿದ್ದು, ಗೊಂದಲ ಸೃಷ್ಟಿಸಿದೆ. ಅಷ್ಟೇ ಅಲ್ಲದೆ ಕ್ರೀಡಾಕೂಟದ ಪಾರದರ್ಶಕತೆಯ ಬಗ್ಗೆ ಅನುಮಾನಗಳು ಮೂಡಿವೆ.

ದೇಶದ 28 ರಾಜ್ಯಗಳಿಂದ ಸುಮಾರು 1,500ಕ್ಕೂ ಹೆಚ್ಚು ಯುವ ಕ್ರೀಡಾಪಟುಗಳು ಕ್ರೀಡಾಕೂಟದಲ್ಲಿ ಭಾಗಿಯಾಗಲಿದ್ದು, ಮೂರು ದಿನಗಳ ಕಾಲ ನಡೆಯಲಿದೆ.

ಇನ್ನು 40 ವಿವಿಧ ಕ್ರೀಡಾ ಚಟುವಟಿಕೆ ನಡೆಯಲಿದ್ದು, ಬಿಸಿಲಿನ ತಾಪಮಾನಕ್ಕೆ ಅನುಗುಣವಾಗಿ ಕ್ರೀಡಾಚಟುವಟಿಕೆಗಳು ಬೆಳಿಗ್ಗೆ ಹಾಗೂ ಸಂಜೆ ನಂತರ ಫೆಡ್ ಲೈಟ್‌ನಲ್ಲಿ ನಡೆಯಲಿವೆ.

ಈ ಕ್ರೀಡಾಕೂಟದಲ್ಲಿ ವಿಜೇತರು ಆಗಸ್ಟ್ ತಿಂಗಳಲ್ಲಿ ಅಮೆರಿಕಾದ ಓರೆಗಾನ್‌ನಲ್ಲಿ ನಡೆಯಲಿರುವ ವಿಶ್ವ ಚಾಂಪಿಯನ್ ಶಿಪ್ ಕ್ರೀಡಾಕೂಟದಲ್ಲಿ ಭಾರತ ಪ್ರತಿನಿಧಿಸಲು ಆಯ್ಕೆ ಆಗಲಿದ್ದಾರೆ.

## 'ಒಳಮೀಸಲಾತಿ ಹಂಚಿಕೆಯಲ್ಲಿ ಎಸ್ಕೇಪ್ ಸೂತ್ರ'

ಬೆಂಗಳೂರು:ಒಳಮೀಸಲಾತಿಯನ್ನು ಹಂಚಿಕೆ ಮಾಡುವುದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಸ್ಕೇಪ್ ಸೂತ್ರ ಅನುಸರಿಸಿದ್ದಾರೆ. ಇದರಿಂದ ಯಾವುದೇ ಸಮುದಾಯಕ್ಕೆ ಪ್ರಯೋಜನ ಸಿಗುವುದಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳಮೀಸಲಾತಿಯನ್ನು ಹಂಚಿಕೆ ಮಾಡುವುದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಫಲರಾಗಿದ್ದಾರೆ. ಒಂದು ಕಡೆ ಯುವಜನರು ಸರ್ಕಾರಿ ನೌಕರಿಗಾಗಿ ಹೋರಾಟ ಮಾಡುತ್ತಿದ್ದರೆ, ಮತ್ತೊಂದೆಡೆ ಪರಿಶಿಷ್ಟ ಸಮುದಾಯದವರು ಒಳಮೀಸಲಾತಿಗಾಗಿ ಹೋರಾಟ ಮಾಡುತ್ತಿದ್ದಾರೆ. ಇವೆರಡರಿಂದ ತಪ್ಪಿಸಿಕೊಳ್ಳಲು ಕಾಂಗ್ರೆಸ್ ಸರ್ಕಾರ ಈ ನಾಟಕವಾಡುತ್ತಿದೆ.



ಬಿಜೆಪಿ ಸರ್ಕಾರವಿದ್ದಾಗ 17% ಮೀಸಲು ನೀಡಿತ್ತು. ಗೌರವಾನ್ವಿತ ನ್ಯಾಯಾಲಯಕ್ಕೆ ಈ ಬಗ್ಗೆ ಮನವರಿಕೆ ಮಾಡಬೇಕಿತ್ತು.

ಇದರ ಬದಲು ಸರ್ಕಾರ ಎಸ್ಕೇಪ್ ಸೂತ್ರವನ್ನು ಅನುಸರಿಸಿದ್ದು, ಇದರಿಂದ ಪರಿಶಿಷ್ಟ ಸಮುದಾಯಕ್ಕೆ ನಿಜವಾದ ಪ್ರಯೋಜನ ದೊರೆತಿಲ್ಲ ಎಂದರು.

ಬಿಜೆಪಿ ನೀಡಿದ್ದ 17% ಮೀಸಲನ್ನು 15% ಗೆ ಇಳಿಸಿದ್ದು ಏಕೆ? ಇದನ್ನು ಕೋರ್ಟ್‌ನಲ್ಲಿ ಪ್ರಶ್ನಿಸುವ ಬದಲು ಕಡಿಮೆ ಮಾಡಿರುವುದರಿಂದ ಎಲ್ಲರಿಗೂ ಮೀಸಲಿನಲ್ಲಿ ಅನ್ಯಾಯವಾಗುತ್ತದೆ.

52 ಜಾತಿಗಳು ಸೇರಿದಂತೆ ಯಾವುದೇ ಜಾತಿ ಸಮುದಾಯಗಳನ್ನು ಕರೆದು ಚರ್ಚೆ ಮಾಡಿಲ್ಲ.

ಎಲ್ಲ ಸಮುದಾಯದ ಮುಖಂಡರು ಹಾಗೂ ಸ್ವಾಮೀಜಿಗಳ ಅಭಿಪ್ರಾಯ ಪಡೆದು ಈ ತೀರ್ಮಾನ ಕೈಗೊಳ್ಳಬೇಕಿತ್ತು ಎಂದರು.

ಒಳಮೀಸಲಾತಿಯ ಹೋರಾಟ ನಿರಂತರವಾಗಿ ನಡೆಯುತ್ತಿದೆ.

ಸಚಿವರು ತಮ್ಮ ಸ್ಥಾನ ಉಳಿಸಿಕೊಳ್ಳಲು ಒಂದಾಗಬಹುದು. ಆದರೆ ಸಮುದಾಯದ ಜನರು ನ್ಯಾಯಕ್ಕಾಗಿ ಹೋರಾಟ ಮುಂದುವರಿಸುತ್ತಾರೆ ಎಂದರು.

ಭಾರತ ಸಾರಥಿ
25/04/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅದ್ದೂರಿಯಾಗಿ ನಡೆದ ವರದಕ್ಷಿಣೆ ಹಾಸ್ಯ ನಾಟಕೋತ್ಸವ






ಬೆಂಗಳೂರು

ನಗರದ ಮಲ್ಲೇಶ್ವರಂನ ಸೇವಾ ಸದನ ಸಭಾಂಗಣದಲ್ಲಿ ಬಿರಾದರ್ ಮಿತ್ರ ಮಂಡಳಿ ವತಿಯಿಂದ ಡಾ. ರಾಜಕುಮಾರ್ ಅವರ ಹುಟ್ಟುಹಬ್ಬದ ಅಂಗವಾಗಿ ಏಕದಿನ ನಾಟಕೋತ್ಸವವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ರಾಜಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಬಳಿಕ "ಗೆಜ್ಜೆ ಹೆಜ್ಜೆ" ತಂಡದಿಂದ ವಿಶೇಷ ಸಂಗೀತ ಕಾರ್ಯಕ್ರಮ ನಡೆಯಿತು.

ಈ ನಾಟಕೋತ್ಸವವನ್ನು ಹಾಸನ ಜಿಲ್ಲೆಯ ವಿಶೇಷ ಭೂಸ್ವಾಧೀನಾಧಿಕಾರಿ ಶ್ರೀ ಮಂಜುನಾಥ ಅವರು ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗಾನ ಗಾರುಡಿಗ ಗುರುರಾಜ್ ಹೊಸಕೋಟೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಹಿರಿಯ ಕಲಾವಿದರಾದ ಶಂಕರ್ ಭಟ್, ಶಿವಕುಮಾರ್ ಆರಾಧ್ಯ, ಮೈಸೂರು ರಮಾನಂದ, ನಟ–ನಿರ್ಮಾಪಕ ಗಂಡಸಿ ಸದಾನಂದ ಸ್ವಾಮಿ, ಕರ್ನಾಟಕ ನ್ಯೂಸ್ ಬಿಟ್ ಮುಖ್ಯಸ್ಥ ನಾಗರಾಜ್ ಅರೆಹೊಳೆ ಉಪಸ್ಥಿತರಿದ್ದರು.

ಬಿರಾದರ್ ಮಂಡಳಿಯ ಸಂಸ್ಥಾಪಕ ವೈಜನಾಥ್ ಬಿರಾದರ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಅನೇಕ ಗಣ್ಯರು ಭಾಗವಹಿಸಿ ಮೆರುಗು ತಂದರು. ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಅಬಕಾರಿ ನೀತಿ ಕುರಿತು ಅನಂತ್‌ಅಯ್ಯರ್ ಪ್ರತಿಕ್ರಿಯೆ

ಬೆಂಗಳೂರು

ಅನಂತ್ ಎಸ್ ಅಯ್ಯರ್ ಅವರು ಕರ್ನಾಟಕದ ಪ್ರಸ್ತಾವಿತ ಅಬಕಾರಿ ನೀತಿ ಬದಲಾವಣೆಗಳ ಕುರಿತು ಪ್ರತಿಕ್ರಿಯೆ ನೀಡುತ್ತಾ, ಈ ನೀತಿ ಯಾವುದೇ ಒಂದು ಮದ್ಯ ವರ್ಗಕ್ಕೆ, ವಿಶೇಷವಾಗಿ ಬಿಯರ್‌ಗೆ, ಹೆಚ್ಚು ಅನುಕೂಲವಾಗುವಂತೆ ರೂಪಗೊಳ್ಳಬಾರದು ಎಂದು ಹೇಳಿದ್ದಾರೆ.



ಪಾನೀಯಗಳಲ್ಲಿ ಆಲ್ಕೋಹಾಲ್ ವ್ಯವಸ್ಥೆಯ ಪರಿಚಯವು ಪ್ರಗತಿಪರ ಹೆಜ್ಜೆಯಾಗಿದ್ದು, ಸರ್ಕಾರವು ಕ್ಷೇತ್ರದಲ್ಲಿ ಸುಧಾರಣೆ ತರಲು ಹೊಂದಿರುವ ಉದ್ದೇಶವನ್ನು ಇದು ತೋರಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಅವರ ಪ್ರಕಾರ, ಈ ನೀತಿಯನ್ನು ರೂಪಿಸುವಾಗ ಮೂರು ಪ್ರಮುಖ ಅಂಶಗಳಲ್ಲಿ ಸಮತೋಲನ ಸಾಧಿಸುವುದು ಅಗತ್ಯವಾಗಿದೆ ಗ್ರಾಹಕರಿಗೆ ಕೈಗೆಟುಕುವ ಬೆಲೆ, ವಿಸ್ತರಣಾಶೀಲ ಉತ್ಪಾದನೆಯೊಂದಿಗೆ ಉದ್ಯಮದ ದೀರ್ಘಕಾಲಿಕತೆ, ಹಾಗೂ ಸರ್ಕಾರದ ಆದಾಯದ ಗುಣಮಟ್ಟ. ಕರ್ನಾಟಕದಲ್ಲಿ ದೇಶೀಯ ಮದ್ಯದಿಂದ ಗುಣಮಟ್ಟದ ನಡೆದಿರುವ ಪರಿವರ್ತನೆ ಒಂದು ಪ್ರಮುಖ ಸಾರ್ವಜನಿಕ ನೀತಿ ಯಶಸ್ಸಾಗಿದ್ದು, ಇದನ್ನು ಕಾಪಾಡಿಕೊಳ್ಳುವುದು ಮುಖ್ಯ ಎಂದು ಅವರು ಒತ್ತಿಹೇಳಿದರು.

ತಳಮಟ್ಟದ ವಿಭಾಗಗಳು ರಾಜ್ಯದ ಒಟ್ಟು ಮಾರಾಟದ 85% ಕ್ಕಿಂತ ಹೆಚ್ಚು ಪಾಲನ್ನು ಹೊಂದಿದ್ದು, ಸಾಮಾನ್ಯ ಗ್ರಾಹಕರಿಗೆ ಅತ್ಯಂತ ಪ್ರಮುಖವಾಗಿದೆ. ಮೇ 2025ರಲ್ಲಿ ಸುಂಕ ಹೆಚ್ಚಳವಾದ ನಂತರ ಈ ವಿಭಾಗಗಳಲ್ಲಿ ಸುಮಾರು 6% ಕುಸಿತ ಕಂಡುಬಂದಿದೆ.

# ಬೆಂಗಳೂರಿನಲ್ಲಿ ವಿಶ್ವ ಅಥ್ಲೆಟಿಕ್ಸ್ ಕೋರ್ಸ್ ಮಾಪನ ಕಾರ್ಯಾಗಾರ

ಬೆಂಗಳೂರು

ವಿಶ್ವ ಅಥ್ಲೆಟಿಕ್ಸ್ ಸಹಯೋಗದೊಂದಿಗೆ ಅಂತಾರಾಷ್ಟ್ರೀಯ ಮ್ಯಾರಥಾನ್ಗಳು ಮತ್ತು ದೂರ ಓಟಗಳ ಸಂಘ 2026 ರ ಏಪ್ರಿಲ್ 20 ರಿಂದ 24 ರವರೆಗೆ ಬೆಂಗಳೂರಿನಲ್ಲಿ ಐದು ದಿನಗಳ ಕೋರ್ಸ್ ಮಾಪನ ಕಾರ್ಯಾಗಾರವನ್ನು ನಡೆಸುತ್ತಿದೆ, ಇದು ಭಾರತದಾದ್ಯಂತ ರಸ್ತೆ ಓಟದ ಮಾಪನದಲ್ಲಿ ತಾಂತ್ರಿಕ ಪರಿಣತಿಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.



ಈ ವಿಶೇಷ, ಆಹ್ವಾನಿತ–ಮಾತ್ರ ಕಾರ್ಯಾಗಾರವು ದೇಶಾದ್ಯಂತದ 14 ಭಾಗವಹಿಸುವವರ ಆಯ್ದ ಗುಂಪನ್ನು ಒಟ್ಟುಗೂಡಿಸಿ ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ಕ್ರೀಡೆಯಾದ ರಸ್ತೆ ಓಟಗಳಿಗೆ ಜಾಗತಿಕವಾಗಿ ಗುರುತಿಸಲ್ಪಟ್ಟ ಕೋರ್ಸ್ ಮಾಪನ ಮಾನದಂಡಗಳಲ್ಲಿ ತೀವ್ರ ತರಬೇತಿಯನ್ನು ಪಡೆಯುತ್ತದೆ.

ಈ ಭಾಗವಹಿಸುವವರ ನಡುವೆ, ಅವರು ಉತ್ತರದ ಲಡಾಖ್ನಿಂದ ದಕ್ಷಿಣದ ಕೊಚ್ಚಿಯಿಂದ ಪಶ್ಚಿಮದ ಅಹಮದಾಬಾದ್ನಿಂದ ಪೂರ್ವದ ತವಾಂಗ್ವರೆಗೆ ಅರ್ಧ ಮಿಲಿಯನ್ ಜನರ ಭಾಗವಹಿಸುವಿಕೆಯೊಂದಿಗೆ ಸುಮಾರು 90 ರೇಸ್ಗಳನ್ನು ಹೊಂದಿದ್ದಾರೆ.

ಕೋರ್ಸ್ ಮಾಪನವು ದೂರ ಓಟದಲ್ಲಿ ನಿರ್ಣಾಯಕ ಅಂಶವಾಗಿದೆ. ಓಟದ ದೂರಗಳು ನಿಖರ, ವಿಶ್ವಾಸಾರ್ಹ ಮತ್ತು ಅಂತಾರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿರುವುದನ್ನು ಖಚಿತಪಡಿಸುತ್ತದೆ.

# ನಿಪ್ಪಾನ್ ಪೇಂಟ್ ಆರ್‌ಸಿಬಿ ಜೊತೆ ವಿಶೇಷ ಸಭೆ

ಬೆಂಗಳೂರು

ನಿಪ್ಪಾನ್ ಪೇಂಟ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಆಟಗಾರರೊಂದಿಗೆ ವಿಶೇಷ ಸಭೆ ಮತ್ತು ಶುಭಾಶಯವನ್ನು ಆಯೋಜಿಸಿದೆ, ಇದು ಅಭಿಮಾನಿಗಳು ಮತ್ತು ಡೀಲರ್ಗಳ ಸಂಬಂಧವನ್ನು ಬಲಪಡಿಸುತ್ತದೆ.

ಏಷ್ಯಾದ ಪ್ರಮುಖ ಬಣ್ಣ ತಯಾರಕರಾದ ನಿಪ್ಪಾನ್ ಪೇಂಟ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ (ಅಲಂಕಾರಿಕ ವಿಭಾಗ), ಬೆಂಗಳೂರಿನ ದಿ ಆರ್‌ಸಿಬಿ ಕೆಫೆಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರಿನ ಆಟಗಾರರೊಂದಿಗೆ ವಿಶೇಷ



'ಮೀಟ್ & ಗ್ರೀಟ್' ಅಧಿವೇಶನವನ್ನು ನಡೆಸಿತು. ತಂಡದೊಂದಿಗಿನ ಅದರ ಸಹ ಪ್ರಾಯೋಜಕತ್ವದ ಭಾಗವಾಗಿ ಆಯೋಜಿಸಲಾದ ಈ ಕಾರ್ಯಕ್ರಮವು ಅಭಿಮಾನಿಗಳು ತಮ್ಮ ನೆಚ್ಚಿನ ಕ್ರಿಕೆಟಿಗರೊಂದಿಗೆ ಸಂವಹನ ನಡೆಸಲು ಸ್ಮರಣೀಯ ವೇದಿಕೆಯನ್ನು ಸೃಷ್ಟಿಸಿತು. ಆಟಗಾರರಾದ ವೆಂಕಟೇಶ್ ಅಯ್ಯರ್, ಜಾಕೋಬ್ ಡಫಿ ಮತ್ತು ಅಭಿನಂದನ್ ಸಿಂಗ್ ಈ ಸಂದರ್ಭವನ್ನು ಅಲಂಕರಿಸಿದರು ಮತ್ತು ಅಭಿಮಾನಿಗಳೊಂದಿಗೆ ಉತ್ಸಾಹಭರಿತ ಮತ್ತು ಸಂವಾದಾತ್ಮಕ ಅಧಿವೇಶನದಲ್ಲಿ ತೊಡಗಿಸಿಕೊಂಡರು.


# ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಕಾಂಪಿಟೆನ್ಸಿ ಸೆಂಟರ್ ಉದ್ಘಾಟನೆ

ಬೆಂಗಳೂರು

ಬಿಟ್ಸ್ ಪಿಲಾನಿ ತನ್ನ ವರ್ಕ್ ಇಂಟಿಗ್ರೇಟೆಡ್ ಲರ್ನಿಂಗ್ ಪ್ರೋಗ್ರಾಮ್ಸ್ ಮೂಲಕ ಬೆಂಗಳೂರಿನಲ್ಲಿ ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಕಾಂಪಿಟೆನ್ಸಿ ಸೆಂಟರ್ ಅನ್ನು ಉದ್ಘಾಟಿಸಿದೆ.

ಚೆನ್ನೈನಲ್ಲಿ ಆಟೋಮೋಟಿವ್ ಕಾಂಪಿಟೆನ್ಸಿ ಸೆಂಟರ್ ಯಶಸ್ವಿಯಾಗಿ ಆರಂಭಿಸಿದ ಬಳಿಕ, ಏಪ್ರಿಲ್ 2026ರಲ್ಲಿ ಬೆಂಗಳೂರಿನಲ್ಲಿ ಸ್ಥಾಪಿಸಲಾದ ಈ ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್ ಕೇಂದ್ರ ಎರಡನೆಯದು.

ಮುಂದಿನ ಹಂತದಲ್ಲಿ ಇಂತಹ ಇನ್ನಷ್ಟು ಕೇಂದ್ರಗಳನ್ನು ಭಾರತದಾದ್ಯಂತ ಸ್ಥಾಪಿಸುವ ಯೋಜನೆ ಕೂಡ ಇದೆ. ಪ್ರಾಯೋಗಿಕ ಕಲಿಕೆ, ಅನ್ವಯಿಕ ಸಂಶೋಧನೆ, ಉದ್ಯಮ ಸಹಯೋಗ ಹಾಗೂ ಬೋಧಕರ ಅಭಿವೃದ್ಧಿಯನ್ನು ಒಂದೇ ಚೌಕಟ್ಟಿನಲ್ಲಿ ಸೇರಿಸುವ ಸಮಗ್ರ ಪರಿಸರ ವ್ಯವಸ್ಥೆಯಾಗಿ ಈ ಕೇಂದ್ರವನ್ನು ವಿನ್ಯಾಸಗೊಳಿಸಲಾಗಿದೆ. ಇದರ ಮೂಲಕ ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ಬೋಧಕರು ನೈಜ ಎಂಜಿನಿಯರಿಂಗ್ ಸವಾಲುಗಳಲ್ಲಿ ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ. ಜೊತೆಗೆ ಸ್ಮಾರ್ಟ್ ಉತ್ಪಾದನೆ ಮತ್ತು ಡಿಜಿಟಲ್ ಕೈಗಾರಿಕಾ ಪರಿವರ್ತನೆಯಲ್ಲಿ ಭಾರತದ ಸಾಮರ್ಥ್ಯವನ್ನು ಹೆಚ್ಚಿಸುವ ಉದ್ದೇಶವೂ ಇದೆ.



# ಆಕಾಶ್ ವಿದ್ಯಾರ್ಥಿಗಳ ಭರ್ಜರಿ ಸಾಧನೆ

ಬೆಂಗಳೂರು

ಜೆಇಇ ಮೇನ್ 2026ರ ಫಲಿತಾಂಶದಲ್ಲಿ ಆಕಾಶ್ ಎಜುಕೇಶನಲ್ ಸರ್ವಿಸಸ್ ಲಿಮಿಟೆಡ್ ಸಂಸ್ಥೆಯ ಕರ್ನಾಟಕದ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿ ರಾಜ್ಯದ ಗಮನ ಸೆಳೆದಿದ್ದಾರೆ. ನಿರಂತರ ಅಭ್ಯಾಸ, ಶಿಸ್ತುಬದ್ಧ ಸಿದ್ಧತೆ ಹಾಗೂ ಸಮರ್ಪಕ ಮಾರ್ಗದರ್ಶನದ ಫಲವಾಗಿ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಉನ್ನತ ಸ್ಥಾನಗಳನ್ನು ಗಳಿಸಿದ್ದಾರೆ.



ಈ ಸಾಧಕರ ಪೈಕಿ ಆದರ್ಶ್ ಕುಮಾರ್ ಬೆಹೆರಾ ಪ್ರಮುಖರಾಗಿದ್ದು, ಇವರು ಅಖಿಲ ಭಾರತ ಮಟ್ಟದಲ್ಲಿ 43ನೇ ರ್‍ಯಾಂಕ್ ಹಾಗೂ ರಾಜ್ಯಮಟ್ಟದಲ್ಲಿ 2ನೇ ಸ್ಥಾನ ಪಡೆದು ಕರ್ನಾಟಕದ ಶ್ರೇಷ್ಠ ಸಾಧಕರಲ್ಲಿ ಒಬ್ಬರಾಗಿದ್ದಾರೆ. ಗಣಿತ ಮತ್ತು ರಸಾಯನಶಾಸ್ತ್ರ ವಿಷಯಗಳಲ್ಲಿ ಶೇಕಡಾ 100 ಅಂಕಗಳನ್ನು ಗಳಿಸಿರುವುದು ಅವರ ವಿಷಯಪಟುತೆಯನ್ನು ತೋರಿಸುತ್ತದೆ.

ಜೆಇಇ ಮೇನ್ 2026ರ ಸೆಷನ್ 2 ಪರೀಕ್ಷೆಯಲ್ಲಿ ಪ್ರಣಿಲ್ ಸಿಂಗ್ಲಾ (211ನೇ ರ್‍ಯಾಂಕ್), ಆಯುಷ್ ಎಸ್. ಕೋಲೇಕರ್ (276ನೇ ರ್‍ಯಾಂಕ್) ಹಾಗೂ ನಮನ್ ಅಗರ್ವಾಲ್ (785ನೇ ರ್‍ಯಾಂಕ್) ರಾಷ್ಟ್ರಮಟ್ಟದ ಮೊದಲ 1000 ವಿದ್ಯಾರ್ಥಿಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಇದರ ಜೊತೆಗೆ ಆದಿತ್ಯ, ಟಿ.ಆರ್.ಎಸ್. ಸಂಜೀತ್, ಜೋಹಾನ್ ಜಾಬ್, ಗುಡಾಲ ಸತ್ಯ ಯಶಸ್ವ್, ಪ್ರಚೇತ್ ಜಲಶಂಕರ್ ಎಂ. ಸೇರಿದಂತೆ ಹಲವರು ಗಮನಾರ್ಹ ಸಾಧನೆ ಮಾಡಿದ್ದಾರೆ.

ಇದು ಕರ್ನಾಟಕದಾದ್ಯಂತ ವಿದ್ಯಾರ್ಥಿಗಳು ಎಷ್ಟೊಂದು ಅಚ್ಚುಕಟ್ಟಾದ ಸಿದ್ಧತೆಯೊಂದಿಗೆ ಪರೀಕ್ಷೆಯನ್ನು ಎದುರಿಸಿದ್ದರು ಎಂಬುದನ್ನು ಸ್ಪಷ್ಟಪಡಿಸುತ್ತದೆ.

ಏಪ್ರಿಲ್ 20, 2026ರಂದು ಪ್ರಕಟವಾದ ಫಲಿತಾಂಶಗಳ ಪ್ರಕಾರ, ಆಕಾಶ್ ಸಂಸ್ಥೆಯ ಕರ್ನಾಟಕದ 15ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದು, ಇವರಲ್ಲಿ ಬಹುತೇಕರು ಜೆಇಇ ಅಡ್ವಾನ್ಸ್ಡ್ ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ.

# ವೇದಾಂತ ಸಮೂಹದ ಬೃಹತ್ ವಿಭಜನೆ: ಷೇರು ಹಂಚಿಕೆ ಮಾಹಿತಿ ಘೋಷಣೆ

ಮುಂಬೈ

ದೇಶದ ಪ್ರಮುಖ ಖನಿಜ ಮತ್ತು ಇಂಧನ ಕಂಪನಿಯಾದ ವೇದಾಂತ ಲಿಮಿಟೆಡ್, ತನ್ನ ವ್ಯವಹಾರಗಳ ವಿಭಜನೆಗೆ ಸಂಬಂಧಿಸಿದಂತೆ ಮಹತ್ವದ ಹೆಜ್ಜೆಯನ್ನಿಟ್ಟಿದೆ.

ಈ ಐತಿಹಾಸಿಕ ವಿಭಜನಾ ಪ್ರಕ್ರಿಯೆಗೆ ಅರ್ಹ ಷೇರುದಾರರನ್ನು ಗುರುತಿಸಲು ಕಂಪನಿಯ ಆಡಳಿತ ಮಂಡಳಿಯು 2026ರ ಮೇ 1 ಅನ್ನು ರೆಕಾರ್ಡ್ ಡೇಟ್ ಆಗಿ ನಿಗದಿಪಡಿಸಿದೆ.

ಕಂಪನಿಯ ಪುನರ್ ಸಂಘಟನೆಯ ಯೋಜನೆಯ ಅಡಿಯಲ್ಲಿ, ವೇದಾಂತ ಸಮೂಹವು ಅಲ್ಯೂಮಿನಿಯಂ, ವಿದ್ಯುತ್, ತೈಲ ಮತ್ತು ಅನಿಲ ಹಾಗೂ ಕಬ್ಬಿಣ ಮತ್ತು ಉಕ್ಕು ವಲಯದ ನಾಲ್ಕು ಪ್ರತ್ಯೇಕ ಸ್ವತಂತ್ರ ಕಂಪನಿಗಳಾಗಿ ಹೊರಹೊಮ್ಮಲಿದೆ. ಈ ಕ್ರಮವು ಹೂಡಿಕೆದಾರರಿಗೆ ನೇರ ಹೂಡಿಕೆಯ ಅವಕಾಶ ಕಲ್ಪಿಸುವುದಲ್ಲದೆ, ಪ್ರತಿಯೊಂದು ಉದ್ಯಮವು ತನ್ನದೇ ಆದ ಸ್ವತಂತ್ರ ಕಾರ್ಯತಂತ್ರದೊಂದಿಗೆ ಮುನ್ನಡೆಯಲು ನೆರವಾಗಲಿದೆ ಎಂದು ಕಂಪನಿ ತಿಳಿಸಿದೆ.

ವಿಭಜನೆಯ ಭಾಗವಾಗಿ ವೇದಾಂತ ಲಿಮಿಟೆಡ್‌ನ ಷೇರುದಾರರಿಗೆ ಪ್ರತೀ ಒಂದು ಷೇರಿಗೆ ಪ್ರತಿಯಾಗಿ ಈ ಕೆಳಗಿನ ಹೊಸ ಕಂಪನಿಗಳ ಷೇರುಗಳನ್ನು ಹಂಚಿಕೆ ಮಾಡಲಾಗುವುದು:

ವಿಭಜನೆಯ ಪ್ರಕ್ರಿಯೆಯಲ್ಲಿ ತಲ್ವಂಡಿ ಸಾಬೊ ಪವರ್ ಲಿಮಿಟೆಡ್ ಅನ್ನು 'ವೇದಾಂತ ಪವರ್' ಎಂದೂ ಮತ್ತು ಮಾಲ್ಕೊ ಎನರ್ಜಿ ಲಿಮಿಟೆಡ್ ಅನ್ನು 'ವೇದಾಂತ ಆಯಿಲ್ ಅಂಡ್ ಗ್ಯಾಸ್' ಎಂದೂ ಮರುನಾಮಕರಣ ಮಾಡಲಾಗುತ್ತಿದೆ.

# ಪ್ರಾರ್ಥನಾ ನಾಗಪ್ಪ ಬಿರಾದಾರ್ ಪಾಟೀಲ್ ಅದ್ಭುತ ಸಾಧನೆ

ಬೆಂಗಳೂರು

ಕರ್ನಾಟಕದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 100 ಶೇಕಡಾ ಅಂಕಗಳನ್ನು ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ ಪ್ರಾರ್ಥನಾ ನಾಗಪ್ಪ ಬಿರಾದಾರ್ ಪಾಟೀಲ್ ಅವರ ಸಾಧನೆಗೆ ಶಿಕ್ಷಣ ಸಂಸ್ಥೆ ಫಿಸಿಕ್ಸ್‌ವಾಲಾ ಗೌರವ ವ್ಯಕ್ತಪಡಿಸಿದೆ.

ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ನಿವಾಸಿಯಾದ ಪ್ರಾರ್ಥನಾ ಅವರು 625ರಲ್ಲಿ 625 ಅಂಕಗಳನ್ನು ಗಳಿಸುವ ಮೂಲಕ ಪ್ರತಿಯೊಂದು ವಿಷಯದಲ್ಲೂ ಪೂರ್ಣ ಅಂಕಗಳನ್ನು ಪಡೆದು ಅಪೂರ್ವ ಸಾಧನೆ ಮಾಡಿದ್ದಾರೆ.

ಈ ಯಶಸ್ಸಿಗೆ ಶಾಲಾ ಶಿಕ್ಷಕರು ಹಾಗೂ ಪೋಷಕರ ಬೆಂಬಲವೇ ಕಾರಣ ಎಂದು ಅವರು ತಿಳಿಸಿದ್ದಾರೆ. ಜೊತೆಗೆ ಆನ್‌ಲೈನ್ ಮೂಲಕ ಮಾರ್ಗದರ್ಶನ ನೀಡಿದ ಶಿಕ್ಷಕರಿಗೂ ಕೃತಜ್ಞತೆ ಸಲ್ಲಿಸಿದ್ದಾರೆ.

"ನಾನು ದಿನನಿತ್ಯದ ಗುರಿಗಳೊಂದಿಗೆ ಅಧ್ಯಯನ ವೇಳಾಪಟ್ಟಿಯನ್ನು ಸಿದ್ಧಪಡಿಸಿಕೊಂಡು ಅದನ್ನು ಕಟ್ಟುನಿಟ್ಟಾಗಿ ಅನುಸರಿಸಿದೆ. ಶಾಲಾ ಶಿಕ್ಷಕರು ಆಂತರಿಕ ಹಾಗೂ ಬಾಹ್ಯ ಪರೀಕ್ಷೆಗಳಿಗೆ ತಯಾರಾಗಲು ಸಾಕಷ್ಟು ಸಹಾಯ ಮಾಡಿದರು. ನನ್ನ ಪೋಷಕರು ಪ್ರತಿಯೊಂದು ಹಂತದಲ್ಲೂ ಬೆಂಬಲಿಸಿದರು," ಎಂದು ಪ್ರಾರ್ಥನಾ ತಿಳಿಸಿದ್ದಾರೆ. ಅವರು ಮುಂದುವರಿದು, "ಆನ್‌ಲೈನ್‌ನಲ್ಲಿ ಫಿಸಿಕ್ಸ್‌ವಾಲಾ ಮೂಲಕ ಅಧ್ಯಯನ ಮಾಡಿದ್ದು, ಪರಿಕಲ್ಪನೆಗಳ ಸ್ಪಷ್ಟತೆ ಪಡೆಯಲು ತುಂಬ ಸಹಾಯವಾಯಿತು.



ಅಭ್ಯಾಸ ಪ್ರಶ್ನೆಗಳು ಹಾಗೂ ಮರುಅವಲೋಕನ ತರಗತಿಗಳು ಸ್ವಯಂ ಅಧ್ಯಯನವನ್ನು ಸುಲಭಗೊಳಿಸಿವೆ," ಎಂದು ಹೇಳಿದರು.

ಕರ್ನಾಟಕ ಎಸ್‌ಎಸ್‌ಎಲ್‌ಸಿ ಪಠ್ಯಕ್ರಮಕ್ಕೆ ವಿಶೇಷವಾಗಿ ರೂಪುಗೊಂಡ ಉಚಿತ ಮಾಡ್ಯೂಲ್‌ಗಳೊಂದಿಗೆ ಫಿಸಿಕ್ಸ್‌ವಾಲಾದ ಉಡಾನ್ ಬ್ಯಾಚ್ ಮೂಲಕ ಪ್ರಾರ್ಥನಾ ತಮ್ಮ ಪರೀಕ್ಷೆಗೆ ಸಿದ್ಧತೆ ನಡೆಸಿದರು. ಶಾಲಾ ತರಗತಿಗಳ ಜೊತೆಗೆ ಹಿಂದಿನ ವರ್ಷದ ಪ್ರಶ್ನೆಪತ್ರಿಕೆಗಳನ್ನು ಪರಿಹರಿಸುವುದು ಹಾಗೂ ಎಲ್ಲಾ ವಿಷಯಗಳಲ್ಲಿ ಅರಿವು ಹೆಚ್ಚಿಸಿಕೊಳ್ಳುವುದಕ್ಕೆ ಹೆಚ್ಚಿನ ಒತ್ತು ನೀಡಿದರು.

<ins>ಇದರ ಜೊತೆಗೆ, ಎಕ್ಸ್‌ಪರ್ಟ್‌ಬುಕ್ ಪಿ ಸರಣಿಯನ್ನು ಪಿ-3 ಮತ್ತು ಪಿ-5 ಮಾದರಿಗಳ ಮೂಲಕ ವಿಸ್ತರಿಸಲಾಗಿದ್ದು, ಸಣ್ಣ ಮತ್ತು ಮಧ್ಯಮ ಮಟ್ಟದ ಉದ್ಯಮಗಳಿಗೆ ಹೆಚ್ಚು ಕಾರ್ಯಕ್ಷಮತೆ ಮತ್ತು ಭವಿಷ್ಯಮುಖಿ ತಂತ್ರಜ್ಞಾನವನ್ನು ಒದಗಿಸುವ ಗುರಿ ಹೊಂದಿದೆ. ಈ ಹೊಸ ಲ್ಯಾಪ್‌ಟಾಪ್ ಸರಣಿಗಳು 'ಚಿಂತೆಯಿಲ್ಲದ ವ್ಯಾಪಾರ' ಎಂಬ ತತ್ವದಡಿ ರೂಪುಗೊಂಡಿದ್ದು, ಕಾರ್ಯಕ್ಷಮತೆ, ಭದ್ರತೆ, ದೀರ್ಘಾಯುಷ್ಯ ಮತ್ತು ಚಲನೆಯ ಸುಗಮತೆಯನ್ನು ಒಟ್ಟುಗೂಡಿಸುವ ಮೂಲಕ ಸಮಗ್ರ ಸೇವಾ ಅನುಭವವನ್ನು ಒದಗಿಸುತ್ತವೆ.</ins>

# ಆಸಸ್‌ನಿಂದ ಅತ್ಯುನ್ನತ ಲ್ಯಾಪ್‌ಟಾಪ್ ಸರಣಿ ಬಿಡುಗಡೆ

ನವದೆಹಲಿ: ಜಾಗತಿಕ ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಸಂಸ್ಥೆಯಾಗಿರುವ ಆಸಸ್, ಕೃತಕ ಬುದ್ಧಿಮತ್ತೆ ಆಧಾರಿತ ತನ್ನ ಹೊಸ ವ್ಯಾಪಾರ ಬಳಕೆಯ ಲ್ಯಾಪ್‌ಟಾಪ್ ಸರಣಿಯನ್ನು ಬಿಡುಗಡೆ ಮಾಡಿದೆ. ಇದರ ಭಾಗವಾಗಿ ಅತ್ಯಾಧುನಿಕ ವೈಶಿಷ್ಟ್ಯಗಳನ್ನು ಒಳಗೊಂಡ 'ಎಕ್ಸ್‌ಪರ್ಟ್‌ಬುಕ್ ಅಲ್ಟ್ರಾ' ಹಾಗೂ ವಿಸ್ತರಿತ 'ಎಕ್ಸ್‌ಪರ್ಟ್‌ಬುಕ್ ಪಿ ಸರಣಿ'ಯನ್ನು ಅನಾವರಣ ಗೊಳಿಸಲಾಗಿದೆ.

ವ್ಯಾಪಾರ ನಾಯಕರು ಮತ್ತು ಉನ್ನತಾಧಿಕಾರಿಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ ಎಕ್ಸ್‌ಪರ್ಟ್‌ಬುಕ್ ಅಲ್ಟ್ರಾ, ಅತ್ಯಂತ ಹಗುರ ವಿನ್ಯಾಸ, ದಿನಪೂರ್ತಿ ಬ್ಯಾಟರಿ ಸಾಮರ್ಥ್ಯ, ಅತ್ಯುನ್ನತ ಕಾರ್ಯಕ್ಷಮತೆ ಮತ್ತು ಆಕರ್ಷಕ ಪ್ರದರ್ಶನವನ್ನು ಒದಗಿಸುತ್ತದೆ. ಇದರಲ್ಲಿ ಉತ್ತಮ ಧ್ವನಿ ಅನುಭವ, ಸುಗಮ ಟೈಪಿಂಗ್ ವ್ಯವಸ್ಥೆ, ಬಲಿಷ್ಠ ದೈಹಿಕ ವಿನ್ಯಾಸ ಮತ್ತು ಉನ್ನತ ಮಟ್ಟದ ಭದ್ರತಾ ವ್ಯವಸ್ಥೆಗಳು ಕೂಡ ಒಳಗೊಂಡಿವೆ.

ಇದರ ಜೊತೆಗೆ, ಎಕ್ಸ್‌ಪರ್ಟ್‌ಬುಕ್ ಪಿ ಸರಣಿಯನ್ನು ಪಿ–3 ಮತ್ತು ಪಿ–5 ಮಾದರಿಗಳ ಮೂಲಕ ವಿಸ್ತರಿಸಲಾಗಿದ್ದು, ಸಣ್ಣ ಮತ್ತು ಮಧ್ಯಮ ಮಟ್ಟದ ಉದ್ಯಮಗಳಿಗೆ ಹೆಚ್ಚು ಕಾರ್ಯಕ್ಷಮತೆ ಮತ್ತು ಭವಿಷ್ಯಮುಖಿ ತಂತ್ರಜ್ಞಾನವನ್ನು ಒದಗಿಸುವ ಗುರಿ ಹೊಂದಿದೆ. ಈ ಹೊಸ




ಲ್ಯಾಪ್‌ಟಾಪ್ ಸರಣಿಗಳು 'ಚಿಂತೆಯಿಲ್ಲದ ವ್ಯಾಪಾರ' ಎಂಬ ತತ್ವದಡಿ ರೂಪುಗೊಂಡಿದ್ದು, ಕಾರ್ಯಕ್ಷಮತೆ, ಭದ್ರತೆ, ದೀರ್ಘಾಯುಷ್ಯ ಮತ್ತು ಚಲನೆಯ ಸುಗಮತೆಯನ್ನು ಒಟ್ಟುಗೂಡಿಸುವ ಮೂಲಕ ಸಮಗ್ರ ಸೇವಾ ಅನುಭವವನ್ನು ಒದಗಿಸುತ್ತವೆ.

ಬಿಡುಗಡೆ ಕುರಿತು ಮಾತನಾಡಿದ ಸಂಸ್ಥೆಯ ಜಾಗತಿಕ ಸಹ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, "ನಮ್ಮ ವಿನ್ಯಾಸ ಚಿಂತನೆ ಮಾನವ ಸಾಮರ್ಥ್ಯವನ್ನು ಅರ್ಥಮಾಡಿಕೊಳ್ಳುವುದರ ಮೇಲೆ ಆಧಾರಿತವಾಗಿದೆ. ಇಂದಿನ ದಿನಗಳಲ್ಲಿ ವ್ಯವಹಾರ ನಡೆಸುವ ವಿಧಾನದಲ್ಲಿ ಮಹತ್ತರ ಬದಲಾವಣೆ ಕಂಡುಬರುತ್ತಿದ್ದು, ಭಾರತದಲ್ಲಿ ಈ ಕೃತಕ ಬುದ್ಧಿಮತ್ತೆ ಆಧಾರಿತ ಕ್ರಾಂತಿಗೆ ಮುನ್ನಡೆಸುವುದರಲ್ಲಿ ನಾವು ಹೆಮ್ಮೆಪಡುತ್ತೇವೆ" ಎಂದು ಹೇಳಿದರು. ಈ ಬಿಡುಗಡೆ ಕಾರ್ಯಕ್ರಮದಲ್ಲಿ ಆಸಸ್ ಸಹ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ಯಾಮ್ಸನ್ ಹು ಹಾಗೂ ಆಸಸ್, ಇಂಟೆಲ್ ಮತ್ತು ಫ್ಲಿಪ್‌ಕಾರ್ಟ್ ಸಂಸ್ಥೆಗಳ ನಾಯಕತ್ವ ತಂಡದ ಸದಸ್ಯರು ಉಪಸ್ಥಿತರಿದ್ದರು. ಖ್ಯಾತ ವಕ್ತಾರ ಮತ್ತು ಉದ್ಯಮಿ ರಾಜ್ ಶಾಮನಿ ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಿ ಹೊಸ ತಂತ್ರಜ್ಞಾನಗಳ ಮಹತ್ವವನ್ನು ವಿವರಿಸಿದರು.

# ಗ್ರಾಮೀಣ ಆರೋಗ್ಯ ಸೇವೆಗೆ ಐಕೆಎಸ್ ಹೆಲ್ತ್ ಹೊಸ ಬಲ

ಬೆಂಗಳೂರು

ಜಾಗತಿಕ ಆರೋಗ್ಯ ಸೇವಾ ತಂತ್ರಜ್ಞಾನ ಕ್ಷೇತ್ರದ ಪ್ರಮುಖ ಸಂಸ್ಥೆಯಾಗಿರುವ ಐಕೆಎಸ್ ಹೆಲ್ತ್ ತನ್ನ ಅಮೆರಿಕದ ಉಪಕಂಪನಿಯಾದ ಇನ್‌ವೆಂಟುರಸ್ ನಾಲೆಡ್ಜ್ ಸೊಲ್ಯೂಷನ್ಸ್ ಮೂಲಕ ಟ್ರೂಬ್ರಿಡ್ಜ್ ಸಂಸ್ಥೆಯನ್ನು ಸ್ವಾಧೀನಪಡಿಸಿಕೊಳ್ಳಲು ಅಂತಿಮ ಒಪ್ಪಂದಕ್ಕೆ ಸಹಿ ಹಾಕಿರುವುದಾಗಿ ಘೋಷಿಸಿದೆ. ಈ ತಂತ್ರಾತ್ಮಕ ಹೆಜ್ಜೆಯು ಗ್ರಾಮೀಣ ಹಾಗೂ ಸಮುದಾಯ ಆಸ್ಪತ್ರೆಗಳಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ವಿಸ್ತರಿಸುವ ಉದ್ದೇಶ ಹೊಂದಿದೆ.

ಅಮೆರಿಕದಲ್ಲಿ ಸುಮಾರು ಐದು ಜನರಲ್ಲಿ ಒಬ್ಬರಿಗೆ ಆರೋಗ್ಯ ಸೇವೆಗೆ ಪ್ರವೇಶದಲ್ಲಿ ಅಡಚಣೆ ಎದುರಾಗುತ್ತಿರುವ ಸಂದರ್ಭದಲ್ಲಿ, ಈ ಒಪ್ಪಂದವು ಮಹತ್ವ ಪಡೆದುಕೊಂಡಿದೆ. ಐಕೆಎಸ್ ಹೆಲ್ತ್ ಸಂಸ್ಥೆಯ ಸಮಗ್ರ ಆರೋಗ್ಯ ಸೇವಾ ಸಾಮರ್ಥ್ಯವನ್ನು ಟ್ರೂಬ್ರಿಡ್ಜ್ ಸಂಸ್ಥೆಯ ಗ್ರಾಮೀಣ ಆಸ್ಪತ್ರೆಗಳ ತಂತ್ರಜ್ಞಾನ ಪರಿಣತಿಯೊಂದಿಗೆ ಸಂಯೋಜಿಸುವ ಮೂಲಕ ಸ್ಥಳೀಯ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವ ನಿರೀಕ್ಷೆಯಿದೆ.

ಈ ಸಂಯೋಜನೆಯಿಂದ ಆದಾಯ ಚಕ್ರ ನಿರ್ವಹಣೆ ಮತ್ತು ಎಲೆಕ್ಟ್ರಾನಿಕ್ ಆರೋಗ್ಯ ದಾಖಲೆ ವ್ಯವಸ್ಥೆಗಳ ಸಾಮರ್ಥ್ಯ ಹೆಚ್ಚಲಿದ್ದು, ರೋಗಿಗಳು ತಮ್ಮ ಊರಿನ ಸಮೀಪದಲ್ಲಿಯೇ ಅಗತ್ಯ ಚಿಕಿತ್ಸೆ ಪಡೆಯಲು ಅನುಕೂಲವಾಗಲಿದೆ. ಜೊತೆಗೆ ಹೊರರೋಗಿ ಮತ್ತು ತುರ್ತು ಚಿಕಿತ್ಸೆ ವಿಭಾಗಗಳ ನಡುವೆ ಸಮನ್ವಯ ಹೆಚ್ಚಿಸುವುದಕ್ಕೂ ಸಹಾಯವಾಗಲಿದೆ.

ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ, ಈ ಸಂಯುಕ್ತ ಸಂಸ್ಥೆ ಆಧುನಿಕ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಮತ್ತು ಮಾನವ ತಜ್ಞರ ಸಹಯೋಗದೊಂದಿಗೆ ಆರೋಗ್ಯ ಸೇವಾ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಯೋಜನೆ ಹೊಂದಿದೆ. ಹೆಚ್ಚಿನ ಪ್ರಮಾಣದ ವೈದ್ಯಕೀಯ ಮತ್ತು ಹಣಕಾಸು ಮಾಹಿತಿಯನ್ನು ಬಳಸಿಕೊಂಡು ಕಾರ್ಯಕ್ಷಮತೆ ಮತ್ತು ಗುಣಮಟ್ಟವನ್ನು ಹೆಚ್ಚಿಸುವತ್ತ ಗಮನ ಹರಿಸಲಾಗುತ್ತದೆ.

ಐಕೆಎಸ್ ಹೆಲ್ತ್ ಸಂಸ್ಥೆಯ ಸಂಸ್ಥಾಪಕ ಮತ್ತು ಜಾಗತಿಕ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಚಿನ್ ಕೆ. ಗುಪ್ತಾ ಅವರು, "ಟ್ರೂಬ್ರಿಡ್ಜ್ ಅನ್ನು ಸ್ವಾಗತಿಸುವ ಮೂಲಕ ಗ್ರಾಮೀಣ ಮತ್ತು ಸಮುದಾಯ ಆಸ್ಪತ್ರೆಗಳಿಗೆ ಅತ್ಯಾಧುನಿಕ ತಂತ್ರಜ್ಞಾನವನ್ನು ಒದಗಿಸಲು ಸಾಧ್ಯವಾಗಲಿದೆ. ಇದು ಎಲ್ಲಾ ವಿಧದ ಆರೋಗ್ಯ ಸಂಸ್ಥೆಗಳಿಗೆ ಸಮಗ್ರ ಸೇವಾ ವ್ಯವಸ್ಥೆಯನ್ನು ನಿರ್ಮಿಸುವ ನಮ್ಮ ದೀರ್ಘಕಾಲದ ದೃಷ್ಟಿಗೆ ಬಲ ನೀಡುತ್ತದೆ," ಎಂದು ತಿಳಿಸಿದ್ದಾರೆ.

ಈ ಒಪ್ಪಂದವು ಗ್ರಾಮೀಣ ಆರೋಗ್ಯ ಸೇವೆಯಲ್ಲಿ ತಂತ್ರಜ್ಞಾನ ಆಧಾರಿತ ಪರಿವರ್ತನೆಗೆ ದಾರಿ ಮಾಡಿಕೊಡಲಿದ್ದು, ಸಮುದಾಯ ಮಟ್ಟದಲ್ಲಿ ಗುಣಮಟ್ಟದ ಚಿಕಿತ್ಸೆ ಲಭ್ಯತೆಯನ್ನು ಹೆಚ್ಚಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

# ಹೈಕಮಾಂಡ್ ನಾಯಕರನ್ನು ಭೇಟಿಯಾಗಿರುವೆ, ಮಾಹಿತಿ ಬಹಿರಂಗ ಮಾಡಲ್ಲ: ಡಿಕೆಶಿ

ನವದೆಹಲಿ

"ನಾನು ಪಕ್ಷದ ನಾಯಕರನ್ನು ಭೇಟಿಯಾಗಿದ್ದೇನೆ. ನಾನು ನಮ್ಮ ಕೆಲಸ ಮಾಡುತ್ತಿರುತ್ತೇನೆ. ಆದರೆ, ಯಾರನ್ನು ಭೇಟಿಯಾಗಿರುವೆ ಎಂದು ಹೇಳುವುದಿಲ್ಲ. ದೆಹಲಿಗೆ ಗಾಳಿ ಕುಡಿಯಲು ಬಂದಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ದೆಹಲಿ ನಾಯಕರಿಗೆ ಚುನಾವಣೆ ಕುರಿತು ವರದಿ ನೀಡುತ್ತೀರಾ ಎಂದು ಕೇಳಿದಾಗ, "ತಮಿಳುನಾಡು, ಕೇರಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಚುನಾವಣೆ ಪ್ರವಾಸ ಮಾಡಿದ್ದೆ. ಎಲ್ಲೆಲ್ಲಿ ಏನಾಗಿದೆ ಎಂದು ನಮ್ಮ ನಾಯಕರಿಗೆ ಮಾಹಿತಿ ನೀಡಬೇಕಿದೆ. ಈ ಮೂರು ರಾಜ್ಯಗಳಲ್ಲಿ ಪ್ರಚಾರ ಮಾಡಲು ಪಕ್ಷ ನನಗೆ ಜವಾಬ್ದಾರಿ ನೀಡಿತ್ತು. ಕರ್ನಾಟಕದಲ್ಲಿ ಚುನಾವಣೆ ಮಾಡುವುದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿಯಾಗಿ ನನ್ನ ಕರ್ತವ್ಯ. ಅದನ್ನು ಮಾಡುತ್ತೇನೆ" ಎಂದು ತಿಳಿಸಿದರು.



ರಾಜ್ಯದಲ್ಲಿ ಬದಲಾವಣೆಗಳ ಬಗ್ಗೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ಜವಾಬ್ದಾರಿ ಸ್ಥಾನದಲ್ಲಿರುವ ನಾನು ಈ ವಿಚಾರವಾಗಿ ಮಾಧ್ಯಮಗಳ ಮುಂದೆ ಚರ್ಚೆ ಮಾಡಲು ಆಗುವುದೇ? ನಾನು ಮಾಧ್ಯಮಗಳ ಮುಂದೆ ಮಾತಾಡುವುದಿಲ್ಲ. ನೀವು ನನ್ನಿಂದ ಈ ಬಗ್ಗೆ ಮಾಹಿತಿ ಪಡೆಯುವ ಪ್ರಯತ್ನವನ್ನೂ ಮಾಡಬೇಡಿ" ಎಂದು ತಿಳಿಸಿದರು.

ಯಾರಿಗಾದರೂ ನೀರು ಕುಡಿಸುತ್ತೀರಾ ಎಂದು ಕೇಳಿದಾಗ, "ಬಿಸಿಲು ಜಾಸ್ತಿ ಇದೆ. ತಮಿಳುನಾಡು, ಪಿರಿಯಾಪಟ್ಟಣಕ್ಕೆ ಹೋದಾಗ ಅಲ್ಲಿ ಬಿಸಿಲು ಹೆಚ್ಚಾಗಿತ್ತು. ಕೇರಳದಲ್ಲಿ ಸ್ವಲ್ಪ ಪರವಾಗಿಲ್ಲ" ಎಂದರು.

ಮುಸ್ಲಿಂ ಸಮುದಾಯದ ಆಕ್ರೋಶದ ಬಗ್ಗೆ ಶಾಸಕರು ಹಾಗೂ ಸಚಿವರು ಸಿಎಂ ಭೇಟಿ ಮಾಡಿ ಈ ವಿಚಾರವಾಗಿ ಮಧ್ಯಪ್ರವೇಶಿಸಿ ಎಂದು ಚರ್ಚೆ ಮಾಡಿದ್ದಾರೆ ಎಂದು ಕೇಳಿದಾಗ, "ಪಕ್ಷದ ತಳಮಟ್ಟದಲ್ಲಿ ನಮಗೆ ಕೆಲವು ಮಾಹಿತಿ ಬಂದಿದೆ. ನಾವು ಎಲ್ಲರೂ ಒಟ್ಟಾಗಿ ಕೆಲಸ ಮಾಡಿಕೊಂಡು ಹೋಗಬೇಕು" ಎಂದರು.

ಸಿಎಂ ಆಪ್ತ ಸಚಿವರು ಬುಧವಾರ ಭೇಟಿ ಮಾಡಿ ಚರ್ಚೆ ಮಾಡಿದ್ದಾರೆ ಎಂದಾಗ, "ನನಗೆ ಈ ಬಗ್ಗೆ ಮಾಹಿತಿ ಇಲ್ಲ. ಯಾರು ಯಾರ ಆಪ್ತರು, ಯಾರಿಗೆ ಆಪ್ತರಲ್ಲ ಎಂದು ನನಗೆ ಗೊತ್ತಿಲ್ಲ. ನಾನು ಈ ಸಭೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ" ಎಂದು ತಿಳಿಸಿದರು. ಹಿರಿಯ ಶಾಸಕರು ಸಂಪುಟ ಪುನಾರಚನೆಗೆ ಆಗ್ರಹಿಸಲು ಮತ್ತೆ ದೆಹಲಿ ಪ್ರವಾಸ ಮಾಡಲಿದ್ದಾರೆ ಎಂದು ಕೇಳಿದಾಗ, "ಕಾದು ನೋಡೋಣ" ಎಂದರು. ವಿವಿಧ ರಾಜ್ಯಗಳ ಚುನಾವಣೆ ಬಗ್ಗೆ ಕೇಳಿದಾಗ, "ತಮಿಳುನಾಡು, ಕೇರಳ, ಅಸ್ಸಾಂ ರಾಜ್ಯಗಳಲ್ಲಿ ವಿಧಾನಸಭೆ ಹಾಗೂ ಕರ್ನಾಟಕದಲ್ಲಿ ಉಪಚುನಾವಣೆ ಮುಗಿಸಿದ್ದೇವೆ. ನಿನ್ನೆ ಕೂಡ ಅಸ್ಸಾಂ ಚುನಾವಣೆ ಸಂಬಂಧ ಜೂಮ್ ಸಭೆ ಮಾಡಿದ್ದೇವೆ. ನಾನು ಮತ್ತೆ ಅಸ್ಸಾಂಗೆ ತೆರಳಲಿದ್ದೇನೆ. ಕೇರಳ ಹಾಗೂ ತಮಿಳುನಾಡಿನಲ್ಲಿ ನಮ್ಮ ಮೈತ್ರಿಕೂಟದೊಂದಿಗೆ ಸರ್ಕಾರ ರಚನೆ ಮಾಡುತ್ತೇವೆ. ಅಸ್ಸಾಂನಲ್ಲಿ ನಮ್ಮ ನಾಯಕರು ಹಾಗೂ ಕಾರ್ಯಕರ್ತರು ಬಹಳಷ್ಟು ಶ್ರಮಪಟ್ಟು ಕೆಲಸ ಮಾಡಿದ್ದಾರೆ. ನಮ್ಮ ಮೈತ್ರಿಕೂಟಕ್ಕೆ ಸಾಕಾರಾತ್ಮಕವಾಗಿದೆ" ಎಂದರು. ದೆಹಲಿ ಭೇಟಿ ಬಗ್ಗೆ ಕೇಳಿದಾಗ, "ಹೈದರಾಬಾದ್ ಗೆ ಕುಟುಂಬ ಸಮೇತ ಹೋಗಿದ್ದೆ, ಅಲ್ಲಿಂದ ದೆಹಲಿಗೆ ಬಂದಿರುವೆ. ದೆಹಲಿಗೆ ಗಾಳಿ ಕುಡಿಯಲು ಬಂದಿಲ್ಲ. ಬೆಂಗಳೂರು ಸಮಸ್ಯೆಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚೆ ಮಾಡಬೇಕಿದೆ ಎಂದರು.

## ಕೆಟಿಎಂನಿಂದ ಹೊಸ ಘೋಷಣೆ

ಬೆಂಗಳೂರು

ವಿಶ್ವದ ಪ್ರಮುಖ ಪ್ರೀಮಿಯಂ ಮೋಟಾರ್‌ಸೈಕಲ್ ತಯಾರಕ ಕೆಟಿಎಂ ತನ್ನ ಜನಪ್ರಿಯ ಮಾದರಿಗಳಾದ ಕೆಟಿಎಂ 390 ಡ್ಯೂಕ್ ಮತ್ತು ಕೆಟಿಎಂ 390 ಅಡ್ವೆಂಚರ್ ಶ್ರೇಣಿಗಳನ್ನು ಹೊಸ 350 ಸಿಸಿ ಇಂಜಿನ್ ರೂಪಾಂತರಗಳೊಂದಿಗೆ ವಿಸ್ತರಿಸುವುದಾಗಿ ಘೋಷಿಸಿದೆ. ಈ ಕ್ರಮವು ಹೆಚ್ಚಿನ ಸಂಖ್ಯೆಯ ಸವಾರರಿಗೆ ಈ ಪರ್ಫಾರ್ಮೆನ್ಸ್ ಬೈಕ್‌ಗಳನ್ನು ಕೈಗೆಟುಕುವಂತೆ ಮಾಡುವ ಉದ್ದೇಶ ಹೊಂದಿದೆ.



ಕೆಟಿಎಂ 390 ಡ್ಯೂಕ್ ಮತ್ತು ಕೆಟಿಎಂ 390 ಅಡ್ವೆಂಚರ್ ಮಾದರಿಗಳು ಚುರುಕಾದ ಡೈನಾಮಿಕ್ಸ್, ಸುಧಾರಿತ ತಂತ್ರಜ್ಞಾನ ಹಾಗೂ ಶಕ್ತಿಶಾಲಿ ಕಾರ್ಯಕ್ಷಮತೆಯಿಂದಾಗಿ ತಮ್ಮ ವಿಭಾಗಗಳಲ್ಲಿ ದೀರ್ಘಕಾಲದಿಂದಲೇ ವಿಶೇಷ ಸ್ಥಾನ ಪಡೆದಿವೆ. ಈಗ 350 ಸಿಸಿ ರೂಪಾಂತರಗಳನ್ನು ಪರಿಚಯಿಸುವ ಮೂಲಕ ಈ ಪರಂಪರೆಯನ್ನು ಮುಂದುವರಿಸಲಾಗುತ್ತಿದೆ.

ಹೊಸ 350 ಸಿಸಿ ಮಾದರಿಗಳು ಶೇಕಡಾ 18ರ ಜಿಎಸ್‌ಟಿ ಕಡಿತದ ವ್ಯಾಪ್ತಿಗೆ ಒಳಪಡುವುದರಿಂದ, ಮೂಲ ಗುಣಲಕ್ಷಣಗಳನ್ನು ಉಳಿಸಿಕೊಂಡೇ ಗ್ರಾಹಕರಿಗೆ ಹೆಚ್ಚು ಕೈಗೆಟುಕುವ ಬೆಲೆಯಲ್ಲಿ ಲಭ್ಯವಾಗಲಿವೆ. ಇದು ಮಧ್ಯಮ ವರ್ಗದ ಸವಾರರಿಗೆ ದೊಡ್ಡ ಅವಕಾಶವನ್ನೇ ಒದಗಿಸಲಿದೆ.

ಈ ಬೈಕ್‌ಗಳು ಕೆಟಿಎಂನ ಪ್ರಸಿದ್ಧ 'ರೆಡಿ ಟು ರೇಸ್' ಗುಣಲಕ್ಷಣವನ್ನು ಉಳಿಸಿಕೊಂಡಿದ್ದು, 41.5 ಪಿಎಸ್ ಪವರ್ ಮತ್ತು 33.5 ಎನ್‌ಎಂ ಟಾರ್ಕ್ ಸಾಮರ್ಥ್ಯವನ್ನು ಹೊಂದಿವೆ. ಜೊತೆಗೆ ಒಂದೇ ರೀತಿಯ ವೀಲ್‌ಬೇಸ್, ಗ್ರೌಂಡ್ ಕ್ಲಿಯರೆನ್ಸ್, ತಂತ್ರಜ್ಞಾನ ಹಾಗೂ ರೈಡಿಂಗ್ ಎರ್ಗೊನಾಮಿಕ್ಸ್‌ನ್ನು ಉಳಿಸಿಕೊಂಡಿವೆ.

ಕೆಟಿಎಂ 390 ಡ್ಯೂಕ್ ನಗರ ಸವಾರಿಗೆ ಸೂಕ್ತವಾದ ಶಾರ್ಪ್ ಮತ್ತು ಆಕ್ರಮಣಕಾರಿ ವಿನ್ಯಾಸವನ್ನು ಹೊಂದಿದರೆ, ಕೆಟಿಎಂ 390 ಅಡ್ವೆಂಚರ್ ದೂರ ಪ್ರಯಾಣ ಮತ್ತು ಆಫ್‌ರೋಡ್ ಸಾಮರ್ಥ್ಯವನ್ನು ಸಮರ್ಥವಾಗಿ ಸಂಯೋಜಿಸುವ ಬೈಕ್ ಆಗಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸಿಕೊಳ್ಳುತ್ತಿದೆ.

# 'ರಾಜ್ಯದಲ್ಲಿ ಅನಿಲ ಪೂರೈಕೆ ಸಮಸ್ಯೆ ಇಲ್ಲ'

ಬೆಂಗಳೂರು

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಭೌಗೋಳಿಕ ಉದ್ವಿಗ್ನತೆಗಳ ನಡುವೆಯೂ ಕರ್ನಾಟಕದಲ್ಲಿ ತೈಲ ಮತ್ತು ಅನಿಲ ಪೂರೈಕೆ ಸ್ಥಿರವಾಗಿದ್ದು, ಸಂಪೂರ್ಣ ನಿಯಂತ್ರಣದಲ್ಲಿದೆ ಎಂದು ತೈಲ ಮಾರುಕಟ್ಟೆ ಕಂಪನಿಗಳು ಸ್ಪಷ್ಟಪಡಿಸಿವೆ. ರಾಜ್ಯದಲ್ಲಿ ಸುಸಂಘಟಿತ ಪೆಟ್ರೋಲಿಯಂ ಮೂಲಸೌಕರ್ಯ ಜಾಲವಿದ್ದು, ಪೂರೈಕೆ ಸರಾಗವಾಗಿ ನಡೆಯುತ್ತಿದೆ ಎಂದು ತಿಳಿಸಲಾಗಿದೆ.

ಭಾರತ ಸರ್ಕಾರದ ವಾರ್ತಾ ಶಾಖೆ ಆಯೋಜಿಸಿದ ಮಾಧ್ಯಮಗೋಷ್ಠಿಯಲ್ಲಿ ಭಾರತೀಯ ತೈಲ, ಭಾರತ್ ಪೆಟ್ರೋಲಿಯಂ, ಹಿಂದೂಸ್ತಾನ್ ಪೆಟ್ರೋಲಿಯಂ ಹಾಗೂ ಗೇಲ್ ಸಂಸ್ಥೆಗಳ ಅಧಿಕಾರಿಗಳು ಭಾಗವಹಿಸಿ ಮಾಹಿತಿ ನೀಡಿದರು. ಈ ವೇಳೆ ಮಾತನಾಡಿದ ಭಾರತೀಯ ತೈಲ ಸಂಸ್ಥೆಯ ಕಾರ್ಯಕಾರಿ ನಿರ್ದೇಶಕ ಸಿದ್ಧಾರ್ಥ ಅಗರವಾಲ್, ರಾಜ್ಯದಲ್ಲಿ 15 ಎಂಎಂಟಿಪಿಎ ಸಾಮರ್ಥ್ಯದ ಸಂಸ್ಕರಣಾಗಾರವಿದ್ದು, ಪೆಟ್ರೋಲ್ ಮತ್ತು




ಡೀಸೆಲ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಇಲ್ಲ ಎಂದು ಹೇಳಿದರು.

ಸಂಸ್ಕರಣಾಗಾರಗಳಿಂದ ಟರ್ಮಿನಲ್, ಡಿಪೋ ಹಾಗೂ ಮಳಿಗೆಗಳವರೆಗೆ ಪೂರೈಕೆ ನಿರಂತರವಾಗಿ ಸಾಗುತ್ತಿದೆ ಎಂದರು.

ಗೃಹಬಳಕೆಯ ಅನಿಲ ಪೂರೈಕೆಗೂ ಸಂಬಂಧಿಸಿದಂತೆ, ರಾಜ್ಯದಲ್ಲಿ ಸಮರ್ಪಕ ಮತ್ತು ನಿರಂತರ ಪೂರೈಕೆ ಇದೆ. ಮಾರ್ಚ್ ತಿಂಗಳಲ್ಲಿ ಆತಂಕದಿಂದ ಬುಕ್ಕಿಂಗ್‌ಗಳು ದಿನಕ್ಕೆ 3.75 ಲಕ್ಷಕ್ಕೆ ಏರಿಕೆಯಾಗಿದ್ದರಿಂದ ಸ್ವಲ್ಪ ವಿಳಂಬ ಉಂಟಾಗಿತ್ತು. ಆದರೆ ಈಗ ಬುಕ್ಕಿಂಗ್‌ಗಳು ದಿನಕ್ಕೆ 3.06 ಲಕ್ಷಕ್ಕೆ ಇಳಿಕೆಯಾಗಿದ್ದು, ವಿತರಣಾ ವ್ಯವಸ್ಥೆ ಸುಧಾರಿಸಿದೆ ಎಂದು ತಿಳಿಸಿದ್ದಾರೆ.

ಡಿಜಿಟಲ್ ವ್ಯವಸ್ಥೆಯ ಬಳಕೆ ಹೆಚ್ಚಾಗಿದ್ದು, ಶೇಕಡಾ 94.5 ರಷ್ಟು ಬುಕ್ಕಿಂಗ್‌ಗಳು ಡಿಜಿಟಲ್ ಮೂಲಕ ನಡೆಯುತ್ತಿವೆ. ಡೆಲಿವರಿ ಅಥೆಂಟಿಕೇಶನ್ ಕೋಡ್ ವ್ಯವಸ್ಥೆಯಿಂದ ಪಾರದರ್ಶಕತೆ ಹೆಚ್ಚಿದ್ದು, ಸಿಲಿಂಡರ್ ಸರಿಯಾದ ಗ್ರಾಹಕರಿಗೆ ತಲುಪುತ್ತಿದೆ ಎಂದು ಹೇಳಿದರು.

ವಾಣಿಜ್ಯ ಅನಿಲ ಪೂರೈಕೆಯಲ್ಲಿ ಆಸ್ಪತ್ರೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಸಾರಿಗೆ ಸೇರಿದಂತೆ ಅಗತ್ಯ ಸೇವೆಗಳಿಗೆ ಆದ್ಯತೆ ನೀಡಲಾಗುತ್ತಿದೆ. ಸಿಎನ್‌ಜಿ ಬಳಕೆ ಹೆಚ್ಚಾಗುತ್ತಿದ್ದು, ನಗರ ಅನಿಲ ವಿತರಣಾ ಜಾಲವೂ ವಿಸ್ತರಿಸಲಾಗುತ್ತಿದೆ.

ಆಟೋ ಅನಿಲ ಬೇಡಿಕೆ ಹೆಚ್ಚಿದ ಹಿನ್ನೆಲೆಯಲ್ಲಿ ತೈಲ ಕಂಪನಿಗಳು ತಮ್ಮ ಸಾಮರ್ಥ್ಯ ಮೀರಿಯೂ ಪೂರೈಕೆ ಮಾಡಲು ಪ್ರಯತ್ನಿಸುತ್ತಿವೆ. ಪ್ರಸ್ತುತ ರಾಜ್ಯದಲ್ಲಿ ತೈಲ ಕಂಪನಿಗಳ ಮಾರುಕಟ್ಟೆ ಪಾಲು ಶೇ.20ರಷ್ಟೇ ಇದ್ದರೂ, ಹೆಚ್ಚಿದ ಬೇಡಿಕೆಯನ್ನು ಪೂರೈಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಗೇಲ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಸಂಜಯಕುಮಾರ ಸಿಂಗ್ ಮಾತನಾಡಿ, ದೇಶದಲ್ಲಿ 5.01 ಲಕ್ಷ ಪಿಎನ್‌ಜಿ ಸಂಪರ್ಕಗಳನ್ನು ಕಲ್ಪಿಸಲಾಗಿದ್ದು, ಇನ್ನಷ್ಟು ವಿಸ್ತರಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು. ಗ್ರಾಹಕರು ಆನ್‌ಲೈನ್ ಅಥವಾ ಕಚೇರಿಗಳ ಮೂಲಕ ಸಂಪರ್ಕ ಪಡೆಯಬಹುದು ಎಂದು ತಿಳಿಸಿದರು.

ಪಿಐಬಿ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ. ರವೀಂದ್ರ ಮಾತನಾಡಿ, ಪಿಎನ್‌ಜಿ ಬಳಕೆಗೆ ಉತ್ತೇಜನ ನೀಡುವುದು ಅಗತ್ಯವಾಗಿದ್ದು, ಇದು ಕಡಿಮೆ ವೆಚ್ಚದಾಯಕ ಹಾಗೂ ಸುಲಭ ಬಳಕೆಯ ವ್ಯವಸ್ಥೆಯಾಗಿದೆ ಎಂದು ಹೇಳಿದರು.

## 'ರಸ್ತೆ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ'

ಬೆಂಗಳೂರು

ಸದಾಶಿವನಗರ ಪೊಲೀಸ್ ಠಾಣೆಯಿಂದ ಹೊರವರ್ತುಲ ರಸ್ತೆಯವರೆಗೆ ಸುಮಾರು 3.55 ಕಿಮೀ ವ್ಯಾಪ್ತಿಯ ರಸ್ತೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ಅವರು ಅಧಿಕಾರಿಗಳಿಗೆ ಸೂಚಿಸಿದರು.



ಮಲ್ಲೇಶ್ವರಂ ವಿಭಾಗದ ಮತ್ತಿಕೆರೆ ಉಪವಿಭಾಗದ ನ್ಯೂ ಬಿ.ಇ.ಎಲ್ ರಸ್ತೆ ಪ್ರದೇಶದಲ್ಲಿ ಸ್ಥಳ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಡಾಂಬರೀಕರಣ ಕಾಮಗಾರಿಯಲ್ಲಿ ಉಂಟಾಗಿರುವ ವಿಳಂಬಕ್ಕೆ ಜಲಮಂಡಳಿಯ ಪೈಪ್‌ಲೈನ್ ಕಾಮಗಾರಿ ಕಾರಣವಾಗಿದ್ದು, ಅದನ್ನು ಮೇ 10ರೊಳಗೆ ಪೂರ್ಣಗೊಳಿಸಿ ತಕ್ಷಣವೇ ಡಾಂಬರೀಕರಣ ಆರಂಭಿಸಲು ನಿರ್ದೇಶಿಸಿದರು.

ಟ್ರೇಡ್ ಲೈಸೆನ್ಸ್ ಇಲ್ಲದೆ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳನ್ನು ಗುರುತಿಸಿ, ದಂಡ ವಿಧಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕಸವನ್ನು ಚರಂಡಿಗಳಿಗೆ ಸುರಿಯದಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಘನತ್ಯಾಜ್ಯ ನಿರ್ವಹಣಾ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು.

# '26ರಂದು ಯಡಿಯೂರಪ್ಪನವರ ಅಭಿಮಾನೋತ್ಸವದ ಭೂಮಿಪೂಜೆ'

ಬೆಂಗಳೂರು

ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಏಪ್ರಿಲ್ 26ರಂದು ಬೆಳಿಗ್ಗೆ 10 ಗಂಟೆಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ತಿಳಿಸಿದ್ದಾರೆ. ಕಾರ್ಯಕ್ರಮದ ಸ್ಥಳಗಳಲ್ಲಿ ಪೆಂಡಾಲ್, ಸ್ಟೇಜ್ ಮುಂತಾದ ವ್ಯವಸ್ಥೆಗಳನ್ನು ಪ್ರಾರಂಭಿಸಲು ಭೂಮಿಪೂಜೆ ನಡೆಯಲಿದೆ ಎಂದರು.

ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ" ದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಭೂಮಿಪೂಜೆಗೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರನ್ನು ಆಹ್ವಾನಿಸಿದ್ದೇವೆ. ಅವರು, ಸಂಸದರು, ಮಾಜಿ ಸಂಸದರು, ಶಾಸಕರು, ಮಾಜಿ ಶಾಸಕರು, ವಿಧಾನಪರಿಷತ್ ಸದಸ್ಯರು, ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ಸೇರಿ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.




ಯಡಿಯೂರಪ್ಪ ಅವರು 50 ವರ್ಷಗಳ ಕಾಲ ರಾಜ್ಯವನ್ನು ಸುತ್ತಿದ್ದಾರೆ. ರೈತರ ಪರವಾಗಿ ಹೋರಾಡಿ, ದೀನದಲಿತರಿಗೆ ನ್ಯಾಯ ಒದಗಿಸಿ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದವರು. ಅವರ ಜೀವನ ಮತ್ತು ಸಮಾಜಸೇವೆ ಕುರಿತು ಅವರ ಅಭಿಮಾನೋತ್ಸವ ಆಚರಿಸಲು ತೀರ್ಮಾನಿಸಿದ್ದೇವೆ ಎಂದರು.

ಈ ಅಭಿಮಾನೋತ್ಸವವು ಚಿತ್ರದುರ್ಗದಲ್ಲಿ ನಡೆಯಲಿದೆ. ಮೇ 9 ರಂದು ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದ ಉದ್ಘಾಟನೆಯನ್ನು ದೇಶದ ಗೃಹಮಂತ್ರಿ ಅಮಿತ್ ಶಾ ಜೀ ಅವರು ನೆರವೇರಿಸಿ ಯಡಿಯೂರಪ್ಪ ಅವರನ್ನು ಸನ್ಮಾನಿಸಲಿದ್ದಾರೆ ಎಂದರು.

ಅಭಿಮಾನೋತ್ಸವದ ಹಿಂದಿನ ದಿನ ಅಂದರೆ 8ರಂದು ಸಂಜೆ 6 ಗಂಟೆಗೆ ಯಡಿಯೂರಪ್ಪನವರ ಪುರಪ್ರವೇಶ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ. ಈ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಸುಮಾರು 10 ಲಕ್ಷಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆ ಇದೆ. ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಸಲು ತಂಡಗಳನ್ನು ರಚಿಸಲಾಗಿದೆ ಎಂದು ವಿವರ ನೀಡಿದರು.

ನಾಡಿನ ಎಲ್ಲಾ ಮಠಾಧೀಶರು, ಮಾಜಿ ಮುಖ್ಯಮಂತ್ರಿಗಳು, ಸಚಿವರು ಮತ್ತು ಗಣ್ಯಮಾನ್ಯರನ್ನು ಈ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುತ್ತಿದೆ. ಯಡಿಯೂರಪ್ಪ ಅವರನ್ನು ಬಲ್ಲ ಸಾಹಿತಿಗಳು, ಒಡನಾಡಿಗಳು, ಕಲಾವಿದರು ಸೇರಿ ಸಮಾಜದ ಎಲ್ಲ ರಂಗದವರು ಭಾಗವಹಿಸುತ್ತಾರೆ ಎಂದು ಹೇಳಿದರು. ಅಲ್ಲದೇ ಸಾರ್ವಜನಿಕರು, ರೈತಾಪಿ ವರ್ಗದವರು ಭಾಗವಹಿಸಲಿದ್ದಾರೆ ಎಂದು ವಿವರಿಸಿದರು.

ಚಿತ್ರದುರ್ಗವು ಕರ್ನಾಟಕದ ಕೇಂದ್ರ ಬಿಂದು. ಆದ್ದರಿಂದ ಆ ಸ್ಥಳವನ್ನು ಆಯ್ಕೆ ಮಾಡಿಕೊಂಡಿದ್ದಾಗಿ ಪ್ರಶ್ನೆಗೆ ಉತ್ತರ ನೀಡಿದರು. ಯಡಿಯೂರಪ್ಪ ಅವರು ಜನನಾಯಕರು. ಬಿಜೆಪಿಯನ್ನು ಕಟ್ಟಿ ಬೆಳೆಸಿದ ನಾಯಕರು ಎಂದು ಹೇಳಿದರು.

ಜನತಾದಳದಿಂದ ಕಾಂಗ್ರೆಸ್ಸಿಗೆ ಬಂದ ಸಿದ್ದರಾಮಯ್ಯನವರು ಬೇರೆಯವರ ಹೆಗಲ ಮೇಲೆ ಕುಳಿತು ಕಾರ್ಯಕ್ರಮ ಮಾಡಿಸಿಕೊಂಡಿದ್ದಾರೆ. ನಮ್ಮದು ಹಾಗಲ್ಲ; ಯಡಿಯೂರಪ್ಪನವರೇ ಕಟ್ಟಿ ಬೆಳೆಸಿದ ಪಕ್ಷ ಇದೆಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ಇದು ಜನರ ಉತ್ಸವ ಎಂದು ತಿಳಿಸಿದರು.

## ಟಿಸಿಎಸ್ ವರ್ಲ್ಡ್ 10ಕೆನಲ್ಲಿ ಉನ್ನತ ಗೌರವದ ಮೇಲೆ ಕಣ್ಣು

ಬೆಂಗಳೂರು

ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೋಡ್ ರೇಸ್ ಟಿಸಿಎಸ್ ವರ್ಲ್ಡ್ 10 ಕೆ ಯ ಮುಂಬರುವ 18ನೇ ಆವೃತ್ತಿಯಲ್ಲಿ ಹಾಲಿ ಚಾಂಪಿಯನ್ ಸಾರಾ ಚೆಲಂಗಟ್ ಮತ್ತು ಅವರ ತಂಡದ ಸಹ ಓಟಗಾರ್ತಿ ಹಾರ್ಬರ್ಟ್ ಕಿಬೆಟ್ ಅವರು ಭಾನುವಾರ




(ಏಪ್ರಿಲ್ 26) ಉಗಾಂಡಾದ ಡಬಲ್ ಪೋಡಿಯಂ ಸ್ಥಾನ ಪಡೆಯುವ ಬಗ್ಗೆ ಆಶಾವಾದಿಯಾಗಿದ್ದಾರೆ.

"ಕಳೆದ ವರ್ಷಕ್ಕೆ ಹೋಲಿಸಿದರೆ ನಾನು ಸಂಪೂರ್ಣವಾಗಿ ಸದೃಢನಾಗಿದ್ದೇನೆ. ಬೆನ್ನು ನೋವಿನ ಹೊರತಾಗಿಯೂ ನಾನು 2025 ಪ್ರಶಸ್ತಿಯನ್ನು ಗೆದ್ದಿದ್ದೇನೆ.

ನಾನು ವೇಗವಾಗಿ ಚೇತರಿಸಿಕೊಂಡಿದ್ದೇನೆ ಮತ್ತು ನನ್ನ ಪ್ರಶಸ್ತಿಯನ್ನು ಉಳಿಸಿಕೊಳ್ಳಲು ಉತ್ತಮ ಸಮಯದಲ್ಲಿ ಪೂರ್ಣಗೊಳಿಸಲು ಸಿದ್ಧನಾಗಿದ್ದೇನೆ" ಎಂದು ಸಾರಾ ಇಂದು ಇಲ್ಲಿ ಸಾಂಪ್ರದಾಯಿಕ ಪೂರ್ವ–ರೇಸ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಹಾರ್ಬರ್ಟ್ ಕಿಬೆಟ್ ಗೆ, ಓಟವು ಅವರ ದೈನಂದಿನ ಜೀವನದ ಒಂದು ಭಾಗವಾಗಿದೆ. ಅವರು ತಮ್ಮ ಮನೆ ಮತ್ತು ಶಾಲೆಯ ನಡುವೆ ಪ್ರಯಾಣಿಸಲು ತಮ್ಮ ಬ್ಯಾಕ್ ಪ್ಯಾಕ್ ನಲ್ಲಿ ಪುಸ್ತಕಗಳ ಹೊರೆಯೊಂದಿಗೆ ತನ್ನನ್ನು ಎಳೆಯಬೇಕಾಗಿತ್ತು. ಅವರ ಪ್ರಾಥಮಿಕ ಶಾಲೆಯಿಂದ ಪ್ರತಿದಿನ ಸುಮಾರು 20 ಕಿ.ಮೀ ಕ್ರಮಿಸುತ್ತಿದ್ದರು, ಇದು ಅವರ ಸಹಿಷ್ಣುತೆಯ ಮಟ್ಟವನ್ನು ವಿಶ್ವ ದರ್ಜೆಯ ಓಟಗಾರನಾಗಿ ಹೆಚ್ಚಿಸಿತು.

# ಸಿಎಂ ಅವರಿಂದ ತೆಂಗಿನ ನಾರಿನ ಉತ್ಪನ್ನ ಸರಬರಾಜಿಗೆ ಚಾಲನೆ



ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾವೇರಿ ನಿವಾಸದ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ ಆಯೋಜಿಸಿದ್ದ ತೆಂಗಿನ ನಾರಿನ ಉತ್ಪನ್ನಗಳಿಗೆ ಸಿಎಂ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ತೆಂಗಿನ ನಾರಿನ ಮ್ಯಾಟ್‌ಗಳು ಮತ್ತು ಇತರೆ ಉತ್ಪನ್ನಗಳಿಗೆ ಬೇಡಿಕೆ ಇದ್ದು ಇದನ್ನು ಪೂರೈಸಲು ದೆಹಲಿಗೆ ಸರಬರಾಜು ಮಾಡುವ ವಾಹನಕ್ಕೆ ಚಾಲನೆ ನೀಡಿದ ಸಿಎಂ ಅವರು ಆಯೋಜಕರಿಗೆ ಶುಭ ಕೋರಿದರು. ನಿಗಮದ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್. ಶಿವಪ್ರಕಾಶ್ ಈ ಕುರಿತು ಮಾಹಿತಿ ನೀಡಿ, ಒಂದು ಲೋಡ್ ಬೆಂಗಳೂರಿನಿಂದ ದೆಹಲಿಗೆ ಕಳುಹಿಸ ಲಾಗುತ್ತಿದೆ.

ಹೊರರಾಜ್ಯಗಳಿಗೆ ಪ್ರತಿ ತಿಂಗಳು ಎರಡು–ಮೂರು ಲೋಡ್ ಕಳುಹಿಸುವ ಗುರಿ ಇದೆ. ಆಗ ತಿಂಗಳಿಗೆ ಸುಮಾರು ರೂ. 3 ಕೋಟಿ ವ್ಯವಹಾರ ಆಗಲಿದೆ. ತೆಂಗಿನಿಂದ ಬಳಸುವ ಉದ್ಯಮ ಶತಮಾನಗಳಿಂದಲೂ ಪ್ರಚಲಿತದಲ್ಲಿತ್ತು. ನಡುವೆ ಇದರ ಪ್ರಭಾವ ಕ್ಷೀಣಿಸಿತ್ತು. ಇದೀಗ ಮತ್ತೆ ಬೇಡಿಕೆ ಹೆಚ್ಚುತ್ತಿದೆ. ಈ ಉದ್ಯಮವನ್ನು ನಂಬಿ ಸುಮಾರು 50 ಸಾವಿರ ಜನರು ಅವಲಂಬಿತರಾಗಿದ್ದಾರೆ. ಅವರಿಗಾಗಿ ಈ ಉದ್ಯಮವನ್ನು ಮಾರುಕಟ್ಟೆಗೆ ಸಂಪರ್ಕ ಕಲ್ಪಿಸುವ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದರು.

ನಾರು ತಯಾರಿಸುವ ಮುನ್ನವೇ ಇದರ ಸಿಪ್ಪೆ ಬೇರೆ ರಾಜ್ಯಗಳಿಗೆ ಸರಬರಾಜಾಗುತ್ತಿದೆ. ಈ ಕಾರಣಕ್ಕಾಗಿ ಪ್ರತಿ ಲೋಡ್‌ನಿಂದ ರೂ. 5 ಸಾವಿರಕ್ಕೂ ಅಧಿಕ ಜಿಎಸ್‌ಟಿ ನಷ್ಟ ಉಂಟಾಗುತ್ತದೆ. ಈಗಾಗಲೇ ತೆಂಗಿನ ನಾರಿನ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಇದೆ. ಮಾರುಕಟ್ಟೆ ಜೊತೆಗೆ ಸಂಪರ್ಕ ಏರ್ಪಡಿಸುವ ಕೆಲಸವನ್ನು ನಿಗಮ ಮಾಡುತ್ತಿದೆ. ಮಾಲ್ಗುಡಿ ಡೇಸ್‌ನ 85 ಘಟಕಗಳಲ್ಲಿ ತೆಂಗಿನ ನಾರಿನ ಉತ್ಪನ್ನಗಳನ್ನು ಪ್ರದರ್ಶಿಸುವ ಮೂಲಕ ಗ್ರಾಹಕರನ್ನು ಆಕರ್ಷಿಸುವ ಕೆಲಸ ಮಾಡಲಾಗುತ್ತದೆ. ಆನ್ ಲೈನ್ ಮೂಲಕ ಇಡೀ ಭಾರತದಾದ್ಯಂತ ಈ ಉದ್ಯಮವನ್ನು ಬೆಳೆಸುವ ಗುರಿ ಇದೆ. ಸಧ್ಯಕ್ಕೆ ದೆಹಲಿಯ ಸ್ಟಾಕರ್ ಗಳು ಇದನ್ನು ತೆಗೆದುಕೊಂಡು ಹೋಗುತ್ತಿದ್ದು ಬೇಡಿಕೆ ಆಧರಿಸಿ ಮುಂದಿನ ದಿನಗಳಲ್ಲಿ ಉದ್ಯಮಕ್ಕೆ ಇನ್ನಷ್ಟು ಉತ್ತೇಜನ ನೀಡುವ ಇರಾದೆ ಇದೆ ಎಂದರು.

ಕರ್ನಾಟಕ ರಾಜ್ಯ ತೆಂಗಿನ ನಾರಿನ ನಿಗಮ ನಿಯಮಿತ 8000 ಮ್ಯಾಟ್ ಗಳನ್ನು ದೆಹಲಿ ಮಾರುಕಟ್ಟೆಗೆ ಕಳುಹಿಸಿಕೊಡಲಾಯಿತು. ಇದೇವೇಳೆ ನಿಗಮದ www. coir Karnataka.in ವೆಬ್ ಸೈಟ್ ಗೆ ಚಾಲನೆ ನೀಡಲಾಯಿತು. ನಿಗಮದ ಅಧ್ಯಕ್ಷರಾದ ನಟರಾಜ್ ಜಾನಕಿರಾಮ್ ಮಾತನಾಡಿ ನಿಗಮದ ಕೆಲಸಗಾರರಿಗೆ ರೂ 10 ರಿಂದ ರೂ 40 ಗೆ ಮಜೂರಿ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.

## ಏನಿದು ತೆಂಗಿನ ನಾರಿನ ಉದ್ಯಮ...?

ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮದ ಉತ್ಪನ್ನಗಳಲ್ಲಿ ಅತ್ಯಂತ ಜನಪ್ರಿಯವಾದದ್ದು 'ಡಚ್ ಮ್ಯಾಟ್'. ಇದು ತೆಂಗಿನಕಾಯಿ ತೊಗಟೆಯಿಂದ ದೊರೆಯುವ ಕಾಯರ್ ನಾರುಗಳಿಂದ ತಯಾರಿಸಲ್ಪಡುವ ವಿಶೇಷ ಮ್ಯಾಟ್. 18ನೇ ಶತಮಾನದಲ್ಲಿ ಭಾರತ ಮತ್ತು ಶ್ರೀಲಂಕಾದಲ್ಲಿ ತಯಾರಿಸಲ್ಪಟ್ಟ ಕಾಯರ್ ಮ್ಯಾಟ್ ಗಳನ್ನು ಡಚ್ ವ್ಯಾಪಾರಿಗಳು ಯುರೋಪಿಗೆ ಸಾಗಾಟ ಮಾಡುತ್ತಿದ್ದರು, ಹೀಗಾಗಿ ಈ ಮ್ಯಾಟ್ ಗಳು 'ಡಚ್ ಮ್ಯಾಟ್' ಎಂದು ಜನಪ್ರಿಯವಾಗಿವೆ.

ನಿಗಮದ ಉತ್ಪಾದನಾ ಘಟಕಗಳಲ್ಲಿ ಡಚ್ ಮ್ಯಾಟ್ ಗಳನ್ನು ತಯಾರಿಸಲು, ಮೊದಲು ತೆಂಗಿನಕಾಯಿ ತೊಗಟೆಯನ್ನು ಸಂಗ್ರಹಿಸಲಾಗುತ್ತದೆ. ಈ ತೊಗಟೆಯನ್ನು ಬಸ್ಟರ್ ಯಂತ್ರದಲ್ಲಿ ಮೃದುಗೊಳಿಸಿ, ನಂತರ ತೊಗಟೆಯನ್ನು ನೀರಿನಲ್ಲಿ ಕನಿಷ್ಠ 7 ದಿನಗಳವರೆಗೆ ನೆನೆಸಿ, ಬಳಿಕ ನಾರುಗಳನ್ನು ಬೇರ್ಪಡಿಸಲಾಗುತ್ತದೆ. ತೆಂಗಿನ ನಾರಿನ ಉದ್ದ ಸರಿ ಸುಮಾರು 7 ರಿಂದ 8 ಇಂಚುಗಳು ಮತ್ತು ದಪ್ಪ 0.1 ರಿಂದ 0.6 ಮಿ.ಮಿ ಗಳಷ್ಟು ಇರುತ್ತದೆ. ಎರಡು ನಾರುಗಳನ್ನು 2 ಪ್ಲೈ ಯಂತ್ರದಲ್ಲಿ ತಿರುಗಿಸಿ ಹುರಿ ತಯಾರಿಸಲಾಗುತ್ತದೆ, ನಂತರ ಹುರಿಗೆ ಬಣ್ಣ ಹಾಕಲಾಗುತ್ತದೆ. ಹುರಿಯನ್ನು ಹಸ್ತಚಾಲಿತ ಮ್ಯಾಟ್ ಗಳ ಫ್ರೇಮ್ ಬಳಸಿ ಡಚ್ ಮ್ಯಾಟ್‌ನ್ನು ಹೆಣೆಯಲಾಗುತ್ತದೆ. ಪ್ರೆಸಿಂಗ ಡಿವೈಸ್‌ನಲ್ಲಿ ಬಿಗಿಗೊಳಿಸಿದ ನಂತರ ಡಚ್ ಮ್ಯಾಟ್ ತಯಾರಾಗುತ್ತದೆ. 14*24 ಇಂಚಿನ ಡಚ್ ಮ್ಯಾಟ್ 900 ಗ್ರಾಂ ತೂಕ ಹೊಂದಿದ್ದು, ಇದೇ ಅಳತೆಯ ಕಾರಿಡಾರ್ ಮ್ಯಾಟ್ 1060 ಗ್ರಾಂ ತೂಕ ಹೊಂದಿರುತ್ತದೆ.

ನಿಗಮದ ಡಚ್ ಮ್ಯಾಟ್‌ಗಳು ಬಲಿಷ್ಠ, ದೀರ್ಘಕಾಲಿಕ, ಪರಿಸರ ಸ್ನೇಹಿ ಹಾಗೂ ಅಲಂಕಾರಿಕ ಗುಣಗಳನ್ನು ಹೊಂದಿವೆ.



ಇವು ದೇಶಾದ್ಯಂತ ಜನಪ್ರಿಯವಾಗಿವೆ. ಉಪ ಹಿಮಾಲಯ ರಾಜ್ಯಗಳಲ್ಲಿ ಡಚ್ ಮ್ಯಾಟ್‌ಗಳಿಗೆ ಹೆಚ್ಚಿನ ಬೇಡಿಕೆ ಇದೆ. ನಿಗಮದ 35 ಉತ್ಪಾದನಾ ಘಟಕಗಳಲ್ಲಿ, ಮುಖ್ಯಮಂತ್ರಿಗಳ ಆಶಯದಂತೆ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವರ ಮಾರ್ಗದರ್ಶನದಲ್ಲಿ ನಿಗಮದ ಅಧ್ಯಕ್ಷರಾದ ನಟರಾಜ್ ಜಾನಕಿರಾಮ್ ಇವರ ಮುಂದಾಳತ್ವದಲ್ಲಿ ಹಸ್ತಚಾಲಿತ ಮ್ಯಾಟ್ ಫ್ರೇಮ್ ಬಳಸಿ ಸುಮಾರು 700 ಗ್ರಾಮೀಣ ಉದ್ಯೋಗ ಸೃಷ್ಠಿಸಲು ಕ್ರಮವಹಿಸಲಾಗುತ್ತಿದೆ.

ನಿಗಮದ ಉತ್ಪನ್ನಗಳ ಮಾರಾಟ ಹೆಚ್ಚಿಸಲು 'coirkarnataka.in' ವೆಬ್‌ಸೈಟ್ ಸಿದ್ದಪಡಿಸಿ ಇದರೊಂದಿಗೆ ಖಾಸಗಿ ಸಹಭಾಗಿತ್ವದಲ್ಲಿ ಡಿಜಿಟಲ್ ಮಾರಾಟ ಸಹಯೊಗಿಯೊಂದಿಗೆ ಒಬಿಗ ಮಾಡಿಕೊಂಡು e-commerce website `coirempower. com' ನ್ನು ಸಿದ್ದಪಡಿಸಲಾಗಿದೆ. ಮಾಲ್ಗುಡಿ ಅಮೃತ್ ಚಹಾ ಇವರ 80ಕ್ಕೂ ಹೆಚ್ಚು ಮಳಿಗೆಗಳಲ್ಲಿ ತೆಂಗಿನ ನಾರಿನ ಉತ್ಪನ್ನಗಳನ್ನು ಪ್ರದರ್ಶಿಸಿ, ಮಾರಾಟವನ್ನು ಉತ್ತೇಜಿಸಲು ಕ್ರಮವಹಿಸಲಾಗುತ್ತಿದೆ. ಕರ್ನಾಟಕ ಸೇರಿದಂತೆ ಹೊರ ರಾಜ್ಯಗಳಾದ ನವ ದೆಹಲಿ, ರಾಜಸ್ಥಾನ, ಗುಜರಾತ್, ಮಹಾರಾಷ್ಟ್ರ,ಗೊವಾ, ಮಧ್ಯಪ್ರದೇಶ, ಜಮ್ಮು ಮತ್ತು ಕಾಶ್ಮೀರ್ ದಲ್ಲಿ Stockist cum Forwarding and Carrying agent ರನ್ನು ನೇಮಿಸಲು ಕ್ರಮವಹಿಸಲಾಗುತ್ತಿದೆ.

ಪರಿಸರ ಸಂರಕ್ಷಣೆ ಮತ್ತು ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಿರುವ ಡಚ್ ಮ್ಯಾಟ್, ಕಾರಿಡಾರ್ ಮ್ಯಾಟ್, ರೊಲಿಂಗ್ ಮ್ಯಾಟ್, ಜಿಯೋ ಟೆಕ್ಸಟೈಲ್ಸ್, ಡೆಸ್ಕ,ಕಾಯರ್ ಹಾಸಿಗೆ ಮತ್ತು ದಿಂಬು ನಿಜವಾದ ಹಸಿರು ಉತ್ಪನ್ನಗಳಾಗಿವೆ, ಇವುಗಳ ಉತ್ಪಾದನೆಯಲ್ಲಿ ತೊಡಗಿರುವ ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮವನ್ನು ಬೆಳೆಸಲು ನಾವೆಲ್ಲಾ ತೆಂಗಿನ ನಾರಿನ ಉತ್ಪನ್ನಗಳನ್ನು ಖರೀದಿಸಿ ಪೋಷಿಸಬೇಕಿದೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬಿಸಿಲಿನ ತಾಪ ಹೆಚ್ಚಾಗಿದ್ದು, ಮನೆಪಟ್ಟಿ ಮತ್ತು ಮನೆಗಣತಿ ಮಾಡುವ ಗಣತಿದಾರರು ವೈಯುಕ್ತಿಕವಾಗಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ತಿಳಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಎಸ್.ಎಂ ಮಂಗಳ, ನಗರಸಭೆ ಆಯುಕ್ತರಾದ ವೆಂಕಟೇಶ್ ಮಾರುತಿ ನಾಗನೂರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಅಕ್ರಮ ಕಟ್ಟಡಕ್ಕೆ ಬುಲ್ಡೋಜರ್ ಗುನ್ನಾ!

ತುಮಕೂರು

ತಾಲ್ಲೂಕಿನ ಹೆಬ್ಬೂರು ಹೋಬಳಿ, ಸಿರಿವರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ರಾಮೇಗೌಡನಪಾಳ್ಯ ಗ್ರಾಮದ ಸರ್ವೆ ನಂ.102 ಮತ್ತು ಗ್ರಾಮ ಠಾಣಾ ಜಾಗದಲ್ಲಿ ಲಕ್ಷ್ಮೀಕಾಂತಯ್ಯ ಬಿನ್ ಸಣ್ಣರಾಮಯ್ಯ ಎಂಬುವವರ ಹೆಸರಿನಲ್ಲಿ ನಮೂದಾಗಿರುವ, 55/45ಅಡಿ ವಿಸ್ತೀರ್ಣ ಇರುವ ಖಾತೆ ನಂ. 78/1 ಅನ್ನು, ಇವರ ಹೆಸರಿಗೆ ಯಾವುದೇ ಮೂಲ ದಾಖಲಾತಿಗಳು ಇಲ್ಲದಿದ್ದರೂ ಅಕ್ರಮವಾಗಿ ಸ್ವಾಧೀನ ಪಡೆದು, ಗ್ರಾಮ ವಂಚಾಯಿತಿ ಅನುಮತಿ ಪಡೆಯದೆ ಅಕ್ರಮವಾಗಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿರುವುದರ ವಿರುದ್ದ ಬೀರಲಿಂಗೇಶ್ವರ ದೇವಸ್ಥಾನದ ಅಡಳಿತ ಮಂಡಳಿಯವರು ಖಾತೆ ನಂ. 78/1 ಅನ್ನು ವಜಾ ಮಾಡಲು ಕೋರಿ ಕಾರ್ಯನಿರ್ವಾಹಕ ಅಧಿಕಾರಿಗಳ ಅರೆನ್ಯಾಯಿಕ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಸದರಿ ಮೇಲ್ಮನವಿಯನ್ನು ಪರಿಶೀಲಿಸಿ, ದೂರುದಾರರು ಸಲ್ಲಿಸಿರುವ ದಾಖಲೆಗಳು ಹಾಗೂ ಎದುರುದಾರರು ಸಲ್ಲಿಸಿರುವ ದಾಖಲಾತಿಗಳನ್ನು ಪರಿಶೀಲಿಸಿ ಮಾನ್ಯ ಪೀಠಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳ, ತಾಲ್ಲೂಕು ಪಂಚಾಯಿತಿ ತುಮಕೂರು ಇವರು ಈ ಮೇಲ್ಮನವಿ ಸಂಬಂಧ ಅಂತಿಮ ಆದೇಶವನ್ನು ದಿನಾಂಕ 4–04–2026 ರಂದು ಹೊರಡಿಸಿದ್ದು, ಆದೇಶದಲ್ಲಿ ಪ್ರತಿವಾದಿ ಲಕ್ಷ್ಮೀಕಾಂತಯ್ಯ ಬಿನ್ ಸಣ್ಣರಾಮಯ್ಯ ರವರ ಹೆಸರಿನಲ್ಲಿರುವ ಸಿರಿವರ ಗ್ರಾಮ ಪಂಚಾಯಿತಿಯ ರಾಮೇಗೌಡನ ಪಾಳ್ಯ ಗ್ರಾಮದ ಕರವಿರ್ಧರಣಾ ಪಟ್ಟಿಯಲ್ಲಿ ಸ್ವತ್ತಿನ ಸಂಖ್ಯೆ 78/1 55–45 ಅಡಿ ವಿಸ್ತೀರ್ಣದ ಸ್ವತ್ತನ್ನು ಕಾನೂನುಬಾಹಿರವಾಗಿ ಯಾವುದೇ ಮೂಲದಾಖಲಾತಿಗಳನ್ನು ಪಡೆಯದೇ ಅಕ್ರಮವಾಗಿ ನಮೂದಿಸಿರುವ ಸ್ವತ್ತಿನ ಸಂಖ್ಯೆ 78/1 ಅನ್ನು ವಜಾಗೊಳಿಸಿ ಆದೇಶ ಪ್ರಕಟಿಸಿರುತ್ತಾರೆ.



ಮಾನ್ಯ ಪೀಠಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ತುಮಕೂರು ಇವರ ಆದೇಶದ ಮೇಲೆ ದಿನಾಂಕ:22.04.2026 ರಂದು ಸಹಾಯಕ ನಿರ್ದೇಶಕರು (ಗ್ರಾಉ) ತಾ.ಪಂ. ತುಮಕೂರು ಮಂಜುನಾಥ್ ಎಸ್ ಎಸ್ ರವರು, ಮಂಜುನಾಥ್ ರಾಜಸ್ವ ನೀರಿಕ್ಷರು ಹೆಬ್ಬೂರು ಹೋಬಳಿ, ಶ್ರೀ ಲಕ್ಷ್ಮಿ ಜೆ, ಪಂ ಅ ಅಧಿಕಾರಿಗಳು , ಪೋಲೀಸ್ ಉಪ ನೀರಿಕ್ಷಕರು ಹೆಬ್ಬೂರು ಪೋಲೀಸ್ ಠಾಣೆ ಹಾಗೂ ಸಿರಿವರ ಗ್ರಾಮದ ಗ್ರಾಮ ಅಡಳಿತಾಧಿಕಾರಿಗಳು, ಸ್ಥಳದಲ್ಲಿ ಹಾಜರಿದ್ದು ತೆರವು ಕಾರ್ಯವನ್ನು ಸುಸೂತ್ರವಾಗಿ ನೇರವೆರಿಸಿದರು ಗ್ರಾಮಸ್ಥರು ಹಾಜರಿದ್ದು ತೆರವು ಕಾರ್ಯಚರಣೆಗೆ ಸಹಕರಿಸಿದರು.

# ಆಟೋ ಚಾಲಕರಿಗೆ ಜಿಬಿಎ ವತಿಯಿಂದ ದಿನಸಿ ಕಿಟ್ ವಿತರಣೆ

ಬೆಂಗಳೂರು

ಇರಾನ್ ಮತ್ತು ಇಸ್ರೇಲ್ ನಡುವಿನ ಯುದ್ಧದ ಹಿನ್ನೆಲೆಯಲ್ಲಿ ಆಟೋ ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿ ಸಂಕಷ್ಟಕ್ಕೆ ಸಿಲುಕಿರುವ ಆಟೋ ಚಾಲಕರಿಗೆ ಸಹಾಯಹಸ್ತ ಚಾಚುವ ನಿಟ್ಟಿನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಶಿರಡಿ ಸಾಯಿಬಾಬಾ ದ್ವಾರಕಾಮಯಿ ಅಭಿವೃದ್ಧಿ ಮಂಡಳಿ ವತಿಯಿಂದ ಆಹಾರ ಪದಾರ್ಥಗಳ ದಿನಸಿ ಕಿಟ್ ವಿತರಿಸಲಾಯಿತು.



ನಗರದ ಡಾ. ರಾಜ್‌ಕುಮಾರ್ ಗಾಜಿನಮನೆಯಲ್ಲಿರುವ ಜಿಬಿಎ ಕೇಂದ್ರ ಕಚೇರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನೂರಾರು ಚಾಲಕರಿಗೆ ಅಗತ್ಯ ಸಾಮಗ್ರಿಗಳನ್ನು ವಿತರಿಸುವ ಮೂಲಕ ನೆರವು ನೀಡಲಾಯಿತು.

ಕಾರ್ಯಕ್ರಮದಲ್ಲಿ ಉಪ ಕಾನೂನು ಅಧಿಕಾರಿ ಜಯಚಂದ್ರ ರೆಡ್ಡಿ, ಜಿಬಿಎ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎ. ಅಮೃತ್ ರಾಜ್ ಹಾಗೂ ಸಾಯಿಶಂಕರ್ ಅವರು ಚಾಲಕರಿಗೆ ಕಿಟ್‌ಗಳನ್ನು ವಿತರಿಸಿದರು.

ಈ ವೇಳೆ ಮಾತನಾಡಿದ ಅಮೃತ್ ರಾಜ್ ಅವರು, "ಇರಾನ್‌ನಿಂದ ಆಟೋ ಗ್ಯಾಸ್ ಪೂರೈಕೆ ಸ್ಥಗಿತಗೊಂಡಿರುವುದರಿಂದ ಆಟೋ ಚಾಲಕರು ಜೀವನೋಪಾಯಕ್ಕೆ ಪರದಾಡುವಂತಾಗಿದೆ. ಆಟೋ ಚಾಲಕರು ಕೇವಲ ಶ್ರಮಜೀವಿಗಳಲ್ಲ, ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾಯಕದಲ್ಲಿ ತೊಡಗಿರುವವರು. ಅವರ ಕಷ್ಟದ ಸಮಯದಲ್ಲಿ ನೆರವಾಗುವುದು ನಮ್ಮ ಸಂಘದ ಕರ್ತವ್ಯ," ಎಂದರು.

ಜಿಬಿಎ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘವು ಕೇವಲ ಆಡಳಿತಕ್ಕೆ ಸೀಮಿತವಾಗದೆ, ನಿರಂತರವಾಗಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ ಎಂದು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಧರ್ಮಸ್ಥಳ: ಕುಡಿಯುವ ನೀರಿನ ಅಭಾವವಿದ್ದಾಗ 1 ಲಕ್ಷ ಲೀಟರ್ ನೀರು ಪೂರೈಕೆ.

ಪ್ರಕೃತಿ ವಿಕೋಪ: ಕೊಡಗು, ಉತ್ತರ ಕರ್ನಾಟಕ ಮತ್ತು ಕೇರಳದ ಪ್ರವಾಹ ಪೀಡಿತರಿಗೆ ದಿನಸಿ ಕಿಟ್ ವಿತರಣೆ.

ಕೋವಿಡ್ ಸಮಯ: ಸಾವಿರಾರು ಕುಟುಂಬಗಳಿಗೆ ಆಹಾರ ಸಾಮಗ್ರಿ ಪೂರೈಕೆ.

ಮಾನವೀಯ ನೆರವು: ಮರದ ಕೊಂಬೆ ಬಿದ್ದು ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಆರ್ಥಿಕ ಸಹಾಯ.

ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳಾದ ಇನ್ನೋವ ಮಂಜುನಾಥ್, ಮಾರ್ಕೆಟ್ ಮಂಜುನಾಥ್, ಕೆ. ನರಸಿಂಹ, ಶ್ರೀಧರ್, ಎನ್.ಎಸ್. ಸೋಮಶೇಖರ್ ಮತ್ತು ಆನಂದ್ ಉಪಸ್ಥಿತರಿದ್ದರು.

# ಕೋರ್ಟ್ ಛೀಮಾರಿ ಹಾಕಿದರೂ ಬಗ್ಗದ ಸರ್ಕಾರ!

ಬೆಂಗಳೂರು



"ರಾಜ್ಯದ ವಿವಿಧೆಡೆ ನಿಯಮಗಳನ್ನು ಗಾಳಿಗೆ ತೂರಿ ಕಾಂಗ್ರೆಸ್ ಭವನಗಳಿಗೆ ಸಿಎ ನಿವೇಶನಗಳನ್ನು ಹಂಚಿಕೆ ಮಾಡಿರುವುದಕ್ಕೆ ಹೈಕೋರ್ಟ್ ಸರ್ಕಾರಕ್ಕೆ ಛೀಮಾರಿ ಹಾಕಿದೆ. ಈ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ವತಿಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು," ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ತಿಳಿಸಿದರು.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿಎ ನಿವೇಶನಗಳ ಹಂಚಿಕೆಯಲ್ಲಿ ನಡೆದಿರುವ ಅಕ್ರಮಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

"ರಾಜಕೀಯ ಪಕ್ಷಗಳಿಗೆ ಸಿಎ ನಿವೇಶನಗಳನ್ನು ನೀಡಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದರು. ಆದರೂ, ಸಚಿವ ಸಂಪುಟವು ತನ್ನ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು, ಕಾನೂನು ಬದಿಗೊತ್ತಿ ಕೇವಲ ಶೇ 5 ರಷ್ಟು ಗೈಡೆನ್ಸ್ ವ್ಯಾಲ್ಯೂ ದರದಲ್ಲಿ ನಿವೇಶನಗಳನ್ನು ನೀಡಿದೆ. ಮಾರುಕಟ್ಟೆ ಮೌಲ್ಯಕ್ಕಿಂತ ಅತ್ಯಂತ ಕಡಿಮೆ ದರಕ್ಕೆ ಜನರ ತೆರಿಗೆ ಹಣದ ಆಸ್ತಿಯನ್ನು ಕಾಂಗ್ರೆಸ್ ಪಾಲಿಗೆ ನೀಡಲಾಗಿದೆ," ಎಂದು ಅರುಣ್ ಆಕ್ರೋಶ ವ್ಯಕ್ತಪಡಿಸಿದರು.

ಈ ಹಗರಣದ ಕುರಿತು ಪ್ರಮುಖ ಅಂಶಗಳನ್ನು ಅವರು ಈ ಕೆಳಗಿನಂತೆ ವಿವರಿಸಿದರು.

ದಾಖಲೆಗಳ ಸಲ್ಲಿಕೆ: ರಾಜ್ಯದಾದ್ಯಂತ ಒಟ್ಟು 21 ಸಿಎ ನಿವೇಶನಗಳನ್ನು ಕಾಂಗ್ರೆಸ್ ಭವನಗಳಿಗೆ ಕಾನೂನುಬಾಹಿರವಾಗಿ ನೀಡಲಾಗಿದೆ.

ಸರ್ಕಾರಕ್ಕೆ ನಷ್ಟ: ಕನಿಷ್ಠ ದರದಲ್ಲಿ ಭೂಮಿ ನೀಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ನಷ್ಟ ಉಂಟಾಗಿದೆ.

ಬಿಜೆಪಿ ಸವಾಲು: "ಬಿಜೆಪಿಗೆ ಒಂದೇ ಒಂದು ಸಿಎ ನಿವೇಶನ ಕೊಟ್ಟಿದ್ದರೆ ತೋರಿಸಲಿ. ಸಂಘ–ಸಂಸ್ಥೆಗಳಿಗೆ ನಿರ್ದಿಷ್ಟ ಉದ್ದೇಶಕ್ಕೆ ತಾತ್ಕಾಲಿಕವಾಗಿ ನೀಡಬಹುದಾದ ನಿವೇಶನಗಳನ್ನು ಕಾಂಗ್ರೆಸ್ ಪಕ್ಷಕ್ಕೆ ಖಾಯಂ ಆಗಿ ನೀಡಲಾಗಿದೆ," ಎಂದು ಅವರು ಕಿಡಿಕಾರಿದರು.

# ಪ್ರಧಾನಿಯನ್ನು 'ಭಯೋತ್ಪಾದಕ' ಎಂದ ಖರ್ಗೆ ವಿರುದ್ಧ ಬಜೆಪಿ ನಾಯಕರ ಕೆಂಡಾಮಂಡಲ

ಬೆಂಗಳೂರು

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ವಿರುದ್ಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನೀಡಿರುವ 'ಭಯೋತ್ಪಾದಕ' ಎಂಬ ಹೇಳಿಕೆಯನ್ನು ಖಂಡಿಸಿ ಬಿಜೆಪಿ ನಾಯಕರು ಗುರುವಾರ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಬೃಹತ್ ಪ್ರತಿಭಟನೆ ನಡೆಸಿದರು. ಖರ್ಗೆ ಅವರು ದೇಶದ ಜನರ ಕ್ಷಮೆ ಕೇಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, "ಇಡೀ ವಿಶ್ವವೇ ಮೋದಿಜೀ ಅವರ ನಾಯಕತ್ವವನ್ನು ಒಪ್ಪಿಕೊಳ್ಳುತ್ತಿರುವಾಗ, ಖರ್ಗೆಯವರು ಇಂತಹ ಕೀಳುಮಟ್ಟದ ಹೇಳಿಕೆ ನೀಡಿರುವುದು ಅಕ್ಷಮ್ಯ. ವಿಶ್ವದ 25ಕ್ಕೂ ಹೆಚ್ಚು ರಾಷ್ಟ್ರಗಳು ಮೋದಿಯವರಿಗೆ ಅತ್ಯುನ್ನತ ಗೌರವ ನೀಡಿವೆ. ಕಾಂಗ್ರೆಸ್ ನಾಯಕರಿಗೆ ಪ್ರಧಾನಿಯವರ ಜನಪ್ರಿಯತೆಯನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ," ಎಂದು ಟೀಕಿಸಿದರು. ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ ಅವರು, "ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಸಂಬಳ ನೀಡಲು ಹಣವಿಲ್ಲದೆ ರಾಜ್ಯದ ಆರ್ಥಿಕ ಪರಿಸ್ಥಿತಿ ಅಧೋಗತಿಗೆ ತಲುಪಿದೆ," ಎಂದರು.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, "ಖರ್ಗೆ ಮತ್ತು ರಾಹುಲ್ ಗಾಂಧಿ ಭಾರತ ವಿರೋಧಿಗಳು. ಇವರು ಜಾರ್ಜ್ ಸೊರೊಸ್ ಅಂತಹ ವಿದೇಶಿ ಶಕ್ತಿಗಳ ಏಜೆಂಟರಂತೆ ನಡೆದುಕೊಳ್ಳುತ್ತಿದ್ದಾರೆ. ಇವರ ಮಾನಸಿಕತೆ ದೇಶದ ಹಿತಾಸಕ್ತಿಗೆ ಮಾರಕವಾಗಿದೆ," ಎಂದು ಆಕ್ಷೇಪಿಸಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, "ಕುಕ್ಕರ್ ಬ್ಲಾಸ್ಟ್ ಆರೋಪಿಯನ್ನು 'ಬ್ರದರ್' ಎಂದು ಕರೆದ ಇತಿಹಾಸ ಕಾಂಗ್ರೆಸ್ಸಿಗರಿಗಿದೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದಾಗ ಸುಮ್ಮನಿದ್ದ ಖರ್ಗೆಯವರು, ಈಗ ದೇಶದ ಪ್ರಧಾನಿಯನ್ನು ಭಯೋತ್ಪಾದಕ ಎನ್ನುತ್ತಿರುವುದು ದೇಶಕ್ಕೆ ಮಾಡಿದ ಅವಮಾನ," ಎಂದು ಗುಡುಗಿದರು.

ಛಲವಾದಿ ನಾರಾಯಣಸ್ವಾಮಿ: "ಖರ್ಗೆಯವರು ತಮ್ಮ ಸ್ವಂತ ಇಚ್ಛೆಯಿಂದ ಮಾತನಾಡುತ್ತಿದ್ದಾರೋ ಅಥವಾ ಸೋನಿಯಾ ಮತ್ತು ರಾಹುಲ್ ಗಾಂಧಿ ಈ ರೀತಿ ಹೇಳಿಸುತ್ತಿದ್ದಾರೋ? ಆರೆಸ್ಸೆಸ್ ಅನ್ನು ವಿಷಸರ್ಪಕ್ಕೆ ಹೋಲಿಸಿ ಕೊಲ್ಲಲು ಪ್ರಚೋದಿಸುವುದು ನಿಮ್ಮ ಮುತ್ಸದ್ದಿತನವೇ?" ಎಂದು ಪ್ರಶ್ನಿಸಿದರು.

ಗೋವಿಂದ ಕಾರಜೋಳ: "ಸೋನಿಯಾ ಗಾಂಧಿಯವರನ್ನು ಮೆಚ್ಚಿಸಲು ತಂದೆ–ಮಗ (ಖರ್ಗೆ ಮತ್ತು ಪ್ರಿಯಾಂಕ್ ಖರ್ಗೆ) ಇಂತಹ ಹೇಳಿಕೆ ನೀಡುತ್ತಿದ್ದಾರೆ. ಈ ವರ್ತನೆಯಿಂದ ಕಾಂಗ್ರೆಸ್ ಪಕ್ಷಕ್ಕೆ 140 ಕೋಟಿ ಜನರ ಶಾಪ ತಟ್ಟಲಿದೆ," ಎಂದು ಭವಿಷ್ಯ ನುಡಿದರು.

ಪ್ರತಿಭಟನೆಯಲ್ಲಿ ಬಿಜೆಪಿಯ ಸಂಸದರು, ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಪಾಲ್ಗೊಂಡು ಕಾಂಗ್ರೆಸ್ ಸರ್ಕಾರದ ಧೋರಣೆಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.




# ಎಂ.ವಿ. ಕೃಷ್ಣಪ್ಪನವರು ರೈತರ ಪ್ರಾತಃ ಸ್ಮರಣೀಯರು: ಶಾಸಕ ಎಸ್.ಟಿ. ಸೋಮಶೇಖರ್ ಶ್ಲಾಘನೆ

ಕೆಂಗೇರಿ

"ಲಕ್ಷಾಂತರ ರೈತರ ಜೀವನೋಪಾಯಕ್ಕೆ ಭದ್ರ ಬುನಾದಿ ಹಾಕಿಕೊಟ್ಟ ಸಹಕಾರ ಕ್ಷೇತ್ರದ ಪಿತಾಮಹ ಎಂ.ವಿ. ಕೃಷ್ಣಪ್ಪನವರು ರಾಜ್ಯದ ಪ್ರತಿಯೊಬ್ಬ ರೈತರಿಗೂ ಪ್ರಾತಃ ಸ್ಮರಣೀಯರಾಗಿದ್ದಾರೆ," ಎಂದು ಯಶವಂತಪುರ ಕ್ಷೇತ್ರದ ಶಾಸಕ ಎಸ್.ಟಿ. ಸೋಮಶೇಖರ್ ಸ್ಮರಿಸಿದರು.

ಕ್ಷೇತ್ರದ ಕೆ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೋಣಿಪುರ ಹಾಲು ಉತ್ಪಾದಕರ ಸಹಕಾರ ಸಂಘದ 25ನೇ ವರ್ಷದ ಬೆಳ್ಳಿ ಹಬ್ಬ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಮ್ಮ ಸಹಕಾರ ಕ್ಷೇತ್ರದ ಪಯಣವನ್ನು ನೆನೆದ ಶಾಸಕರು, "ಸಹಕಾರಿ ಧುರೀಣ ಬಿ.ಎಲ್. ಲಕ್ಕೇಗೌಡರು ನನ್ನನ್ನು ಈ ಕ್ಷೇತ್ರಕ್ಕೆ ಪರಿಚಯಿಸಿದರು. ಸರ್ಕಾರದಿಂದ ರೈತರಿಗೆ ಸಿಗುವ ಸೌಲಭ್ಯಗಳನ್ನು ನೇರವಾಗಿ ತಲುಪಿಸಲು ಸಹಕಾರ ಕ್ಷೇತ್ರವು ಒಂದು ಕೊಂಡಿಯಂತೆ ಕೆಲಸ ಮಾಡುತ್ತದೆ. ಮಹಿಳೆಯರು ಶೂನ್ಯ ಬಡ್ಡಿ ದರದಲ್ಲಿ ಸಾಲ ಪಡೆದು ಗುಡಿ ಕೈಗಾರಿಕೆಗಳ ಮೂಲಕ ಸ್ವಾವಲಂಬಿ ಜೀವನ ನಡೆಸಲು ಇದು ಸಹಕಾರಿಯಾಗಿದೆ," ಎಂದು ತಿಳಿಸಿದರು. ಅಲ್ಲದೆ, ಕ್ಷೇತ್ರದ ಎಲ್ಲಾ ಹಾಲು ಉತ್ಪಾದಕರ ಸಂಘಗಳು ಸ್ವಂತ ಕಟ್ಟಡ ಹೊಂದಲು ಶಾಸಕರ ಅನುದಾನದಿಂದ ಹಣ ನೀಡಲಾಗುತ್ತಿದೆ ಎಂದರು.

ಬೆಂಗಳೂರು ಸಹಕಾರ ಹಾಲು ಒಕ್ಕೂಟದ (ಬಮುಲ್) ನಿರ್ದೇಶಕ ಕೆ.ಎಂ. ಕೃಷ್ಣಯ್ಯ ಮಾತನಾಡಿ, "ಸಹಕಾರ ಕ್ಷೇತ್ರವು ರೈತರ ಸಮಸ್ಯೆಗಳಿಗೆ ಸ್ಪಂದಿಸಲು ಸದಾ ಸಿದ್ಧವಿದೆ. ರಾಸುಗಳ ಆರೋಗ್ಯ ರಕ್ಷಣೆಗಾಗಿ ದಿನದ 24 ಗಂಟೆಯೂ ಸಹಾಯವಾಣಿ ಲಭ್ಯವಿದ್ದು, ಸಂಘದ ವತಿಯಿಂದ ವೈದ್ಯರನ್ನು ನಿಯೋಜಿಸಲಾಗಿದೆ. ರೈತರು ಈ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಸಂಘದ ಬೆಳವಣಿಗೆಗೆ ಸಹಕರಿಸಬೇಕು," ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಗೋಣಿಪುರ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಶಿವರುದ್ರಯ್ಯ, ಉಪಾಧ್ಯಕ್ಷೆ ರಾಜಮ್ಮ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ್, ಸಂಸ್ಥಾಪಕ ಶಿವಾನಂದ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಲಕ್ಷ್ಮಯ್ಯ, ಕೆ.ಎಂ. ಮಹೇಶ್, ಕೃಷ್ಣಮೂರ್ತಿ ಸೇರಿದಂತೆ ಹಲವು ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.



# ಕಿತ್ತಂಡೂರು ಆನಂದ ಮಾರ್ಗ ಶಾಲೆಯಲ್ಲಿ ಉಚಿತ ಆರೋಗ್ಯ ಶಿಬಿರ



ಕೋಲಾರ

ಬದಲಾದ ಜೀವನಶೈಲಿ ಮತ್ತು ಒತ್ತಡದ ಬದುಕಿನ ಪ್ರಸ್ತುತ ದಿನಗಳಲ್ಲಿ ಜನರಲ್ಲಿ ಆರೋಗ್ಯ ಸಮಸ್ಯೆ ಹೆಚ್ಚುತ್ತಿದೆ. ಇದರ ನಿವಾರಣೆಗೆ ಗ್ರಾಮೀಣ ಪ್ರದೇಶಗಳಲ್ಲಿನ ಇಂತಹ ಆರೋಗ್ಯ ಶಿಬಿರಗಳು ಸಹಕಾರಿಯಾಗುತ್ತವೆ ಎಂದು ಆನಂದ ಮಾರ್ಗ ಶಾಲೆಯ ಆಚಾರ್ಯ ಆತ್ಮಬೋದಾನಂದ ಅವದೂತ ಸ್ವಾಮೀಜಿ ತಿಳಿಸಿದರು

ತಾಲೂಕಿನ ಕಿತ್ತಂಡೂರು ಗ್ರಾಮದಲ್ಲಿ ಗುರುವಾರ ಆನಂದ ಮಾರ್ಗ ಶಾಲೆ ಹಾಗೂ ದೇವರಾಜ ಅರಸು ಮೆಡಿಕಲ್ ಕಾಲೇಜು ವತಿಯಿಂದ ನಡೆದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು ಕಾಯಿಲೆ ಬರುವ ಮುನ್ನವೇ ಎಚ್ಚರ ವಹಿಸಿದರೆ ಆಸ್ಪತ್ರೆ, ಮಾತ್ರೆ ಮುಂತಾದ ಕಷ್ಟಗಳಿಂದ ಪಾರಾಗಬಹುದು. ಹಳ್ಳಿಗಳಲ್ಲೂ ಜನರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬೇಕಾದ ಅಗತ್ಯವಿದೆ ಎಂದರು,

ಶಿಬಿರದಲ್ಲಿ ಪ್ರಸೂತಿ ಮತ್ತು ಸ್ತ್ರೀರೋಗ, ಮಕ್ಕಳ ರೋಗ, ಕಣ್ಣು, ಚರ್ಮ, ಕಿವಿ, ಗಂಟಲು ಮಧುಮೇಹ, ರಕ್ತದೊತ್ತಡ , ಇಸಿಜಿ ಮತ್ತು ಸಾಮಾನ್ಯ ಆರೋಗ್ಯ ತಪಾಸಣೆಗಳು ನಡೆದವು ಈ ಸಂದರ್ಭದಲ್ಲಿ ಆನಂದ ಮಾರ್ಗ ಶಾಲೆಯ ಆಚಾರ್ಯ ಪುಣ್ಯಾನಂದ ಅವದೂತ ಸ್ವಾಮೀಜಿ, ಆಚಾರ್ಯ ದೀರಜಾನಂದ ಅವದೂತ ಸ್ವಾಮೀಜಿ, ಶಾಲೆಯ ಅಧ್ಯಕ್ಷ ರಾಮೇಗೌಡ, ಗ್ರಾಪಂ ಮಾಜಿ ಅಧ್ಯಕ್ಷ ಸಂಪತ್ ಕುಮಾರ್, ಕೆಡಿಪಿ ಸದಸ್ಯ ತುರಾಂಡಹಳ್ಳಿ ಟಿ.ಎನ್ ರವಿ, ಕಿತ್ತಂಡೂರು ಅಂಬೇಡ್ಕರ್ ಸಂಘದ ಅಧ್ಯಕ್ಷ ನಾಗರಾಜ್, ಸಚಿನ್, ಗುಟ್ಟಹಳ್ಳಿ ರಮೇಶ್, ತುರಾಂಡಹಳ್ಳಿ ಎನ್ ಶ್ರೀನಿವಾಸ್, ಸೊಣ್ಣಪ್ಪ ಸೇರಿದಂತೆ ವೈದ್ಯರು, ಶಿಕ್ಷಕರು ಸಿಬ್ಬಂದಿ, ಕಿತ್ತಂಡೂರು ಗ್ರಾಮಸ್ಥರು ಮುಂತಾದವರು.

# 'ಜನರಿಗೆ ನೀರಿನ ಮಹತ್ವ ತೋರಿಸಿದ ಮಹನೀಯ ಶ್ರೀ ಭಗೀರಥರು'

ತುಮಕೂರು

ಯಾವುದೇ ಪೂಜೆ ಗಂಗಾ ಪೂಜೆಯಿಂದಲೇ ಆರಂಭವಾಗುತ್ತದೆ ಎನ್ನುವುದನ್ನು ಉಲ್ಲೇಖಿಸಿ, ಶ್ರೀ ಭಗೀರಥರು ತಪಸ್ಸಿನ ಮೂಲಕ ಜನರಿಗೆ ನೀರಿನ ಮಹತ್ವವನ್ನು ತೋರಿಸಿಕೊಟ್ಟಿದ್ದಾರೆ ಎಂದು ತುಮಕೂರು ತಹಶೀಲ್ದಾರ್ ರಾಜೇಶ್ವರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತುಮಕೂರು ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತುಮಕೂರು ಜಿಲ್ಲಾ ಉಪ್ಪಾರ ಸಮಾಜದ ಎಲ್ಲಾ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಗುರುವಾರ ನಗರದ ಡಾ. ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದ್ದ "ಶ್ರೀ ಭಗೀರಥ ಜಯಂತಿ" ಕಾರ್ಯಕ್ರಮದಲ್ಲಿ ಶ್ರೀ ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ದೇವಗಂಗೆಯನ್ನು ಭೂಲೋಕಕ್ಕೆ ತಂದ ಮಹಾಪುಣ್ಯಾತ್ಮರಾದ ಭಗೀರಥರನ್ನು ನೆನಪಿಸಿಕೊಳ್ಳುವುದು ನಮ್ಮ ಭಾಗ್ಯ. ಅವರ ಆದರ್ಶಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು ಹಾಗೂ ಮುಂದಿನ ಪೀಳಿಗೆಗೆ ಶ್ರೀ ಭಗೀರಥರನ್ನು ಪರಿಚಯಿಸಬೇಕು ಎಂದರು.



ಸರ್ಕಾರದಿಂದ ಉಪ್ಪಾರ ಸಮುದಾಯದವರಿಗಾಗಿ ಮೀಸಲಿಟ್ಟಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಅವರು ಮಾತನಾಡಿ, ಶ್ರಮ ಮತ್ತು ಪ್ರಯತ್ನಕ್ಕೆ ಮತ್ತೊಂದು ಹೆಸರೇ ಭಗೀರಥರು. ಭಗೀರಥರು ಶಿವನ ತಪಸ್ಸಿನಿಂದ ಗಂಗೆಯನ್ನು ಭೂಮಿಗೆ ತಂದು ಸಮೃದ್ಧಿ ನೀಡಿದ ಮಹಾನ್ ವ್ಯಕ್ತಿ ಎಂದು ಹೇಳಿದರು. ಉಪ್ಪಾರ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿ, ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ ಸಂಸ್ಕಾರ ಹಾಗೂ ಆದರ್ಶಗಳನ್ನು ಕಲಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸುರೇಶ್ ಕುಮಾರ್, ಉಪ್ಪಾರ ಸಮಾಜದ ಮುಖಂಡರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com
25/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER


# ದಕ್ಷಿಣ ರಾಜ್ಯಗಳಲ್ಲಿ ಮೇ.1ರಿಂದ ಪ್ರಶಿಕ್ಷಣ ವರ್ಗ: ಬಿಜೆಪಿ ಬಲಪಡಿಸಲು ಬಿ.ಎಲ್.ಸಂತೋಷ್ ಪಣ

ಬೆಂಗಳೂರು

ಕಳೆದ ಹಲವಾರು ದಶಕಗಳಿಂದ ಚುನಾವಣೆಗಳು ಬಂದವು–ಹೋದವು. ಈಗ ಮಾತ್ರ ಕಾಲ ಅತ್ಯಂತ ಪಕ್ವವಾಗಿದೆ. ಈ ಕಾರಣಕ್ಕಾಗಿ ದಕ್ಷಿಣ ಭಾರತದಲ್ಲಿ ಬಿಜೆಪಿ ಬೇರು ಗಟ್ಟಿಗೊಳಿಸುವ ಗುರಿಯನ್ನು ಹೊಂದಲಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಹೇಳಿದ್ದಾರೆ.

ಇಲ್ಲಿನ ಖಾಸಗಿ ಹೊಟೆಲ್‌ನಲ್ಲಿ ದಕ್ಷಿಣ ಭಾರತದ ಭಾರತೀಯ ಜನತಾ ಪಕ್ಷದ ವತಿಯಿಂದ ಆಯೋಜಿಸಿದ್ದ ಪಂಡಿತ್ ದೀನದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನದಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ. ಮಹಾಭಿಯಾನ ಉದ್ಘಾಟಿಸಿದ ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು, ತಮ್ಮ ದಿಕ್ಸೂಚಿ ಭಾಷಣದಲ್ಲಿ, ಮುಂದಿನ ಎರಡು ವರ್ಷಗಳಲ್ಲಿ ದಕ್ಷಿಣ ಭಾರತದ ರಾಜ್ಯಗಳಲ್ಲಿ ಬಿಜೆಪಿ ಸಂಘಟನೆಗೆ ಕೈಗೊಳ್ಳಬೇಕಾದ ರೂಪುರೇಷೆಗಳ ಮೇಲೆ ಬೆಳಕು ಚೆಲ್ಲಿ ಕಾರ್ಯಕರ್ತರಲ್ಲಿ



ಸ್ಫೂರ್ತಿ ತುಂಬಿದರು.

ದಕ್ಷಿಣ ಭಾರತದ ಬಿಜೆಪಿಯ ಹೆಬ್ಬಾಗಿಲು ಕರ್ನಾಟಕ ಸೇರಿದಂತೆ ನೆರೆಯ ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು, ಕೇರಳದಲ್ಲಿ ಪಕ್ಷದ ಬೇರುಗಳನ್ನು ಇನ್ನಷ್ಟು ಗಟ್ಟಿಗೊಳಿಸಬೇಕಾಗಿದೆ. ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳಲ್ಲಿ ಭಾರತೀಯ ಜನತಾ ಪಾರ್ಟಿಯ ಪ್ರಭಾವಳಿ ದಾಖಲಿಸಲು ಮೇ 1ರಿಂದ ದಕ್ಷಿಣದ ರಾಜ್ಯಗಳ ಎಲ್ಲ ಜಿಲ್ಲೆಗಳಲ್ಲಿ ಬಿಜೆಪಿ ಜಿಲ್ಲಾಮಟ್ಟದ ಪ್ರಶಿಕ್ಷಣ ವರ್ಗಗಳನ್ನು ನಡೆಸಲು ನಿರ್ಧರಿಸಲಾಗಿದೆ ಎಂದರು.

ವಿಧಾನಸಭೆ ಚುನಾವಣೆ ನಡೆಯುತ್ತಿರುವ ತಮಿಳುನಾಡು ಮತ್ತು ಕೇರಳಂ ರಾಜ್ಯಗಳ ಜತೆಗೆ ಗೋವಾದಲ್ಲೂ ಜೂನ್ ಮೊದಲ ವಾರದಿಂದ ಪ್ರಶಿಕ್ಷಣ ವರ್ಗ ಆರಂಭಿಸಬೇಕಿದೆ. ಆಯಾ ಪ್ರಾದೇಶಿಕ ವಿಷಯಗಳನ್ನು ಮುಂದಿಟ್ಟುಕೊಂಡು ಪಕ್ಷದ ಮಹತ್ವವನ್ನು ಕಾರ್ಯಕರ್ತರಿಗೆ ಮನದಟ್ಟು ಮಾಡಿಕೊಡಬೇಕಿದೆ.

ತಿರಂಗಾ ಯಾತ್ರೆಯಿಂದ ಕರ್ನಾಟಕದಲ್ಲಿ ಬಿಜೆಪಿ ಪ್ರವರ್ಧಮಾನಕ್ಕೆ ಬಂದ ಬಗೆಯನ್ನು ಮನವರಿಕೆ ಮಾಡಿಕೊಡಬೇಕಿದೆ. ನಕ್ಸಲ್ ಚಳವಳಿ ಪ್ರಭಾವ ಹೊಂದಿದ್ದ ಆಂಧ್ರಪ್ರದೇಶದಲ್ಲಿ ಬಿಜೆಪಿ ಬೆಳೆದು ಬಂದ ಹಾದಿಯನ್ನು ಹೊಸ ಕಾರ್ಯಕರ್ತರಿಗೆ ತಿಳಿಸಿಕೊಡಬೇಕು. ದೇಶದಲ್ಲೇ ವಿಶಿಷ್ಟ ರಾಜಕೀಯ ಪರಿಸ್ಥಿತಿ ಇರುವ ಕೇರಳಂ ರಾಜ್ಯದಲ್ಲಿ ಬಿಜೆಪಿ ಬಲವರ್ಧನೆಗೆ ಇರುವ ಮಾರ್ಗಗಳನ್ನು ಕಾರ್ಯಕರ್ತರಿಗೆ ಹೇಳಿಕೊಡಬೇಕು. ಜೊತೆಗೆ ಬಿಜೆಪಿ ಇತಿಹಾಸ, ಹೋರಾಟದ ಹಾದಿಗಳನ್ನು ಹೊಸ ತಲೆಮಾರಿನ ಕಾರ್ಯಕರ್ತರಿಗೆ ಮನನ ಮಾಡಿಕೊಡಬೇಕು ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ಈ ದಿಸೆಯಲ್ಲಿ ಪ್ರಶಿಕ್ಷಣ ವರ್ಗಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಸಭೆಯಲ್ಲಿ ಭಾಗಿಯಾಗಿದ್ದ ಐದು ರಾಜ್ಯಗಳ ಪ್ರಮುಖರಿಗೆ ವಿವಿಧ ಗೋಷ್ಠಿಗಳಲ್ಲಿ ಬಿ.ಎಲ್.ಸಂತೋಷ್ ಮತ್ತು ಹಲವು ಧುರೀಣರಿಂದ ತಿಳಿಸಿಕೊಡಲಾಯಿತು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ಕೇಂದ್ರೀಯ ಮಂಡಳಿ ಸದಸ್ಯ ವಿ.ಸತೀಶ್, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ದಕ್ಷಿಣ ಭಾರತ ವ್ಯಾಪ್ತಿಯ ಆಂಧ್ರಪ್ರದೇಶ, ತೆಲಂಗಾಣ ಸೇರಿದಂತೆ ವಿವಿಧ ರಾಜ್ಯಗಳ ಅಧ್ಯಕ್ಷರು ಸೇರಿದಂತೆ 230 ಜನ ಅಪೇಕ್ಷಿತರು ಈ ಪ್ರಶಿಕ್ಷಣ ಮಹಾಭಿಯಾನದಲ್ಲಿ ಭಾಗವಹಿಸಿದ್ದರು.

# ‘ಇರಾನ್ ದೋಣಿಗಳ ಉಡಾಯಿಸಿ’

ಬೆಂಗಳೂರು

ಇರಾನ್‌ನ ಅರೆಸೈನಿಕ ಕ್ರಾಂತಿಕಾರಿ ಪಡೆಗಳು ಜಲಸಂಧಿಯಲ್ಲಿ ಮೂರು ಸರಕು ಹಡಗುಗಳ ಮೇಲೆ ದಾಳಿ ಮಾಡಿ, ಅವುಗಳಲ್ಲಿ ಎರಡನ್ನು ವಶಪಡಿಸಿಕೊಂಡ ಒಂದು ದಿನದ ನಂತರ ಅಮೆರಿಕದಿಂದ ಈ ಕ್ರಮ ಬಂದಿದೆ. ಹಿಂದೂ ಮಹಾಸಾಗರದಲ್ಲಿ ವಶಪಡಿಸಿಕೊಂಡ ಗಿನಿಯಾ ಧ್ವಜ ಹೊತ್ತ ತೈಲ ಟ್ಯಾಂಕರ್ ಮೆಜೆಸ್ಟಿಕ್ ಎಕ್ಸ್‌ನ ಡೆಕ್‌ನಲ್ಲಿ ಯುಎಸ್ ಪಡೆಗಳು ಇರುವ ವೀಡಿಯೊ ತುಣುಕನ್ನು ರಕ್ಷಣಾ ಇಲಾಖೆ ಗುರುವಾರ ಬಿಡುಗಡೆ ಮಾಡಿತು.

ಈ ನಡುವೆ ಇರಾನ್ ಗೆ ಪೆಂಟಗನ್ ಕೂಡ ಎಚ್ಚರಿಕೆ ನೀಡಿದ್ದು, “ಅಕ್ರಮ ಜಾಲಗಳನ್ನು ಅಡ್ಡಿಪಡಿಸಲು ಮತ್ತು ಇರಾನ್‌ಗೆ ಸಾಮಗ್ರಿ ಬೆಂಬಲ ನೀಡುವ ಹಡಗುಗಳು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತವೆಯೋ ಅಲ್ಲಿ ಅವುಗಳನ್ನು ನಿಷೇಧಿಸಲು ನಾವು ಜಾಗತಿಕ ಕಡಲ ಜಾರಿಯನ್ನು ಮುಂದುವರಿಸುತ್ತೇವೆ” ಎಂದು ಪೆಂಟಗನ್ ಹೇಳಿಕೆ ತಿಳಿಸಿದೆ.

ಶ್ರೀಲಂಕಾ ಮತ್ತು ಇಂಡೋನೇಷ್ಯಾ ನಡುವಿನ ಹಿಂದೂ ಮಹಾಸಾಗರದಲ್ಲಿ ಮೆಜೆಸ್ಟಿಕ್ ಎಕ್ಸ್ ಅನ್ನು ಹಡಗು–ಟ್ರ್ಯಾಕಿಂಗ್ ದತ್ತಾಂಶವು ತೋರಿಸಿದೆ, ಇದು ಹಿಂದೆ ಅಮೆರಿಕನ್ ಪಡೆಗಳು ವಶಪಡಿಸಿಕೊಂಡ ತೈಲ ಟ್ಯಾಂಕರ್ ಟಿಫಾನಿಯಂತೆಯೇ ಇತ್ತು.

ಇದು ಚೀನಾದ ಝೌಶಾನ್‌ಗೆ ಹೋಗುತ್ತಿತ್ತು. ಈ ಹಡಗನ್ನು ಈ ಹಿಂದೆ ಫೋನಿಕ್ಸ್ ಎಂದು ಹೆಸರಿಸಲಾಗಿತ್ತು ಮತ್ತು ಇಸ್ಲಾಮಿಕ್ ಗಣರಾಜ್ಯದ ಮೇಲಿನ ಯುಎಸ್ ನಿರ್ಬಂಧಗಳನ್ನು ಉಲ್ಲಂಘಿಸಿ ಇರಾನಿನ ಕಚ್ಚಾ ತೈಲವನ್ನು ಕಳ್ಳಸಾಗಣೆ ಮಾಡಿದ್ದಕ್ಕಾಗಿ 2024 ರಲ್ಲಿ ಅಮೆರಿಕ ಖಜಾನೆ ಇಲಾಖೆಯಿಂದ ಮಂಜೂರು ಮಾಡಲಾಗಿತ್ತು.

ಏತನ್ಮಧ್ಯೆ ನೌಕೆಗಳನ್ನು ನಪಡಿಸಿಕೊಂಡ ಸುದ್ದಿಯ ಬಗ್ಗೆ ಇರಾನ್‌ನಿಂದ ತಕ್ಷಣದ ಪ್ರತಿಕ್ರಿಯೆ ಬಂದಿಲ್ಲ. ಮಂಗಳವಾರ, ಟ್ರಂಪ್ ಇರಾನಿನ ಬಂದರುಗಳ ಮೇಲೆ ಅಮೆರಿಕದ ದಿಗ್ಬಂಧನವನ್ನು ಕಾಯ್ದುಕೊಳ್ಳುವಾಗ ಕದನ ವಿರಾಮವನ್ನು ವಿಸ್ತರಿಸಿದರು. ಪಾಕಿಸ್ತಾನ ಈ ಹಿಂದೆ ಆಯೋಜಿಸಿದ್ದ ಶಾಂತಿ ಮಾತುಕತೆಗಳು ಶೀಘ್ರದಲ್ಲೇ ಪುನರಾರಂಭಗೊಳ್ಳುವ ಬಗ್ಗೆ ಯಾವುದೇ ಸೂಚನೆ ಇರಲಿಲ್ಲ.

ಅಮೆರಿಕ ಮತ್ತು ಇರಾನ್ ನಡುವಿನ ಬಿಕ್ಕಟ್ಟು ಜಲಸಂಧಿಯ ಮೂಲಕ ಬಹುತೇಕ ಎಲ್ಲಾ ರಫ್ತುಗಳನ್ನು ಪರಿಣಾಮಕಾರಿಯಾಗಿ ಸ್ಥಗಿತಗೊಳಿಸಿದೆ. ಸಧ್ಯಕ್ಕೆ ಈ ಸಮಸ್ಯೆಗೆ ಅಂತ್ಯ ಕಾಣುತ್ತಿಲ್ಲ.

ಗುರುವಾರ, ಇರಾನ್‌ನ ಗಡಿಪಾರು ಮಾಡಲಾದ ಕ್ರೌನ್ ಪ್ರಿನ್ಸ್ ರೆಜಾ ಪಹ್ಲವಿ ಬರ್ಲಿನ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯ ನಂತರ ಕಟ್ಟಡದಿಂದ ಹೊರಬರುವಾಗ ದುಷ್ಕರ್ಮಿಯೋರ್ವ ಕೆಂಪು ದ್ರವವನ್ನು ಸಿಂಪಡಿಸಿದ. ಕೂಡಲೇ ಆರೋಪಿತ ಅಪರಾಧಿಯನ್ನು ಪೊಲೀಸರು ತಕ್ಷಣವೇ ಬಂಧಿಸಿದರು.

ಈ ಕಾರ್ಯಕ್ರಮದ ಸಂದರ್ಭದಲ್ಲಿ ಪಹ್ಲವಿ ಅವರು ಅಮೆರಿಕ ಮತ್ತು ಇರಾನ್ ನಡುವಿನ ಕದನ ವಿರಾಮವನ್ನು ಟೀಕಿಸಿದರು, ಒಪ್ಪಂದವು ಇರಾನ್ ಸರ್ಕಾರದ ನಡವಳಿಕೆ ಬದಲಾಗುತ್ತದೆ ಮತ್ತು “ನೀವು ಇದ್ದಕ್ಕಿದ್ದಂತೆ ವಾಸ್ತವಿಕವಾದಿಗಳಾಗಿ ಮಾರ್ಪಟ್ಟ ಜನರೊಂದಿಗೆ ವ್ಯವಹರಿಸಲಿದ್ದೀರಿ” ಎಂದು ವಾದಿಸಿದರು.


65 ವರ್ಷದ ಪಹ್ಲವಿ ಸುಮಾರು 50 ವರ್ಷಗಳಿಂದ ದೇಶಭ್ರಷ್ಟರಾಗಿದ್ದಾರೆ. ಅವರ ತಂದೆ ಇರಾನ್‌ನ ಷಾ ಅವರನ್ನು ವ್ಯಾಪಕವಾಗಿ ದ್ವೇಷಿಸಲಾಗುತ್ತಿತ್ತು, 1979 ರಲ್ಲಿ ಲಕ್ಷಾಂತರ ಜನರು ಬೀದಿಗಿಳಿದು ಅವರನ್ನು ಅಧಿಕಾರದಿಂದ ಬಲವಂತಪಡಿಸಿದರು. ಆದಾಗ್ಯೂ, ಪಹ್ಲವಿ ತನ್ನ ದೇಶದ ಭವಿಷ್ಯದಲ್ಲಿ ತನ್ನನ್ನು ತಾನು ಒಬ್ಬ ಆಟಗಾರನಾಗಿ ಇರಿಸಿಕೊಳ್ಳಲು

# ಸಾರಿಗೆ ನಿಗಮ ದುಃಸ್ಥಿತಿಗೆ ಬೊಮ್ಮಾಯಿ ಕಾರಣ: ರಾಮಲಿಂಗಾರೆಡ್ಡಿ

ಬೆಂಗಳೂರು

ಒಂದು ಕಾಲಕ್ಕೆ ಸದೃಢವಾಗಿದ್ದ ಸಾರಿಗೆ ನಿಗಮಗಳು ಇಂದು ದುಃಸ್ಥಿತಿಗೆ ಬರಲು ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರೇ ಕಾರಣ. ಅವರ ಅದಕ್ಷ ಆಡಳಿತ, ಪ್ರಯಾಣಿಕರ ಕುರಿತು ಅವರಿಗಿರುವ ಬೇಜವಾಬ್ದಾರಿ, ಅಧಿಕಾರದ ಅಮಲು ಅವರಿಗೆ ಏರಿತ್ತು. ಸಾರಿಗೆ ನೌಕರರ ಹೊಟ್ಟೆಯ ಮೇಲೆ ಹೊಡೆದ ಬಿಜೆಪಿಗರು, ಈಗ ಯಾವ ಮುಖ ಇಟ್ಟುಕೊಂಡು ಉಪದೇಶ ಮಾಡುತ್ತಾರೆ? ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಮ್ಮ ಆಕ್ರೋಶ ಹೊರ ಹಾಕಿದ್ದಾರೆ.

ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಕುರಿತಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಆರೋಪಕ್ಕೆ ತಿರುಗೇಟು ನೀಡಿದ ರಾಮಲಿಂಗಾರೆಡ್ಡಿ ತಮ್ಮ ಸಾಮಾಜಿಕ ಜಾಲತಾಣದಲ್ಲಿ, ಬಿ.ವೈ. ವಿಜಯೇಂದ್ರ ಅವರೇ ನಿಮ್ಮ ನಕಲಿ ಕಾಳಜಿಯ ಮುಖವಾಡ ಕಳಚಿಡಿ. ಸಾರಿಗೆ ನಿಗಮಗಳು ಈಗಿನ ಸ್ಥಿತಿಗೆ ತಲುಪಲು ತಮ್ಮ ಪೂಜ್ಯ ತಂದೆ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರ ಕಾಲದ ಅದಕ್ಷ ಆಡಳಿತವೇ ನೇರ ಕಾರಣ. ಅಧಿಕಾರದಲ್ಲಿದ್ದಾಗ ಅಧಿಕಾರದ ಅಮಲಿನಲ್ಲಿ ನೌಕರರ ಹೊಟ್ಟೆಯ ಮೇಲೆ ಹೊಡೆದ ನೀವು, ಈಗ ಯಾವ ಮುಖ ಇಟ್ಟುಕೊಂಡು



ಉಪದೇಶ ಮಾಡುತ್ತಿದ್ದೀರಿ? ಎಂದು ಪ್ರಶ್ನಿಸಿದ್ದಾರೆ.

ನಿಮಗೆ ವಿಷಯದ ಅರಿವಿಲ್ಲವೆಂದು ನೇರವಾಗಿ ವಿಜಯೇಂದ್ರ ಅವರನ್ನು ತರಾಟೆಗೆ ತೆಗೆದುಕೊಂಡ ಸಚಿವರು, ನಿಮಗೆ ಪ್ರಚಾರದ ಹುಚ್ಚು ಹಿಡಿದಿದೆ. ನಿಮ್ಮಲ್ಲಿರುವುದು ಕೇವಲ ಪ್ರಚಾರ ಹಪಾಹಪಿ. ನಿಮ್ಮ ಹಳೆಯ ಪಾಪದ ರಾಶಿಯನ್ನು ನಾವು ಪದೇಪದೆ ಅಗೆದು ತೆಗೆಯಬೇಕಾಗಿರುವುದು ರಾಜ್ಯದ ಅತಿದೊಡ್ಡ ದುರಂತ. ಇನ್ನಾದರೂ ಜನರನ್ನು ದಾರಿ ತಪ್ಪಿಸುವ ಪೊಳ್ಳು ಹೋರಾಟಗಳನ್ನು ನಿಲ್ಲಿಸಬೇಕು. ನಿಮ್ಮ ಕಾಲದಲ್ಲಿಯೇ ಸಾರಿಗೆ ನಿಗಮಗಳಿಗೆ ಆಗಿರುವ ಅಧಃಪತನಕ್ಕೆ ಕಾರಣರಾರು? ಎನ್ನುವುದನ್ನು ಮೊದಲು ಉತ್ತರ ನೀಡಿ ಎಂದು ತಾಕೀತು ಮಾಡಿದ್ದಾರೆ.

ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಆಡಳಿತದ ಅವಧಿಯ ಅದಕ್ಷ ಆಡಳಿತವೇ ಸಾರಿಗೆ ನಿಗಮಗಳಿಗೆ ಸಂಕಷ್ಟ ತಂದೊಡ್ಡಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಸಂಕಷ್ಟ ಸರಿಪಡಿಸುವ ಕೆಲಸ ಮಾಡುತ್ತಿದೆ. ಸತ್ಯಾಂಶಗಳ ಅರಿವಿಲ್ಲದೇ, ಈ ರೀತಿ ಮಾತನಾಡುವುದು ಬೇಡ. ಸಾರಿಗೆ ಸಂಸ್ಥೆಯ ಇತಿಹಾಸದಲ್ಲೇ ಮೊದಲ ಬಾರಿಗೆ 15 ದಿನಗಳ ಕಾಲ ಮುಷ್ಕರ ಮಾಡಿಸಿ, ಮುಂದೆ ತಿಂಗಳು ಕಾಲ ಮುಷ್ಕರ ಮಾಡುವುದಕ್ಕೆ ಅಡಿಪಾಯ ಹಾಕಿ ಕೊಟ್ಟವರೇ ನೀವು. ಈ ಘನ ಕೀರ್ತಿ ತಮಗೆ ಸಲ್ಲಬೇಕು. ನಿಮ್ಮ ಅವಧಿಯಲ್ಲಿ ಎರಡೆರಡು ಬಾರಿ ಮುಷ್ಕರ ನಡೆದ ದಾಖಲೆಯಿದೆ. ಮುಷ್ಕರದ ಹೆಸರಲ್ಲಿ 3500ಕ್ಕೂ ಹೆಚ್ಚಿನ ನೌಕರರನ್ನು ವಜಾ, ಅಮಾನತು ಮಾಡಿ ಎಫ್ಐಆರ್ ದಾಖಲಿಸಿದ್ದೀರಿ. ಈಗಲೂ ಅವರು ಕೋರ್ಟ್‌ಗಳಿಗೆ ಅಲೆಯುವಂತಾಗಿದೆ.

ಆಗಲೂ ನೌಕರರಿಗೆ ವೇತನ ಸರಿಯಾಗಿ ನೀಡುತ್ತಿರಲಿಲ್ಲ. ವೇತನ ಪರಿಷ್ಕರಿಸಿ ಹಣ ಪಾವತಿಸದೇ ಬಾಕಿ ಇಟ್ಟು ಹೋಗಿದ್ದೀರಿ. ಅದರ ಭಾಗವೇ ಈಗಿನ ನೌಕರರ ಮುಷ್ಕರದ ಕೂಗು.

2020ರಲ್ಲಿ ಆಗಬೇಕಿದ್ದ ವೇತನ ಪರಿಷ್ಕರಣೆಯನ್ನು 2023ರ ಮಾರ್ಚ್‌ನಲ್ಲಿ ಮಾಡಲಾಗಿದೆ. ಈಗ ನೌಕರರ ವೇತನ ಪರಿಷ್ಕರಣೆ ತಡವಾಗಿರುವ ಬಗ್ಗೆ ಮಾತನಾಡುವುದಕ್ಕೆ ನಿಮಗೆ ಯಾವ ನೈತಿಕತೆಯೂ ಇಲ್ಲ. ವೇತನ ಪರಿಷ್ಕರಣೆ ಘೋಷಿಸಿ ಅದಕ್ಕೆ ಅನುದಾನ ಮೀಸಲಿಡಲಿಲ್ಲ.

# ಪರಮೇಶ್ವರ್ ವಿರುದ್ಧ ಎಫ್ಐಆರ್‌ಗೆ ತಡೆ

ಬೆಂಗಳೂರು

“ಹಾಸ್ಯ ಮಾಡುವುದು ಕ್ರಿಮಿನಲ್ ಅಪರಾಧವಾಗುತ್ತದೆಯೇ” ಎಂದು ಪ್ರಶ್ನಿಸಿರುವ ಕರ್ನಾಟಕ ಹೈಕೋರ್ಟ್ ಗೃಹ ಸಚಿವ ಜಿ ಪರಮೇಶ್ವರ್ ವಿರುದ್ಧ ಎಫ್ಐಆರ್ ದಾಖಲಿಸಲು ಆದೇಶಿಸಿದ್ದ ಮ್ಯಾಜಿಸ್ಟ್ರೇಟ್ ಆದೇಶ ಮತ್ತು ಆನಂತರದ ಪ್ರಕ್ರಿಯೆಗೆ ಗುರುವಾರ ತಡೆ ನೀಡಿದೆ.

ತುಮಕೂರು ನಗರದಲ್ಲಿ ಕಳೆದ ವರ್ಷ ಅಕ್ಟೋಬರ್‌ನಲ್ಲಿ ನಡೆದಿದ್ದ ಕಬಡ್ಡಿ ಪಂದ್ಯಾವಳಿಯಲ್ಲಿ ಕಾನೂನುಬಾಹಿರ ರೂ.500 ಬೆಟ್ಟಿಂಗ್ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ಪರಮೇಶ್ವರ್ ಮತ್ತು ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ ಅವರ ವಿರುದ್ಧ ಎಫ್ಐಆರ್ ದಾಖಲಿಸಿ, ತನಿಖೆ ನಡೆಸಲು ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಆದೇಶಿಸಿತ್ತು.

ಈ ಪ್ರಕರಣ ರದ್ದತಿ ಕೋರಿ ಜಿ ಪರಮೇಶ್ವರ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಸ್ ಸುನೀಲ್ ದತ್ ಯಾದವ್ ಅವರ ಏಕಸದಸ್ಯ ಪೀಠ ನಡೆಸಿತು.

"ಪ್ರಕರಣ ದಾಖಲಿಸಲು ಆದೇಶಿಸುವುದಕ್ಕೂ ಮುನ್ನ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಬಿಎನ್ಎಸ್ಎಸ್ ಸೆಕ್ಷನ್ 175 (3) ಅಡಿ ಪೊಲೀಸರ ವಾದ ಆಲಿಸಿಲ್ಲ. ಹೀಗಾಗಿ, ಖಾಸಗಿ ದೂರು ಆಧರಿಸಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು 21.4.2026ರಂದು ಎಫ್ಐಆರ್ ಹಾಗೂ ಆನಂತರದ ಪ್ರಕ್ರಿಯೆಗೆ ತಡೆ ನೀಡಲಾಗಿದೆ" ಎಂದು ನ್ಯಾಯಾಲಯ ಆದೇಶಿಸಿದೆ.

ಇದಕ್ಕೂ ಮುನ್ನ, ಪರಮೇಶ್ವರ್ ಪ್ರತಿನಿಧಿಸಿದ್ದ ಹಿರಿಯ ವಕೀಲ ಕೆ ಎನ್ ಫಣೀಂದ್ರ ಅವರು “ಮೊದಲಿಗೆ ಪೊಲೀಸರು ಏನು ಹೇಳಿದ್ದಾರೆ ಎಂಬುದನ್ನು ಅರಿತು ಆನಂತರ ತನಿಖೆಗೆ ಮ್ಯಾಜಿಸ್ಟ್ರೇಟ್ ಆದೇಶಿಸಬೇಕಿತ್ತು. 19.10.2025ರಂದು ಕಬಡ್ಡಿ ಟೂರ್ನಿಯಲ್ಲಿ ದಕ್ಷಿಣ ಕನ್ನಡ ತಂಡ ಗೆದ್ದಿತ್ತು. ಆನಂತರ ಪರಮೇಶ್ವರ್ ಅವರು ತಮಾಷೆಗೆ ಪಣ ಕಟ್ಟಿ ಸೋತಿದ್ದೇನೆ ಎಂದು ಹೇಳಿದ್ದಾರೆ” ಎಂದರು.

# ಸಿಇಟಿ: ವಿದ್ಯಾರ್ಥಿನಿಯರ ಮೂಗಿಗೆ ಟೇಪ್..!

ಬೆಂಗಳೂರು

ನಿಯಮಗಳ ಕಟ್ಟುನಿಟ್ಟಿನ ಪಾಲನೆಗಾಗಿ ಮೂಗಿಗೆ ಟೇಪ್ ಅಂಟಿಸಿರುವುದು ಪೋಷಕರು ಮತ್ತು ಅಭ್ಯರ್ಥಿಗಳ ಅಸಮಾಧಾನಕ್ಕೆ ಕಾರಣವಾಯಿತು. ಪರೀಕ್ಷೆಯ ಒತ್ತಡದ ನಡುವೆ ಈ ವಿಚಿತ್ರ ಸನ್ನಿವೇಶವು ವಿದ್ಯಾರ್ಥಿನಿಯರಲ್ಲಿ ಕೆಲಕಾಲ ಗೊಂದಲ ಸೃಷ್ಟಿಸಿತು. ಪರೀಕ್ಷೆ ಸುಗಮವಾಗಿ ನಡೆಯಬೇಕು ಎಂಬ ಉದ್ದೇಶದಿಂದ ಸಿಬ್ಬಂದಿ ಈ ಕ್ರಮಕ್ಕೆ ಮುಂದಾದರು.

ಅಂತಿಮವಾಗಿ ಯಾವುದೇ ಅಹಿತಕರ ಘಟನೆ ನಡೆಯದೆ, ಪರೀಕ್ಷೆಯು ಸುಗಮವಾಗಿ ಮುಂದುವರೆಯಿತು. ಪರೀಕ್ಷಾ ಕೇಂದ್ರದ ಸುತ್ತಮುತ್ತ ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ಬಳ್ಳಾರಿಯಲ್ಲಿ ಕಿವಿಯೋಲೆ ಬಿಚ್ಚಿಸಿದ ಸಿಬ್ಬಂದಿ: ಬಳ್ಳಾರಿ ಜಿಲ್ಲೆಯಾದ್ಯಂತ 10 ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆಗಳು ನಡೆಯುತ್ತಿವೆ. ಒಟ್ಟು 6,667 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಒಳಪ್ರವೇಶಿಸುವ ಮುನ್ನ ವಿದ್ಯಾರ್ಥಿಗಳನ್ನು ಕಟ್ಟುನಿಟ್ಟಿನ ಪರಿಶೀಲನೆ ನಡೆಸಲಾಯಿತು.

ಈ ವೇಳೆ, ವಿದ್ಯಾರ್ಥಿನಿಯರ ಕಿವಿಯೋಲೆ ಸೇರಿದಂತೆ ಇತರ ಆಭರಣಗಳನ್ನು ಪರೀಕ್ಷಾ ಸಿಬ್ಬಂದಿಯು ಬಿಚ್ಚಿಸಿದರು. ಅಲ್ಲದೆ, ಕೊರಳಿಗೆ ಹಾಗೂ ಕೈಯಲ್ಲಿ ಧರಿಸಿದ್ದ ದಾರಗಳನ್ನೂ ಸಹ ತೆಗೆಸಲಾಗಿದೆ.

ಬಹುತೇಕ ವಿದ್ಯಾರ್ಥಿಗಳು ಯಾವುದೇ ರೀತಿಯ ಆಭರಣ ಧರಿಸದೇ ಕೇಂದ್ರಗಳಿಗೆ ಆಗಮಿಸಿದ್ದರು. ಪರೀಕ್ಷೆಗಳು ಸುಗಮವಾಗಿ ನಡೆಯಲು ಅಗತ್ಯ ಭದ್ರತೆ ಕೈಗೊಳ್ಳಲಾಗಿತ್ತು.

ಎಂಜಿನಿಯರಿಂಗ್, ಕೃಷಿ ವಿಜ್ಞಾನ, ಪಶು ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುವ 2026ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಏಪ್ರಿಲ್ 23 ಮತ್ತು 24ರಂದು ನಡೆಯುತ್ತಿವೆ.

ಹೊರನಾಡು ಮತ್ತು ಗಡಿನಾಡು ಕನ್ನಡಿಗರಿಗೆ ಏಪ್ರಿಲ್ 22ರಂದು ಕನ್ನಡ ಭಾಷಾ ಪರೀಕ್ಷೆ ಬೆಂಗಳೂರು, ಮಂಗಳೂರು, ವಿಜಯಪುರ ಮತ್ತು ಬೆಳಗಾವಿ ನಗರಗಳ ಒಟ್ಟು ಐದು ಕೇಂದ್ರಗಳಲ್ಲಿ ನಡೆದವು. ಏ.23ರಂದು ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ ಹಾಗೂ ಏ.24ರಂದು ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿದ್ದು, ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಮಾಧ್ಯಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ನೇಮಕಾತಿ ಪರೀಕ್ಷೆಗಳಿಗೆ ಮಾಡುವ ಹಾಗೆ ಈ ಪರೀಕ್ಷೆಗೂ ಕ್ಯಾಮೆರಾ ಕಣ್ಗಾವಲು ಇದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ 745 ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಿದ್ದು, ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಮೇಲುಸ್ತುವಾರಿ



ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಗುರುವಾರ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ಉದ್ದೂರು ಹೊಸಹಳ್ಳಿ ಗ್ರಾಮದ ಶ್ರೀ ವೀರಾಂಜನೇಯ ಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಭಾಗಿಯಾದರು. ಈ ಸಂದರ್ಭದಲ್ಲಿ ಎಚ್.ಡಿ.ರೇವಣ್ಣ ಸೇರಿದಂತೆ ಹಲವರಿದ್ದರು.

# ಕೊರ್ಬಾ–ಯಲಹಂಕ ನಡುವೆ ವಿಶೇಷ ರೈಲು ಸಂಚಾರ

ಬೆಂಗಳೂರು

ಬೇಸಿಗೆ ರಜೆಯ ವೇಳೆ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ರೈಲ್ವೆ ಇಲಾಖೆ ಕೊರ್ಬಾ–ಯಲಹಂಕ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲು ಸಂಚಾರವನ್ನು ಘೋಷಿಸಿದೆ. ಒಂದು ಟ್ರಿಪ್ ಆಧಾರದ ಮೇಲೆ ಈ ವಿಶೇಷ ರೈಲು ಓಡಿಸಲಾಗುತ್ತಿದೆ.

ರೈಲು ಸಂಖ್ಯೆ 08261 ಕೊರ್ಬಾ–ಯಲಹಂಕ ವಿಶೇಷ ಎಕ್ಸ್‌ಪ್ರೆಸ್ ಮೇ 2, 2026 (ಶನಿವಾರ) ಬೆಳಿಗ್ಗೆ 9 ಗಂಟೆಗೆ ಕೊರ್ಬಾ ನಿಲ್ದಾಣದಿಂದ ಹೊರಟು, ಮೇ 3ರಂದು ಸಂಜೆ 7 ಗಂಟೆಗೆ ಯಲಹಂಕ ತಲುಪಲಿದೆ.

ಇನ್ನೊಂದು ದಿಕ್ಕಿನಲ್ಲಿ ರೈಲು ಸಂಖ್ಯೆ 08262 ಯಲಹಂಕ–ಕೊರ್ಬಾ ವಿಶೇಷ ಎಕ್ಸ್‌ಪ್ರೆಸ್ ಮೇ 3, 2026 (ಭಾನುವಾರ) ರಾತ್ರಿ 9 ಗಂಟೆಗೆ ಯಲಹಂಕದಿಂದ ಹೊರಟು, ಮೇ 5ರಂದು ಬೆಳಿಗ್ಗೆ 8 ಗಂಟೆಗೆ ಕೊರ್ಬಾ ತಲುಪಲಿದೆ.

ಈ ವಿಶೇಷ ರೈಲು ಮಾರ್ಗ ಮಧ್ಯೆ ಚಂಪಾ, ಬಿಲಾಸ್‌ಪುರ್, ಭಟಪರಾ, ರಾಯ್‌ಪುರ್, ದುರ್ಗ್, ರಾಜನಂದಗಾಂವ್, ಡೊಂಗರ್‌ಗಢ, ಗೊಂಡಿಯಾ, ವಾಡ್ಸಾ, ಚಂದಾ ಫೋರ್ಟ್, ಬಲ್ಲಹರ್ಷಾ, ಸಿರ್ಪುರ್ ಕಾಗಜ್‌ನಗರ, ಮಂಚಿರ್ಯಾಲ್, ಕಾಜಿಪೇಟ್ ಜಂಕ್ಷನ್, ಚರ್ಲಪಲ್ಲಿ, ಸಿಕಂದರಾಬಾದ್, ಲಿಂಗಂಪಳ್ಳಿ, ವಿಕಾರಾಬಾದ್, ತಾಂಡೂರ್, ಯಾದಗಿರಿ, ಕೃಷ್ಣಾ, ರಾಯಚೂರು ಜಂಕ್ಷನ್, ಮಂತ್ರಾಲಯಂ ರಸ್ತೆ, ಗುಂತಕಲ್, ಗುತ್ತಿ ಜಂಕ್ಷನ್, ಅನಂತಪುರ, ಧರ್ಮಾವರಂ ಹಾಗೂ ಹಿಂದೂಪುರ ನಿಲ್ದಾಣಗಳಲ್ಲಿ ನಿಲುಗಡೆಗಳನ್ನು ಹೊಂದಿರುತ್ತದೆ. ಇನ್ನೊಂದು ದಿಕ್ಕಿನಲ್ಲಿ ರೈಲು ಸಂಖ್ಯೆ 08262 ಯಲಹಂಕ–ಕೊರ್ಬಾ ವಿಶೇಷ ಎಕ್ಸ್‌ಪ್ರೆಸ್ ಮೇ 3, 2026 (ಭಾನುವಾರ) ರಾತ್ರಿ 9 ಗಂಟೆಗೆ ಯಲಹಂಕದಿಂದ ಹೊರಟು, ಮೇ 5ರಂದು ಬೆಳಿಗ್ಗೆ 8 ಗಂಟೆಗೆ ಕೊರ್ಬಾ ತಲುಪಲಿದೆ.

ಈ ವಿಶೇಷ ರೈಲು ಮಾರ್ಗ ಮಧ್ಯೆ ಚಂಪಾ, ಬಿಲಾಸ್‌ಪುರ್, ಭಟಪರಾ, ರಾಯ್‌ಪುರ್, ದುರ್ಗ್, ರಾಜನಂದಗಾಂವ್, ಡೊಂಗರ್‌ಗಢ, ಗೊಂಡಿಯಾ, ವಾಡ್ಸಾ, ಚಂದಾ ಫೋರ್ಟ್, ಬಲ್ಲಹರ್ಷಾ, ಸಿರ್ಪುರ್ ಕಾಗಜ್‌ನಗರ, ಮಂಚಿರ್ಯಾಲ್, ಕಾಜಿಪೇಟ್ ಜಂಕ್ಷನ್, ಚರ್ಲಪಲ್ಲಿ, ಸಿಕಂದರಾಬಾದ್, ಲಿಂಗಂಪಳ್ಳಿ, ವಿಕಾರಾಬಾದ್, ತಾಂಡೂರ್, ಯಾದಗಿರಿ, ಕೃಷ್ಣಾ, ರಾಯಚೂರು ಜಂಕ್ಷನ್, ಮಂತ್ರಾಲಯಂ ರಸ್ತೆ, ಗುಂತಕಲ್, ಗುತ್ತಿ ಜಂಕ್ಷನ್, ಅನಂತಪುರ, ಧರ್ಮಾವರಂ ಹಾಗೂ ಹಿಂದೂಪುರ ನಿಲ್ದಾಣಗಳಲ್ಲಿ ನಿಲುಗಡೆಗಳನ್ನು ಹೊಂದಿರುತ್ತದೆ. ರೈಲು ಒಟ್ಟು 20 ಬೋಗಿಗಳನ್ನು ಹೊಂದಿದ್ದು, ನಾಲ್ಕು ತೃತೀಯ ಎಸಿ ಬೋಗಿಗಳು, ಹತ್ತು ನಿದ್ರಾ ಬೋಗಿಗಳು, ನಾಲ್ಕು ಸಾಮಾನ್ಯ ದ್ವಿತೀಯ ದರ್ಜೆ ಒಳಗೊಂಡಿದೆ. ರೈಲು ಒಟ್ಟು 20 ಬೋಗಿಗಳನ್ನು ಹೊಂದಿದ್ದು, ನಾಲ್ಕು ತೃತೀಯ ಎಸಿ ಬೋಗಿಗಳು, ಹತ್ತು ನಿದ್ರಾ ಬೋಗಿಗಳು, ನಾಲ್ಕು ಸಾಮಾನ್ಯ ದ್ವಿತೀಯ ದರ್ಜೆ ಬೋಗಿಗಳು ಹಾಗೂ ಎರಡು ಲಗೇಜ್ ಕಮ್ ಬ್ರೇಕ್ ವ್ಯಾನ್‌ಗಳನ್ನು (ದಿವ್ಯಾಂಗ ಸ್ನೇಹಿ ವಿಭಾಗದೊಂದಿಗೆ)

# ಜಿಎಸ್‌ಟಿ ವಂಚನೆ ಜಾಲ ಪತ್ತೆ

ಬೆಂಗಳೂರು

ಸುಮಾರು 410 ಕೋಟಿ ರೂಪಾಯಿ ಮೊತ್ತದ ಈ ವ್ಯವಹಾರದಲ್ಲಿ 102.5 ಕೋಟಿ ರೂಪಾಯಿ ತೆರಿಗೆ ಹಣವನ್ನು ಲೂಟಿ ಮಾಡಿರುವ ಬೆಚ್ಚಿಬೀಳಿಸುವ ಮಾಹಿತಿ ಹೊರಬಂದಿದೆ.

ಈ ವಂಚನೆ ಜಾಲದ ಪ್ರಮುಖ ಸೂತ್ರಧಾರಿ, ಆಂಧ್ರಪ್ರದೇಶದ ಚಿತ್ತೂರು ಮೂಲದ ತೌಕೀರ್ ಅಲಿಯಾಸ್ ಮೊಹಮ್ಮದ್ (42) ಎಂಬಾತನನ್ನು ಬೆಂಗಳೂರಿನಲ್ಲಿ ಬಂಧಿಸಲಾಗಿದೆ. ಈತನನ್ನು ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ನ್ಯಾಯಾಲಯವು 14 ದಿನಗಳ ಕಾಲ ನ್ಯಾಯಾಂಗ ಬಂಧನ ವಿಧಿಸಿದೆ. ಈತನ ಸಹಚರ ಶೇಕ್ ಜಾಕೀರ್ ಹುಸೇನ್ ಅಲಿಯಾಸ್ ಬಾಷಾ ಎಂಬಾತ ವಿದೇಶಕ್ಕೆ ಪರಾರಿಯಾಗಿದ್ದು, ಆತನಿಗಾಗಿ ತೀವ್ರ ಹುಡುಕಾಟ ನಡೆಯುತ್ತಿದೆ.

ಅಮಾಯಕ ಜನರ ಪಾನ್ ಮತ್ತು ಆಧಾರ್ ಕಾರ್ಡ್‌ಗಳನ್ನು ಅಕ್ರಮವಾಗಿ ಬಳಸಿ ಹಲವು ನಕಲಿ ಕಂಪನಿಗಳನ್ನು ನೋಂದಣಿ ಮಾಡಿಕೊಳ್ಳುತ್ತಿದ್ದರು. ಯಾವುದೇ ಸರಕು ಅಥವಾ ಸೇವೆಗಳನ್ನು ಸರಬರಾಜು ಮಾಡದೆಯೇ, ಕೇವಲ ಸಿಮೆಂಟ್, ಕಬ್ಬಿಣದ ಸರಳುಗಳ ಹೆಸರಿನಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಪಡೆಯುತ್ತಿದ್ದರು. ಕರ್ನಾಟಕ ಮಾತ್ರವಲ್ಲದೆ ಆಂಧ್ರಪ್ರದೇಶ ಮತ್ತು ತಮಿಳುನಾಡಿನಲ್ಲೂ ಈ ಜಾಲ ಹಬ್ಬಿತ್ತು. ನಕಲಿ ಐಟಿಸಿಯನ್ನು ವಿವಿಧ ಕಾಂಟ್ರಾಕ್ಟರ್‌ಗಳಿಗೆ ವರ್ಗಾಯಿಸಿ ತೆರಿಗೆ ವಂಚನೆಗೆ ಸಹಕರಿಸುತ್ತಿದ್ದರು.ಅಮಾಯಕ ಜನರ ಪಾನ್ ಮತ್ತು ಆಧಾರ್ ಕಾರ್ಡ್‌ಗಳನ್ನು ಅಕ್ರಮವಾಗಿ ಬಳಸಿ ಹಲವು ನಕಲಿ ಕಂಪನಿಗಳನ್ನು ನೋಂದಣಿ ಮಾಡಿಕೊಳ್ಳುತ್ತಿದ್ದರು. ಯಾವುದೇ ಸರಕು ಅಥವಾ ಸೇವೆಗಳನ್ನು ಸರಬರಾಜು ಮಾಡದೆಯೇ, ಕೇವಲ ಸಿಮೆಂಟ್, ಕಬ್ಬಿಣದ ಸರಳುಗಳ ಹೆಸರಿನಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಪಡೆಯುತ್ತಿದ್ದರು. ಅಮಾಯಕ ಜನರ ಪಾನ್ ಮತ್ತು ಆಧಾರ್ ಕಾರ್ಡ್‌ಗಳನ್ನು ಅಕ್ರಮವಾಗಿ ಬಳಸಿ ಹಲವು ನಕಲಿ ಕಂಪನಿಗಳನ್ನು ನೋಂದಣಿ ಮಾಡಿಕೊಳ್ಳುತ್ತಿದ್ದರು. ಯಾವುದೇ ಸರಕು ಅಥವಾ ಸೇವೆಗಳನ್ನು ಸರಬರಾಜು ಮಾಡದೆಯೇ, ಕೇವಲ ಸಿಮೆಂಟ್, ಕಬ್ಬಿಣದ ಸರಳುಗಳ ಹೆಸರಿನಲ್ಲಿ ನಕಲಿ ಬಿಲ್‌ಗಳನ್ನು ಸೃಷ್ಟಿಸಿ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಪಡೆಯುತ್ತಿದ್ದರು. ಕರ್ನಾಟಕ ಮಾತ್ರವಲ್ಲದೆ ಆಂಧ್ರಪ್ರದೇಶ ಮತ್ತು ತಮಿಳುನಾಡಿನಲ್ಲೂ ಈ ಜಾಲ ಹಬ್ಬಿತ್ತು. ನಕಲಿ ಐಟಿಸಿಯನ್ನು ವಿವಿಧ ಕಾಂಟ್ರಾಕ್ಟರ್‌ಗಳಿಗೆ ವರ್ಗಾಯಿಸಿ ತೆರಿಗೆ ವಂಚನೆಗೆ ಸಹಕರಿಸುತ್ತಿದ್ದರು. ತೆರಿಗೆ ಇಲಾಖೆಯಿಂದ ನೋಂದಣಿ ಅಥವಾ ನೋಟಿಸ್ ಬರುತ್ತಿದ್ದಂತೆಯೇ ಜಿಎಸ್‌ಟಿ ನೋಂದಣಿ ರದ್ದು ಮಾಡಿ, ಮೊಬೈಲ್ ಸಂಖ್ಯೆಗಳನ್ನು ಬದಲಿಸಿ ಅಲ್ಲಿಂದ ಪರಾರಿಯಾಗುತ್ತಿದ್ದರು. ಈ ಕುರಿತು ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ವಾಣಿಜ್ಯ ತೆರಿಗೆ ಇಲಾಖೆಯ ಜಾರಿ ವಿಭಾಗದ ಅಧಿಕಾರಿಗಳು ತನಿಖೆಯನ್ನು ತೀವ್ರಗೊಳಿಸಿದ್ದಾರೆ.

# ಗ್ಯಾರಂಟಿ ಕೊಟ್ಟ ಸರ್ಕಾರಕ್ಕೆ ಸಂಬಳ ಕೊಡಲು ದುಡ್ಡಿಲ್ಲ: ಎಚ್‌ಡಿಕೆ

ಬೆಂಗಳೂರು

ಕೇವಲ ರೂ.2000 ಗ್ಯಾರಂಟಿ ಹಣದಿಂದ ಅಭಿವೃದ್ಧಿ ಸಾಧ್ಯವಿಲ್ಲ. ಮಹಿಳೆಯರು ಈ ಸಣ್ಣ ಮೊತ್ತಕ್ಕೆ ಮರುಳಾಗಬಾರದು. ಜನರ ಕುಟುಂಬಗಳ ಉದ್ಧಾರವು ಅಸಾಧ್ಯ. ಇಂತಹ ಗ್ಯಾರೆಂಟಿಗಳಿಂದ ರಾಜ್ಯ ಸರ್ಕಾರಗಳಿಗೆ ಸಂಬಳ ಕೊಡಲಾಗದಂತ ದುಸ್ಥಿತಿ ಎದುರಾಗಿದೆ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.

ಹೊಳೆನರಸೀಪುರ ತಾಲೂಕಿನ ಉದ್ದನ ಹೊಸಹಳ್ಳಿ ಗ್ರಾಮದಲ್ಲಿ ಶ್ರೀ ವೀರಾಂಜನೇಯಸ್ವಾಮಿ ದೇವಾಲಯದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ಕೇವಲ ಎರಡು ಸಾವಿರ ರೂಪಾಯಿಯಿಂದ ಅಭಿವೃದ್ಧಿ ಸಾಧ್ಯವಿಲ್ಲ. ಅದರಿಂದ ಆರೋಗ್ಯ, ಶಿಕ್ಷಣ ಸೇರಿದಂತೆ ಕುಟುಂಬಗಳ ಯಾವ ಅಗತ್ಯವು ಪೂರೈಕೆ ಆಗುವುದಿಲ್ಲ. ದೊಡ್ಡ ದೊಡ್ಡ ಕಾಯಿಲೆಗಳು ಬಂದಾಗ ಜನರಿಗೆ ಈ ಎರಡು ಸಾವಿರ ರೂಪಾಯಿಯಿಂದ ಚಿಕಿತ್ಸೆ ಪಡೆಯಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ಕರ್ನಾಟಕದಲ್ಲಿ ಮಾರ್ಚ್ ತಿಂಗಳ ಸರ್ಕಾರಿ ನೌಕರರ ವೇತನವನ್ನು ಇನ್ನು ಕೊಟ್ಟಿಲ್ಲ ಎನ್ನುವ ಮಾಹಿತಿಯು ಇದೆ. ಹಾಗೆಯೇ ಕಾಂಗ್ರೆಸ್ ಆಡಳಿತ ಇರುವ ಹಿಮಾಚಲ ಪ್ರದೇಶದಲ್ಲಿಯೂ ಸರ್ಕಾರಿ ನೌಕರರ ಸಂಬಳವನ್ನು ನೀಡಲು ಪರದಾಡುತ್ತಿದೆ. ಆ ಸರ್ಕಾರವು ನೌಕರರ ಸಂಬಳವನ್ನು ಕಡಿತ ಮಾಡಿಕೊಂಡಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಹೀಗಾಗಿ ರಾಜ್ಯಗಳ ಅಭಿವೃದ್ಧಿ ಸಂಪೂರ್ಣವಾಗಿ ಹಳಿತಪ್ಪಿದೆ, ಇದಕ್ಕೆ ಕಾಂಗ್ರೆಸ್ ಕಾರಣವಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು.

ಸುಮಾರು ರೂ.7,26,000 ಲಕ್ಷ ಕೋಟಿಗೂ ಹೆಚ್ಚು ಹಣವನ್ನು ಕರ್ನಾಟಕ ಸರ್ಕಾರ ಸಾಲ ಮಾಡಿದೆ. ಕಾಂಗ್ರೆಸ್ ಸರ್ಕಾರವೇ ಅತಿಹೆಚ್ಚು ಸಾಲ ಮಾಡಿದೆ. ರಾಜ್ಯದ ಪ್ರತಿಯೊಬ್ಬರ ತಲೆಯ ಮೇಲೆಯೂ ಕನಿಷ್ಠವೆಂದರೂ ಒಂದು ಲಕ್ಷ ರೂಪಾಯಿಗೂ ಅಧಿಕ ಸಾಲವಿದೆ.

ಇದಕ್ಕೆ ಕಾರಣ ಯಾರು? ಇದನ್ನು ತೀರಿಸುವವರು ಯಾರು? ಇಷ್ಟು ಸಾಲವನ್ನು ಮಾಡಿದರೆ ರಾಜ್ಯ ಅಭಿವೃದ್ಧಿ ಹೊಂದಲು ಸಾಧ್ಯವೇ ಎಂದು ಸಚಿವ ಕುಮಾರಸ್ವಾಮಿ ಅವರು ಆತಂಕ ವ್ಯಕ್ತಪಡಿಸಿದರು.

ಒಂದು ಕೈಯಲ್ಲಿ ನಿಮಗೆ _2000 ಕೊಡುತ್ತಾರೆ. ಇನ್ನೊಂದು ಕೈಯಲ್ಲಿ ತೆರಿಗೆ ಮೇಲೆ ತೆರಿಗೆ ವಿಧಿಸುತ್ತಾರೆ. ಬೆಲೆ ಏರಿಕೆಗಳ ಬಗ್ಗೆ ಹೇಳುವ ಹಾಗೆಯೇ ಇಲ್ಲ. ಇತ್ತೀಚೆಗೆ ವಿದ್ಯುತ್ ದರವನ್ನು ಹೆಚ್ಚಿಸಿದರು. ಹಾಗೆಯೇ ಮದ್ಯದ ದರವನ್ನು ಏರಿಸಿದರು. ಎಷ್ಟು ಸಾಧ್ಯವೊ ಅಷ್ಟು ಕಡೆ ಜನರನ್ನು ಕಿತ್ತು ತಿನ್ನುವ ಕೆಲಸವನ್ನು ಈ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ಸಚಿವರು ಕಿಡಿಕಾರಿದರು.

ಚುನಾವಣೆ ಬಂದಾಗ ನಿಮ್ಮ ಭವಿಷ್ಯ ಮತ್ತು ನಿಮ್ಮ ಮಕ್ಕಳ ಉದ್ಧಾರಕ್ಕಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವವರನ್ನು ನೋಡಿ ಆಯ್ಕೆ ಮಾಡಿ. ಜಾತಿ ನೋಡಿ ಮತ ಹಾಕಬೇಡಿ. ಹಾಸನ ಜಿಲ್ಲೆ ಸೇರಿ ಇಡೀ ರಾಜ್ಯದಲ್ಲಿ ಆರೋಗ್ಯ, ಶಿಕ್ಷಣ, ವಿದ್ಯುತ್ ಕ್ಷೇತ್ರಗಳಲ್ಲಿ ಆಗಿರುವ ಅಭಿವೃದ್ಧಿಯನ್ನು ಗಮನಿಸಿ. ನನಗೆ ದೊರೆತ ಸಣ್ಣ ಅವಧಿಯಲ್ಲಿ ಇಷ್ಟೆಲ್ಲ ಕೆಲಸಗಳನ್ನು ಮಾಡಿದ್ದೇನೆ.

ಸಾವಿರಾರು ಶಿಕ್ಷಕರನ್ನು ನೇರವಾಗಿ ಮತ್ತು ಪಾರದರ್ಶಕವಾಗಿ ನೇಮಕ ಮಾಡಿದ್ದೆ. ಆದರೆ ಈಗಿನ ಸರ್ಕಾರಕ್ಕೆ ಒಂದೇ ಒಂದು ನೇಮಕಾತಿ ಮಾಡುವ ಶಕ್ತಿಯು ಇಲ್ಲವಾಗಿದೆ ಎಂದು ಕೇಂದ್ರ

# ದಾಖಲೆಯ ಫಲಿತಾಂಶ

ಬೆಂಗಳೂರು

ದ್ವಿತೀಯ ಪಿಯುಸಿಯಂತೆಯೇ 10ನೇ ತರಗತಿ ವಿದ್ಯಾರ್ಥಿಗಳಿಗೂ ಸಹ ಡಿಜಿಲಾಕರ್‌ನಲ್ಲಿ ಅಂಕಪಟ್ಟಿಗಳು ಲಭ್ಯವಾಗುವ ವ್ಯವಸ್ಥೆಯನ್ನು ಇದೇ ಮೊದಲ ಬಾರಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಮಾಡಿದೆ. ವಿದ್ಯಾರ್ಥಿಗಳು https://digilocker.gov.in ಅನ್ನು ಬಳಸಿ ಅಂಕಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ.

ಏ.23ರಿಂದ 26ರವರೆಗೆ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಏ.28ರಿಂದ ಮೇ 4ವರೆಗೆ ಅವಕಾಶ ನೀಡಲಾಗಿದೆ.

ಸ್ಕ್ಯಾನ್ ಪ್ರತಿ ಪಡೆಯಲು ಒಂದು ವಿಷಯಕ್ಕೆ 410 ರೂ. ಮರುಮೌಲ್ಯಮಾಪನ ಮಾಡಲು ಒಂದು ವಿಷಯಕ್ಕೆ 810 ಶುಲ್ಕ ವಿಧಿಸಲಾಗಿದೆ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಒಂದು ವಿಷಯಕ್ಕೆ 448 ರೂ. ಎರಡು ವಿಷಯಕ್ಕೆ 559 ಹಾಗೂ ಮೂರಕ್ಕಿಂತ ಮೇಲ್ಪಟ್ಟ ವಿಷಯಗಳಿಗೆ 752 ರೂ.ಶುಲ್ಕ ನಿಗದಿಪಡಿಸಲಾಗಿದೆ.

ಪ್ರಸಕ್ತ ಶೈಕ್ಷಣಿಕ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆ ಮಾ.18 ರಿಂದ ಎ.2ರ ವರೆಗೆ ನಡೆದಿತ್ತು. 8,65,988 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು.

25/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹತ್ತಾರು ವರ್ಷಗಳ ಸೇವೆಗೆ ಕಿಮ್ಮತ್ತಿಲ್ಲವೇ?

ಚಿಕ್ಕಬಳ್ಳಾಪುರ

ವಿವಿಧ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ಹಾಸ್ಟೆಲ್ ಮತ್ತು ವಸತಿ ಶಾಲೆ ಹೊರಗುತ್ತಿಗೆ ನೌಕರರ ಸಂಘದ ವತಿಯಿಂದ ಜಿಲ್ಲಾಡಳಿತ ಭವನದ ಮುಂದೆ ಬೃಹತ್ ಪ್ರತಿಭಟನೆ ನಡೆಸಲಾಯಿತು. ದಶಕಗಳಿಂದ ಅಲ್ಪ ಸಂಬಳಕ್ಕೆ ದುಡಿಯುತ್ತಿರುವ ನೌಕರರು ತಮ್ಮ ಬದುಕಿನ ಭದ್ರತೆಗಾಗಿ ಸರ್ಕಾರದ ವಿರುದ್ಧ ಧ್ವನಿ ಎತ್ತಿದರು.




ಪ್ರತಿಭಟನೆಯ ನೇತೃತ್ವ ವಹಿಸಿದ್ದ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ಮುನಿಯಪ್ಪ ಮಾತನಾಡಿ, "ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗಳ ವಸತಿ ನಿಲಯಗಳಲ್ಲಿ ಅಡುಗೆಯವರು, ಸ್ವಚ್ಛತಾಗಾರರು, ಕಾವಲುಗಾರರು ಸೇರಿದಂತೆ ಸಾವಿರಾರು ಸಿಬ್ಬಂದಿ ಕಳೆದ 15–20 ವರ್ಷಗಳಿಂದ ಶ್ರಮಿಸುತ್ತಿದ್ದಾರೆ. ಆದರೆ, ಇವರಿಗೆ ಯಾವುದೇ ಸೇವಾ ಭದ್ರತೆ ಇಲ್ಲದೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಂದ ಶೋಷಣೆಗೆ ಒಳಗಾಗುತ್ತಿದ್ದಾರೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಕನಿಷ್ಠ ವೇತನ 25,714 ರೂ. ಗಳ ಜಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳು ಕರಡು ವರದಿ ಸಿದ್ಧಪಡಿಸಿ ತಿಂಗಳುಗಳೇ ಕಳೆದರೂ ಇಂದಿಗೂ ಅನುಷ್ಠಾನಕ್ಕೆ ಬಂದಿಲ್ಲ. ಕೂಡಲೇ ಈ ವೇತನವನ್ನು ಜಾರಿಗೊಳಿಸಬೇಕು ಮತ್ತು ಸ್ಥಳೀಯ ಸಮಸ್ಯೆಗಳ ಚರ್ಚೆಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ಕರೆಯಬೇಕು," ಎಂದು ಅವರು ಒತ್ತಾಯಿಸಿದರು.

ಪ್ರಮುಖ ಬೇಡಿಕೆಗಳು:

ಸಂಘದ ಗೌರವಾಧ್ಯಕ್ಷ ಬಿ.ಎನ್. ಮುನಿಕೃಷ್ಣಪ್ಪ ನೌಕರರ ಪ್ರಮುಖ ಬೇಡಿಕೆಗಳನ್ನು ಪಟ್ಟಿ ಮಾಡಿದರು.

ಸೇವಾ ಭದ್ರತೆ: 10 ವರ್ಷ ಸೇವೆ ಸಲ್ಲಿಸಿದವರನ್ನು ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮದ ಅಡಿಯಲ್ಲಿ ತರಬೇಕು.

ರಜಾ ಸಹಿತ ವೇತನ: ಏಪ್ರಿಲ್ ಮತ್ತು ಮೇ ತಿಂಗಳ ರಜಾ ಅವಧಿಯಲ್ಲೂ ವೇತನ ನೀಡಬೇಕು.

ಸಿಬ್ಬಂದಿ ಕಡಿತ ಬೇಡ: 50 ವಿದ್ಯಾರ್ಥಿಗಳಿಗೆ 3 ಜನ ಸಿಬ್ಬಂದಿ ಎಂಬ ಹಳೆಯ ಪದ್ಧತಿಯೇ ಮುಂದುವರಿಯಲಿ.

ಸೌಲಭ್ಯಗಳು:

ಕಡ್ಡಾಯ ವಾರದ ರಜೆ, ಪಿಎಫ್, ಇಎಸ್ಐ ಮತ್ತು ಸಂಬಳದ ಚೀಟಿ ನೀಡಬೇಕು.

ನಿವೃತ್ತಿ ಸೌಲಭ್ಯ:

ನಿವೃತ್ತಿಯ ನಂತರ ಜೀವನ ನಿರ್ವಹಣೆಗೆ 10 ಲಕ್ಷ ರೂ. ಪರಿಹಾರ ನೀಡಬೇಕು.

ಪ್ರತ್ಯೇಕ ಸಿಬ್ಬಂದಿ:

ಅಡುಗೆಯವರಿಂದ ಶೌಚಾಲಯ ಸ್ವಚ್ಛಗೊಳಿಸಬಾರದು; ಇದಕ್ಕಾಗಿ ಪ್ರತ್ಯೇಕ ಸಿಬ್ಬಂದಿ ನೇಮಿಸಬೇಕು.

ಉಪ ವಿಭಾಗಾಧಿಕಾರಿಗಳಿಗೆ ಮನವಿ:

ಪ್ರತಿಭಟನೆಯ ನಂತರ ನೌಕರರ ನಿಯೋಗವು ಉಪ ವಿಭಾಗಾಧಿಕಾರಿ ಡಿ.ಎಚ್. ಅಶ್ವಿನ್ ಅವರಿಗೆ ಮನವಿ ಪತ್ರ ಸಲ್ಲಿಸಿತು. ಈ ಸಂದರ್ಭದಲ್ಲಿ ಸಂಘದ ಮುಖಂಡರಾದ ಭಾಗ್ಯಮ್ಮ, ಶಶಿಕಲಾ, ನಾಗರತ್ನಮ್ಮ, ಮಂಜುನಾಥ, ಮಧು, ನವೀನ್, ಅಶ್ವತ್ಥಪ್ಪ ಸೇರಿದಂತೆ ನೂರಾರು ಹೊರಗುತ್ತಿಗೆ ನೌಕರರು ಉಪಸ್ಥಿತರಿದ್ದರು.

# ವಿಜಯಪುರಕ್ಕೆ ಹರಿಯಲಿದೆಯೇ ಕಾವೇರಿ?



ವಿಜಯಪುರ

ಪಟ್ಟಣದ ದಶಕಗಳ ಕಾಲದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ 'ಕಾವೇರಿ 6ನೇ ಹಂತ'ದ ಯೋಜನೆಯ ಅನುಷ್ಠಾನಕ್ಕಾಗಿ ಜಪಾನ್ ದೇಶದ ತಜ್ಞರ ತಂಡ ಗುರುವಾರ ಪಟ್ಟಣಕ್ಕೆ ಭೇಟಿ ನೀಡಿ ಸಾರ್ವಜನಿಕರಿಂದ ಮಾಹಿತಿ ಸಂಗ್ರಹಿಸಿತು.

ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಸುಮಾರು 207 ಕೋಟಿ ರೂ. ವೆಚ್ಚದಲ್ಲಿ ಈ ಯೋಜನೆಯನ್ನು ರೂಪಿಸಲಾಗಿದ್ದು, ಯೋಜನೆಗೆ ಅಗತ್ಯವಿರುವ ಸಾಲ ಮಂಜೂರು ಮಾಡುವ ಪ್ರಕ್ರಿಯೆಯ ಭಾಗವಾಗಿ ಈ ತಾಂತ್ರಿಕ ತಂಡ ಭೇಟಿ ನೀಡಿದೆ.

ವಾರ್ಡ್‌ಗಳಲ್ಲಿ ಸಂಚರಿಸಿದ ಜಪಾನ್ ಅಧಿಕಾರಿಗಳು ಸಾರ್ವಜನಿಕರನ್ನು, ಅದರಲ್ಲೂ ವಿಶೇಷವಾಗಿ ಮಹಿಳೆಯರನ್ನು ಕಂಡು ನೀರಿನ ಬಳಕೆಯ ಕುರಿತು ಹತ್ತಾರು ಪ್ರಶ್ನೆಗಳನ್ನು ಕೇಳಿದರು. "ಪುರಸಭೆಯಿಂದ ಎಷ್ಟು ದಿನಗಳಿಗೊಮ್ಮೆ ನೀರು ಸಿಗುತ್ತದೆ? ದಿನಕ್ಕೆ ಎಷ್ಟು ಲೀಟರ್ ಬಳಕೆ ಮಾಡುತ್ತೀರಿ? ಒಂದು ಹಸುವಿಗೆ ಎಷ್ಟು ನೀರು ಬೇಕು? ನೀರಿನ ಬಿಲ್ ಕಟ್ಟಲು ಸಿದ್ಧರಿದ್ದೀರಾ?" ಎಂದು ತಂಡವು ವಿವರವಾಗಿ ಮಾಹಿತಿ ಪಡೆಯಿತು.

ಅಧಿಕಾರಿಗಳ ಪ್ರಶ್ನೆಗೆ ಉತ್ತರಿಸಿದ ಸ್ಥಳೀಯ ಮಹಿಳೆಯರು, ಪಟ್ಟಣದ ನೀರಿನ ದಯನೀಯ ಸ್ಥಿತಿಯನ್ನು ಎಳೆಎಳೆಯಾಗಿ ವಿವರಿಸಿದರು. "ನಮಗೆ ಪುರಸಭೆಯಿಂದ 15 ದಿನಗಳಿಗೊಮ್ಮೆ ಮಾತ್ರ ನೀರು ಬಿಡಲಾಗುತ್ತಿದೆ. ಅದು ಯಾವುದಕ್ಕೂ ಸಾಕಾಗುತ್ತಿಲ್ಲ. ಅನಿವಾರ್ಯವಾಗಿ ಟ್ಯಾಂಕರ್ ಮೂಲಕ ನೀರು ತರಿಸಿಕೊಳ್ಳುತ್ತಿದ್ದೇವೆ. ಕುಡಿಯಲು ದೂರದ ಫಿಲ್ಟರ್ ಘಟಕಗಳಿಂದ ನೀರು ಹೊತ್ತು ತರುತ್ತೇವೆ," ಎಂದು ಅಳಲು ತೋಡಿಕೊಂಡರು.

ಪುರಸಭೆ ಅಧಿಕಾರಿಗಳು ಮಾಹಿತಿ ನೀಡಿ, "ಪಟ್ಟಣದಲ್ಲಿ 23 ವಾರ್ಡುಗಳಿದ್ದು, 50 ಸಾವಿರಕ್ಕೂ ಹೆಚ್ಚು ಜನಸಂಖ್ಯೆಯಿದೆ. ಸದ್ಯ ನಾವು ಸಂಪೂರ್ಣವಾಗಿ ಕೊಳವೆಬಾವಿಗಳ ಮೇಲೆಯೇ ಅವಲಂಬಿತರಾಗಿದ್ದೇವೆ. ಎಚ್.ಎನ್. ವ್ಯಾಲಿ ಯೋಜನೆಯಿಂದ ಕೆರೆಗಳು ತುಂಬಿರುವುದರಿಂದ ಅಲ್ಪಸ್ವಲ್ಪ ನೀರು ಸಿಗುತ್ತಿದೆ. ಕಾವೇರಿ ಯೋಜನೆ ಜಾರಿಯಾದರೆ ಮಾತ್ರ ಜನರಿಗೆ ಪ್ರತಿದಿನ ನೀರು ಒದಗಿಸಲು ಸಾಧ್ಯ," ಎಂದು ಜಪಾನ್ ತಂಡಕ್ಕೆ ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಜಪಾನ್ ಅಧಿಕಾರಿಗಳಾದ ಮಿಕಿಕೋ ಅಜುಮಾ, ಕಾನಾನ್ ಇನೋ, ಎಮಿಕೋ ಫೂಜಿತಾ ಸೇರಿದಂತೆ ಕರ್ನಾಟಕ ನೀರು ಸರಬರಾಜು ಮಂಡಳಿಯ ಎಇಇ ನಾಗರತ್ನ, ಅಭಿಲಾಷ್, ಪುರಸಭೆ ಅಧ್ಯಕ್ಷೆ ಎಸ್. ಭವ್ಯಾ ಮಹೇಶ್, ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ ಮತ್ತಿತರರು ಉಪಸ್ಥಿತರಿದ್ದರು.

# ರಸಗೊಬ್ಬರ ಖರೀದಿಸಲು ಎಫ್‌ಐಡಿ ಕಡ್ಡಾಯ

ಕೋಲಾರ

ಪ್ರಸಕ್ತ ವರ್ಷ ಬೆಳೆಗಳಿಗೆ ಒದಗಿಸುವ ರಸಗೊಬ್ಬರಗಳ ಸದ್ಬಳಿಕೆಗಾಗಿ 2026–27 ನೇ ಸಾಲಿನ ಮುಂಗಾರು ಹಂಗಾಮಿನಿಂದ ಯೂರಿಯ ರಸಗೊಬ್ಬರವನ್ನು ಮಿತವಾಗಿ ಬಳಸಲು ಕೃಷಿ ಇಲಾಖೆ ಹೊಸ ಮಾರ್ಗಸೂಚಿ ಜಾರಿಗೊಳಿಸಿದ್ದು, ಪ್ರತಿ ಎಕರೆಗೆ ತಿಂಗಳಿಗೆ ಬೆಳೆ ಆಧಾರಿತ ಶಿಫಾರಸ್ಸಿನಂತೆ ಅಥವಾ ಒಂದು ಚೀಲ ಯೂರಿಯ ರಸಗೊಬ್ಬರವನ್ನು ವಿತರಿಸಲಾಗುವುದು.

ಯೂರಿಯ ಮಿತ ಬಳಕೆಯಾಗಲಿ: ಪ್ರತಿ ಬೆಳೆಗೆ ಶಿಫಾರಸ್ಸಿಗಿಂತ ಹೆಚ್ಚಿನ ಯೂರಿಯ ರಸಗೊಬ್ಬರ ಬಳಕೆ ಮಾಡುವುದರಿಂದ ಮಣ್ಣಿನ ಫಲವತ್ತತೆ ಕುಂಠಿತಗೊಳ್ಳುವುದು ಅಂತರ್ಜಲದಲ್ಲಿ ನೈಟ್ರೇಟ್ ಮಾಲಿನ್ಯ ಉಂಟು ಮಾಡುತ್ತದೆ. ಕೀಟಗಳ ವಿರುದ್ಧ ಸಸ್ಯಗಳನ್ನು ದುರ್ಬಲಗೊಳಿಸುತ್ತದೆ. ಆಹಾರದ ಗುಣಮಟ್ಟ ದೀರ್ಘಕಾಲಿನ ಪರಿಸರ ವ್ಯವಸ್ಥೆಯ ಕಾರ್ಯ ಸಾಧ್ಯತೆ ಹದಗೆಡಿಸುತ್ತದೆ. ಬೆಳೆ ಬೆಳೆಯುವ ಮುನ್ನ ಕಡ್ಡಾಯವಾಗಿ ಮಣ್ಣಿನ ಪರೀಕ್ಷೆ ಮಾಡಿಸಿ ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರಗಳನ್ನು ಬಳಕೆ ಮಾಡಬೇಕು. ರಸಗೊಬ್ಬರ ಖರೀದಿಸಲು ಎಫ್.ಐ.ಡಿ ಕಡ್ಡಾಯ: ಸರ್ಕಾರದ ಹೊಸ ನಿಯಮದಂತೆ ರಸಗೊಬ್ಬರಗಳ ಅನಧೀಕೃತ ಮಾರಾಟವನ್ನು ತಡೆಯಲು ಹಾಗೂ ಎಲ್ಲಾ ರೈತರಿಗೂ ರಸಗೊಬ್ಬರ ಸಿಗುವಂತೆ ಮಾಡುವ ಉದ್ದೇಶದಿಂದ ಇನ್ನೂ ಮುಂದೆ ಎಲ್ಲಾ ರೈತರು ಎಫ್.ಐ.ಡಿ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಎಫ್.ಐ.ಡಿಯಲ್ಲಿ ರೈತರು ಹೊಂದಿರುವ ಕೃಷಿ ಭೂಮಿಯ ವಿಸ್ತೀರ್ಣದ ಆಧಾರದ ಮೇಲೆ ರಸಗೊಬ್ಬರಗಳನ್ನು ಕೆ–ಕಿಸಾನ್ ತಂತ್ರಾಂಶದ ಮೂಲಕ ವಿತರಿಸುವುದರಿಂದ ರೈತರು ಆಧಾರ್ ಮತ್ತು ತಮ್ಮ ಎಲ್ಲಾ ಪಹಣಿಯನ್ನು ಎಫ್.ಐ.ಡಿಗೆ ಜೋಡಣೆಯನ್ನು ರೈತ ಸಂಪರ್ಕ ಕೇಂದ್ರ ಅಥವಾ ತೋಟಗಾರಿಕೆ ಇಲಾಖೆಯ ಮೂಲಕ ಮಾಡಿಕೊಳ್ಳಬಹುದಾಗಿರುತ್ತದೆ ಎಂದು ರಸಗೊಬ್ಬರದ ಮಾರಾಟದ ವಿವರ ಕಡ್ಡಾಯವಾಗಿ ಇಲಾಖೆಗೆ ಸಲ್ಲಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು

# ಶ್ರೀ ವೀರಭದ್ರೇಶ್ವರ ಸ್ವಾಮಿ ವರ್ಷದ ಮಹೋತ್ಸವ ಸಂಪನ್ನ

ಕೋಲಾರ

ಗ್ರಾಮದ ಆರಾಧ್ಯ ದೈವ ಶ್ರೀ ವೀರಭದ್ರೇಶ್ವರ ಮತ್ತು ಭದ್ರಕಾಳಿ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಬೆಳಗಿನ ಜಾವ ಕೆಂಡೋತ್ಸವ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಅತ್ಯಂತ ಸಡಗರ–ಸಂಭ್ರಮದಿಂದ ಜರುಗಿದವು.



ಬ್ರಾಹ್ಮಿ ಮುಹೂರ್ತದಲ್ಲಿ ಧನಂಜಯಸ್ವಾಮಿ ಅವರ ನೇತೃತ್ವದಲ್ಲಿ ಗಣಪತಿ ಹೋಮ, ಗಂಗಾಪೂಜೆ, ಮಹಾರುದ್ರಾಭಿಷೇಕ ಹಾಗೂ ರುದ್ರಹೋಮಗಳು ನಡೆದವು. ಹೆಗ್ಗಟ್ಟ ಗ್ರಾಮದಿಂದ ಆಗಮಿಸಿದ ಶ್ರೀ ಸಪ್ತಮಾತೃಕಾ ದೇವಿ ಮತ್ತು ಶ್ರೀ ಮುತ್ತುರಾಯಸ್ವಾಮಿಯವರನ್ನು ಗ್ರಾಮದ ಸುಮಂಗಲೆಯರು ರಂಗೋಲಿ ಬಿಡಿಸಿ ಭವ್ಯವಾಗಿ ಬರಮಾಡಿಕೊಂಡರು.

ಜಾತ್ರಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಕೆ.ಎಂ. ಶಿವಲಿಂಗೇಗೌಡ, "ಕ್ಷೇತ್ರದ ಹಾಗೂ ದೇವಸ್ಥಾನಗಳ ಅಭಿವೃದ್ಧಿಗೆ ನಾನು ಸದಾ ಬದ್ಧ. ಸಮುದಾಯ ಭವನ, ಪಶು ಆಸ್ಪತ್ರೆ ಸೇರಿದಂತೆ ಸಾರ್ವಜನಿಕ ಹಿತದೃಷ್ಟಿಯ ಕೆಲಸಗಳನ್ನು ಮಾಡಲು ನಾನು ಎಂದಿಗೂ ಹಿಂದೆ ಸರಿಯುವುದಿಲ್ಲ," ಎಂದು ಭರವಸೆ ನೀಡಿದರು.

ಶ್ರೀ ವೀರಭದ್ರೇಶ್ವರ ಸ್ವಾಮಿಯ ಅಡ್ಡ ಪಲ್ಲಕ್ಕಿ ಉತ್ಸವದೊಂದಿಗೆ ವೀರಗಾಸೆ ಕುಣಿತ ಗಮನ ಸೆಳೆಯಿತು. ಬೆಳಗುಂಬ, ಶಿವರ ಹಾಗೂ ಯಡವನಹಳ್ಳಿ ಗ್ರಾಮಸ್ಥರಿಂದ ನಡೆದ ನಂದಿಧ್ವಜ ಕುಣಿತ ಮತ್ತು ನಗಾರಿ ವಾದ್ಯಗಳು ಜಾತ್ರೆಗೆ ಮೆರುಗು ನೀಡಿದವು. ಬಿಲ್ವಪತ್ರೆ ಮರವನ್ನು ಸುತ್ತಿದ್ದ ಉತ್ಸವ ಮೂರ್ತಿಯನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲಿನ ಸಾವಿರಾರು ಭಕ್ತರು ಆಗಮಿಸಿದ್ದರು. ಮಂಗಳವಾರ ಬೆಳಿಗ್ಗೆ ಕಳಶ ಸ್ಥಾಪನೆ ಹಾಗೂ ಕೆಂಡೋತ್ಸವದ ನಂತರ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಜಾತ್ರಾ ಮಹೋತ್ಸವದ ಯಶಸ್ವಿಗಾಗಿ 'ಭಜರಂಗಿ ಬಾಯ್ಸ್' ಮತ್ತು 'ವೀರಭದ್ರೇಶ್ವರ ಗೆಳೆಯರ ಬಳಗ'ದ ಯುವಕರು ಶ್ರಮಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಜ್ಯೋತಿ ಗಂಗಾಧರ್, ಮಾಜಿ ಗ್ರಾ.ಪಂ. ಅಧ್ಯಕ್ಷ ಜೆ.ವಿ. ಶಶಿಕುಮಾರ್, ಪತ್ರಕರ್ತ ಲಯನ್ ಲೋಕೇಶ್, ಹಾಸನ ಜಿಲ್ಲಾ ವೀರಶೈವ ಲಿಂಗಾಯಿತ ಸಂಘದ ಉಪಾಧ್ಯಕ್ಷ ಸಿದ್ದೇಶ್ ಸೇರಿದಂತೆ ಗ್ರಾಮದ ಪ್ರಮುಖರಾದ ರೇಣುಕಯ್ಯ, ಶಣ್ಮುಕಯ್ಯ ಮತ್ತಿತರರನ್ನು ಗೌರವಿಸಲಾಯಿತು. ಜಾತ್ರೆಯ ಅಂಗವಾಗಿ ಆಯೋಜಿಸಿದ್ದ ರಸಮಂಜರಿ ಕಾರ್ಯಕ್ರಮವು ಸಾರ್ವಜನಿಕರನ್ನು ರಂಜಿಸಿತು.



ಕೆಜಿಎಫ್ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು, ಪ್ರಸಕ್ತ ಸಾಲಿನ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ ಸ್ವೀಕರಿಸಿರುವ ಸಿ.ಎಂ. ಮುನಿಯಪ್ಪ ಅವರನ್ನು ಭೇಟಿ ಮಾಡಿ ಅಭಿನಂದಿಸಲಾಯಿತು. ಈ ವೇಳೆ ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ವಿ. ಮುನಿರಾಜು, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಜೆ.ಜಿ. ಶ್ರೀನಿವಾಸಮೂರ್ತಿ, ಕೆಜಿಎಫ್ ತಾಲೂಕು ಮಾಜಿ ಅಧ್ಯಕ್ಷ ದೊರೈ ಅರಸು, ಮಾಜಿ ಖಜಾಂಚಿ ಮಲರ್ ಶೇಖರ್, ಹಾಲಿ ಉಪಾಧ್ಯಕ್ಷ ಸುದರ್ಶನ್, ಪಿ.ಎಲ್. ರಾಜ, ಕಾರ್ಯದರ್ಶಿ ಭರಣಿ, ಸದಸ್ಯರಾದ ಭಾಸ್ಕರ್, ವೆಂಕಟಪ್ಪ, ಮಾಧ್ಯಮ ಮಿತ್ರರಾದ ತಿರುಮಲೇಶ್, ಮಂಜುನಾಥ್, ಶ್ರೀಕಾಂತ್ ಇತರರು ಇದ್ದರು.

# ಪತ್ನಿಯ ಬಲಿ ಪಡೆದ ಪತಿ



ಕೆಜಿಎಫ್

ಕಾರಣಾಂತರಗಳಿಂದ ತನ್ನ ಪತ್ನಿಯನ್ನು ಕೊಂದ ಪತಿಯೊಬ್ಬ ಪೊಲೀಸರಿಗೆ ಶರಣಾದ ಘಟನೆ ಉರಿಗಾಂ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಶರಣಾದ ಆರೋಪಿ ಗೋಪಿನಾಥ್ ಎಂದು ಗುರುತಿಸಲಾಗಿದೆ. ಆರೋಪಿಯು ಐ.ಆರ್.ಬಿ ಸ್ಥಳದಲ್ಲಿ ಏ. 22 ರಂದು ರಾತ್ರಿ ತನ್ನ ಪತ್ನಿಯಾದ ಈಶ್ವರಮ್ಮಳನ್ನು ಹರಿತವಾದ ಆಯುಧದಿಂದ ಕೊಲೆ ಮಾಡಿದ್ದ.

ಪಿರ್ಯಾದಿದಾರ ಅಶ್ವತ್ಥ್ ನಾರಾಯಣ ಎನ್ನುವರು ಉರಿಗಾಂ ಪೊಲೀಸ್ ಠಾಣೆಯಲ್ಲಿ ತನ್ನ ತಂಗಿ ಈಶ್ವರಮ್ಮ(46) ರವರ ಗಂಡ ಗೋಪಿನಾಥ್ ತನ್ನ ಹೆಂಡತಿಯ ಮೇಲೆ ಅನುಮಾನವಿದ್ದುದ್ದರಿಂದ ಉರಿಗಾಂನಿಂದ ದೊಡ್ಡವಲಗಮಾದಿ ಗ್ರಾಮಕ್ಕೆ ಹೋಗುವ ರಸ್ತೆಯ ಬಳಿ ಐ,ಆರ್.ಬಿ ಸ್ಥಳದಲ್ಲಿ ಹರಿತವಾದ ಆಯುಧದಿಂದ ಕೊಲೆ ಮಾಡಿರುವುದಾಗಿ ದೂರು ನೀಡಿದ್ದ.

ಈ ಕುರಿತು ಉರಿಗಾಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದರು. ಆರೋಪಿ ಗೋಪಿನಾಥ್ ಬಿನ್ ತಿಮ್ಮಪ್ಪ (50) ಟೈಲರ್ ಉದ್ಯೋಗ ಹೊಂದಿದ್ದ ಎಂದು ತಿಳಿದು ಬಂದಿದೆ.

ಆರೋಪಿಯ ಬಳಿ ಇರುವ ಒಂದು ದ್ವಿಚಕ್ರ ವಾಹನ ಹಾಗೂ ಹರಿತವಾದ ಆಯುಧವನ್ನು ವಶಕ್ಕೆ ಪಡೆದು ಕಾನೂನು ಕ್ರಮ ಜರುಗಿಸಿದ್ದಾರೆ.

# ಬಿಸಿಲಿನ ಪ್ರಖರತೆ ಹೆಚ್ಚಳ: ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಪ್ರಕಟ

ಮಾಲೂರು

ತಾಲ್ಲೂಕಿನಲ್ಲಿ ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನವು ಏರುತ್ತಿದ್ದು, ಜಾಗತಿಕ ತಾಪಮಾನ ಏರಿಕೆಯ ಈ ಸಂದರ್ಭದಲ್ಲಿ ಸಾರ್ವಜನಿಕರು, ವಿಶೇಷವಾಗಿ ಮಕ್ಕಳು, ವೃದ್ಧರು ಮತ್ತು ಗರ್ಭಿಣಿಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವುದು ಅತ್ಯಗತ್ಯ ಎಂದು ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ರಮೇಶ್ ಬಾಬು ತಿಳಿಸಿದ್ದಾರೆ.



ವಾತಾವರಣದ ತಾಪಮಾನವು 35 ಡಿಗ್ರಿ ಸೆಲ್ಸಿಯಸ್‌ಗಿಂತ ಹೆಚ್ಚಾದಾಗ ಮಾನವನ ಶರೀರವು ಬೆವರುವ ಮೂಲಕ ತನ್ನನ್ನು ತಾನು ತಂಪುಗೊಳಿಸಿಕೊಳ್ಳಲು ಪ್ರಯತ್ನಿಸುತ್ತದೆ. ಆದರೆ, ಆರ್ದ್ರತೆ ಹೆಚ್ಚಾದಾಗ ಈ ಪ್ರಕ್ರಿಯೆ ಕಷ್ಟವಾಗುತ್ತದೆ. ವಿಶೇಷವಾಗಿ ಗರ್ಭಿಣಿಯರಲ್ಲಿ ಅತಿಯಾದ ಶಾಖದ ಒತ್ತಡವು ಭ್ರೂಣಕ್ಕೆ ರಕ್ತದ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲು ಕಾರಣವಾಗಬಹುದು. ಮಧುಮೇಹ ಮತ್ತು ರಕ್ತದೊತ್ತಡ ಇರುವವರು ಹೆಚ್ಚು ಜಾಗರೂಕರಾಗಿರಬೇಕು ಎಂದು ಅವರು ವಿವರಿಸಿದರು.

ಸೂರ್ಯಘಾತ ತಡೆಗಟ್ಟಲು ಏನು ಮಾಡಬೇಕು?

ನೀರಿನಂಶ ಹೆಚ್ಚಿರಲಿ: ಬಾಯಾರಿಕೆ ಇಲ್ಲದಿದ್ದರೂ ಆಗಾಗ ನೀರು ಕುಡಿಯಿರಿ. ಮಜ್ಜಿಗೆ, ಎಳನೀರು, ಹಣ್ಣಿನ ರಸ ಹಾಗೂ ಓಆರ್‌ಎಸ್ ದ್ರಾವಣ ಸೇವನೆ ಉತ್ತಮ.

ಆಹಾರ ಕ್ರಮ: ಕಲ್ಲಂಗಡಿ, ಕಿತ್ತಳೆ ಹಾಗೂ ಸೌತೆಕಾಯಿಯಂತಹ ನೀರಿನಂಶ ಹೆಚ್ಚಿರುವ ಹಣ್ಣು–ತರಕಾರಿಗಳನ್ನು ಸೇವಿಸಿ.

ಬಟ್ಟೆ ಧರಿಸುವಿಕೆ:

ತಿಳಿ ಬಣ್ಣದ, ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಿರಿ. ಹೊರಗೆ ಹೋಗುವಾಗ ಛತ್ರಿ, ಟವೆಲ್ ಅಥವಾ ತಂಪು ಕನ್ನಡಕ ಬಳಸಿ.

ಮನೆಯೊಳಗೆ: ಕಿಟಕಿಗಳಿಗೆ ಪರದೆ ಬಳಸಿ, ಫ್ಯಾನ್ ಅಥವಾ ಏರ್ ಕೂಲರ್ ಮೂಲಕ ಮನೆಯ ಉಷ್ಣಾಂಶ ಸಮತೋಲನದಲ್ಲಿಡಿ.

ಏನನ್ನು ಮಾಡಬಾರದು? ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಅನಗತ್ಯವಾಗಿ ಹೊರಗೆ ಹೋಗಬೇಡಿ. ನಿಲ್ಲಿಸಿದ ವಾಹನಗಳ ಒಳಗೆ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಟ್ಟು ಹೋಗಬೇಡಿ.

ಸಕ್ಕರೆಯಂಶ ಹೆಚ್ಚಿರುವ ಪಾನೀಯಗಳು, ಮದ್ಯಪಾನ, ಟೀ ಹಾಗೂ ಕಾಫಿ ಸೇವನೆಯನ್ನು ಆದಷ್ಟು ಕಡಿಮೆ ಮಾಡಿ, ಏಕೆಂದರೆ ಇವು ನಿರ್ಜಲೀಕರಣಕ್ಕೆ ಕಾರಣವಾಗುತ್ತವೆ. ಮಧ್ಯಾಹ್ನದ ವೇಳೆ ಕಠಿಣವಾದ ದೈಹಿಕ ಶ್ರಮದ ಕೆಲಸಗಳನ್ನು ಮಾಡಬೇಡಿ.

**ಪ್ರಥಮ ಚಿಕಿತ್ಸಾ ಕ್ರಮಗಳು:**

ಯಾರಾದರೂ ಬಿಸಿಲಿನಿಂದಾಗಿ ಮೂರ್ಛೆ ಹೋದರೆ ಅಥವಾ ತಲೆ ತಿರುಗುವಿಕೆ ಅನುಭವಿಸಿದರೆ, ತಕ್ಷಣ ಅವರನ್ನು ತಣ್ಣನೆಯ ನೆರಳಿನ ಜಾಗದಲ್ಲಿ ಮಲಗಿಸಿ ಒದ್ದೆ ಬಟ್ಟೆಯಿಂದ ಮೈ ಒರೆಸಬೇಕು. ವ್ಯಕ್ತಿ ಚೇತರಿಸಿಕೊಂಡ ನಂತರ ಸಾಕಷ್ಟು ನೀರು ಕುಡಿಸಬೇಕು. ಆರೋಗ್ಯ ಸ್ಥಿತಿ ಗಂಭೀರವಾಗಿದ್ದರೆ ಕೂಡಲೇ ಹತ್ತಿರದ ಆಸ್ಪತ್ರೆಗೆ ದಾಖಲಿಸಬೇಕು ಎಂದು ಡಾ. ರಮೇಶ್ ಬಾಬು ತಿಳಿಸಿದರು.

# *ಉಪ್ಪು ಖಾರ ನಾವೂ ತಿಂತೇವೆ, ನಮಗೂ ಕೋಪ ಬರುತ್ತೆ!*

ಶಿಡ್ಲಘಟ್ಟ

*"ಸಂವಿಧಾನದ ಚೌಕಟ್ಟಿನಲ್ಲಿ ಹೋರಾಟ ಮಾಡುವುದು ಎಲ್ಲರ ಹಕ್ಕು. ಆದರೆ ರೈತರ ಸೋಗಿನಲ್ಲಿ ಹಸಿರು ಶಾಲು ಹಾಕಿಕೊಂಡು ಜನಪ್ರತಿನಿಧಿಗಳ ವಿರುದ್ಧ ವೈಯಕ್ತಿಕ ಟೀಕೆಗಳನ್ನು ಮಾಡುವುದು ಸರಿಯಲ್ಲ. ಇಂತಹ ವರ್ತನೆ ಮುಂದುವರಿದರೆ ಕಾನೂನು ಕ್ರಮ ಎದುರಿಸಬೇಕಾಗುತ್ತದೆ," ಎಂದು ಶಾಸಕ ಬಿ.ಎನ್. ರವಿಕುಮಾರ್ ಖಡಕ್ ಎಚ್ಚರಿಕೆ ನೀಡಿದರು.*

*ಮೇಲೂರು ಗ್ರಾಮದ ತಮ್ಮ ಸ್ವಗೃಹದಲ್ಲಿ ಜಂಗಮಕೋಟೆ ಹೋಬಳಿಯ ಕೆಐಎಡಿಬಿ ಜಮೀನುಗಳ ರೈತರ ಪರ ಹೋರಾಟ ಸಮಿತಿಯ ಮನವಿ ಸ್ವೀಕರಿಸಿದ ನಂತರ ಅವರು ಮಾತನಾಡಿದರು.*

*ಜಂಗಮಕೋಟೆ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ದರ ನಿಗದಿಯ ವಿಚಾರದಲ್ಲಿ ಪರ–ವಿರೋಧ ಪ್ರತಿಭಟನೆಗಳು ನಡೆಯುತ್ತಿವೆ. ಈ ಬಗ್ಗೆ ಪ್ರತಿಕ್ರಿಯಿಸಿದ ಶಾಸಕರು, "ನಾನೂ ರೈತ ಕುಟುಂಬದಿಂದ ಬಂದವನಾಗಿದ್ದು, ರೈತರ ನೋವು ಏನೆಂಬುದು ನನಗೆ ಚೆನ್ನಾಗಿ ತಿಳಿದಿದೆ. ಕ್ಷೇತ್ರದಲ್ಲಿ ಯಾವುದೇ ರಾಜಕೀಯ ಘರ್ಷಣೆಗಳು ನಡೆಯಬಾರದು ಎಂಬುದು ನನ್ನ ಉದ್ದೇಶ. ಆದರೆ, ಹೋರಾಟಗಾರರು ಮಿತಿ ಮೀರಿ ವರ್ತಿಸಿದರೆ ಸಹಿಸಲು ಸಾಧ್ಯವಿಲ್ಲ," ಎಂದರು.*

*ರೈತರ ಜಮೀನುಗಳಿಗೆ ಕೆಐಎಡಿಬಿ ನಿಗದಿಪಡಿಸಿರುವ ದರ ಕಡಿಮೆಯಾಗಿದೆ ಎಂಬ ದೂರಿನ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಶಾಸಕರು ಈ ಕೆಳಗಿನ ಭರವಸೆಗಳನ್ನು ನೀಡಿದರು:*

*ಮುಖಾಮುಖಿ ಚರ್ಚೆ: ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕೈಗಾರಿಕಾ ಸಚಿವರೊಂದಿಗೆ ಚರ್ಚಿಸಿ, ಒಂದು ದಿನಾಂಕ ನಿಗದಿಪಡಿಸುವ ಮೂಲಕ ರೈತರು ಮತ್ತು ಅಧಿಕಾರಿಗಳ ನಡುವೆ ಮುಖಾಮುಖಿ ಸಭೆ ಏರ್ಪಡಿಸಲಾಗುವುದು. ನ್ಯಾಯಯುತ ದರ: ರೈತರಿಗೆ ಜಮೀನಿನ ಮೌಲ್ಯಕ್ಕೆ ತಕ್ಕಂತೆ ಹೆಚ್ಚಿನ ದರ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು.*

*ಕುಟುಂಬಕ್ಕೊಂದು ಕೆಲಸ: ಕೈಗಾರಿಕೆಗಳಿಗಾಗಿ ಭೂಮಿ ನೀಡುತ್ತಿರುವ ರೈತ ಕುಟುಂಬದ ಕನಿಷ್ಠ ಒಬ್ಬ ಸದಸ್ಯರಿಗೆ ಆ ಕೈಗಾರಿಕೆಗಳಲ್ಲಿ ಖಾಯಂ ಕೆಲಸ ಕೊಡಿಸಲು ಶ್ರಮಿಸುವುದಾಗಿ ತಿಳಿಸಿದರು.*

*ಈ ಸಂದರ್ಭದಲ್ಲಿ ರೈತ ಮುಖಂಡರಾದ ಬೆಳ್ಳೂಟಿ ಮುನಿಕೆಂಪಣ್ಣ, ಭಕ್ತರಹಳ್ಳಿ ಪ್ರತೀಶ್, ಚೀಮುಲ್ ನಿರ್ದೇಶಕ ಬಂಕ್ ಮುನಿಯಪ್ಪ, ಉಜಗೂರು ರಾಮಣ್ಣ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ತಾದೂರು ರಘು ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು. ಮೇಲೂರು ಗ್ರಾಮದ ತಮ್ಮ ಸ್ವಗೃಹದಲ್ಲಿ ಜಂಗಮಕೋಟೆ ಹೋಬಳಿಯ ಕೆಐಎಡಿಬಿ ಜಮೀನುಗಳ ರೈತರ ಪರ ಹೋರಾಟ ಸಮಿತಿಯ ಮನವಿ ಸ್ವೀಕರಿಸಿದ ನಂತರ ಅವರು ಮಾತನಾಡಿದರು.*

*ಜಂಗಮಕೋಟೆ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ದರ ನಿಗದಿಯ ವಿಚಾರದಲ್ಲಿ ಪರ–ವಿರೋಧ ಪ್ರತಿಭಟನೆಗಳು ನಡೆಯುತ್ತಿವೆ. ಈ ಬಗ್ಗೆ ಪ್ರತಿಕ್ರಿಯಿಸಿದ ಶಾಸಕರು, "ನಾನೂ ರೈತ ಕುಟುಂಬದಿಂದ ಬಂದವನಾಗಿದ್ದು, ರೈತರ ನೋವು ಏನೆಂಬುದು ನನಗೆ ಚೆನ್ನಾಗಿ ತಿಳಿದಿದೆ. ಕ್ಷೇತ್ರದಲ್ಲಿ ಯಾವುದೇ ರಾಜಕೀಯ ಘರ್ಷಣೆಗಳು ನಡೆಯಬಾರದು ಎಂಬುದು ನನ್ನ ಉದ್ದೇಶ. ಆದರೆ, ಹೋರಾಟಗಾರರು ಮಿತಿ ಮೀರಿ ವರ್ತಿಸಿದರೆ ಸಹಿಸಲು ಸಾಧ್ಯವಿಲ್ಲ," ಎಂದರು.*

*ರೈತರ ಜಮೀನುಗಳಿಗೆ ಕೆಐಎಡಿಬಿ ನಿಗದಿಪಡಿಸಿರುವ ದರ ಕಡಿಮೆಯಾಗಿದೆ ಎಂಬ ದೂರಿನ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಶಾಸಕರು ಈ ಕೆಳಗಿನ ಭರವಸೆಗಳನ್ನು ನೀಡಿದರು:*

*ಮುಖಾಮುಖಿ ಚರ್ಚೆ: ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕೈಗಾರಿಕಾ ಸಚಿವರೊಂದಿಗೆ ಚರ್ಚಿಸಿ, ಒಂದು ದಿನಾಂಕ ನಿಗದಿಪಡಿಸುವ ಮೂಲಕ ರೈತರು ಮತ್ತು ಅಧಿಕಾರಿಗಳ ನಡುವೆ ಮುಖಾಮುಖಿ ಸಭೆ ಏರ್ಪಡಿಸಲಾಗುವುದು. ನ್ಯಾಯಯುತ ದರ: ರೈತರಿಗೆ ಜಮೀನಿನ ಮೌಲ್ಯಕ್ಕೆ ತಕ್ಕಂತೆ ಹೆಚ್ಚಿನ ದರ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು.* *ಕುಟುಂಬದ ಕನಿಷ್ಠ ಒಬ್ಬ ಸದಸ್ಯರಿಗೆ ಆ ಕೈಗಾರಿಕೆಗಳಲ್ಲಿ ಖಾಯಂ ಕೆಲಸ ಕೊಡಿಸಲು ಶ್ರಮಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ರೈತ ಮುಖಂಡರಾದ ಬೆಳ್ಳೂಟಿ ಮುನಿಕೆಂಪಣ್ಣ, ಭಕ್ತರಹಳ್ಳಿ ಪ್ರತೀಶ್, ಚೀಮುಲ್ ನಿರ್ದೇಶಕ ಬಂಕ್ ಮುನಿಯಪ್ಪ, ಉಜಗೂರು ರಾಮಣ್ಣ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ತಾದೂರು ರಘು ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.*

# ಡ್ರಗ್ಸ್ ಎಂಬ ಪಿಡುಗಿಗೆ ಗುಡ್‌ಬೈ ಹೇಳೋಣ!

ತುಮಕೂರು

ಯುವಜನತೆಯನ್ನು ಅಮಲು ಪದಾರ್ಥಗಳ ಕದಂಬಬಾಹುಗಳಿಂದ ರಕ್ಷಿಸಲು ಹಾಗೂ ಸಮಾಜದಲ್ಲಿ ಅಂಗಾಂಗ ದಾನದ ಕುರಿತು ಜಾಗೃತಿ ಮೂಡಿಸಲು ಏಪ್ರಿಲ್ 25 ರಂದು ನಗರದಲ್ಲಿ 'ನಶಾ ಮುಕ್ತ ಭಾರತ' ಮತ್ತು 'ಅಂಗಾಂಗ ದಾನ ಅಭಿಯಾನ'ದ ಅಂಗವಾಗಿ ಬೃಹತ್ ಜಾಥಾ ಆಯೋಜಿಸಲಾಗಿದೆ ಎಂದು ಐಎಂಎ ರಾಜ್ಯ ಅಧ್ಯಕ್ಷರಾದ ಡಾ. ವೀರಭದ್ರಯ್ಯ ತಿಳಿಸಿದರು.

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಭಗವಾನ್ ಬಿ.ಸಿ. ಅವರ ಅಧ್ಯಕ್ಷತೆಯಲ್ಲಿ ಹಾಗೂ ವಿವಿಧ ವೈದ್ಯಕೀಯ ಕಾಲೇಜುಗಳ ಸಹಯೋಗದಲ್ಲಿ ಈ ಜಾಗೃತಿ ಕಾರ್ಯಕ್ರಮ ನಡೆಯಲಿದೆ.

ಐಎಂಎ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ



ಮಾತನಾಡಿದ ಡಾ. ವೀರಭದ್ರಯ್ಯ, "ಇಂದು ಶಾಲಾ–ಕಾಲೇಜು ಕ್ಯಾಂಪಸ್‌ಗಳಲ್ಲಿ ಮಾದಕ ವಸ್ತುಗಳು ಸುಲಭವಾಗಿ ಲಭ್ಯವಾಗುತ್ತಿರುವುದು ಆತಂಕಕಾರಿ ವಿಷಯ. ಇದುವರೆಗೆ 14 ಜಿಲ್ಲೆಗಳಲ್ಲಿ ಈ ಅಭಿಯಾನ ಯಶಸ್ವಿಯಾಗಿ ನಡೆದಿದ್ದು, ತುಮಕೂರು ಜಿಲ್ಲೆಯಲ್ಲಿ 15ನೇ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸುಮಾರು 8 ರಿಂದ 10 ಸಾವಿರ ಯುವಜನರು ಇದರಲ್ಲಿ ಭಾಗವಹಿಸುವ ನಿರೀಕ್ಷೆಯಿದೆ," ಎಂದರು.

ಜಾಥಾದ ಹಾದಿ:

ಪ್ರಾರಂಭ: ಏಪ್ರಿಲ್ 25 ರಂದು ಬೆಳಿಗ್ಗೆ 6:30 ಗಂಟೆಗೆ.

ಸ್ಥಳ: ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಿಂದ ಚಾಲನೆ.

ಮಾರ್ಗ: ಶಿವಕುಮಾರಸ್ವಾಮಿ ವೃತ್ತ, ಕೋತಿ ತೋಪು ಮೂಲಕ ಸಾಗಲಿದೆ.

ಮುಕ್ತಾಯ: ಅಮಾನಿಕೆರೆಯ ಗಾಜಿನ ಮನೆಯಲ್ಲಿ ಜಾಥಾ ಅಂತ್ಯಗೊಳ್ಳಲಿದೆ.

ಸಮಾಜ ಸೇವಕ ಸ್ಫೂರ್ತಿ ಚಿದಾನಂದ ಮಾತನಾಡಿ, "ಡ್ರಗ್ ಮಾಫಿಯಾ ಇಂದು ಗ್ರಾಮೀಣ ಭಾಗಕ್ಕೂ ಹಬ್ಬಿದೆ. ವಿಶೇಷವಾಗಿ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಇದರ ಬಲಿಪಶುಗಳಾಗುತ್ತಿದ್ದಾರೆ. ಇದನ್ನು ತಡೆಗಟ್ಟಲು ಶಾಲಾ–ಕಾಲೇಜುಗಳಲ್ಲಿ ಮಕ್ಕಳ ರಕ್ತ ಪರೀಕ್ಷೆ ಹಾಗೂ ಡ್ರಗ್ ಪೆಡ್ಲರ್‌ಗಳ ಪತ್ತೆಗೆ ಸರ್ಕಾರ ಕ್ರಮ ಕೈಗೊಂಡಿದೆ. ದಿಶಾ ಬೋಯಿ ಫೌಂಡೇಶನ್ ಮೂಲಕ 1,500 ಉಪನ್ಯಾಸಕರಿಗೆ ತರಬೇತಿ ನೀಡಿ, ಅವರ ಮೂಲಕ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಗುವುದು. 2028ರ ವೇಳೆಗೆ ದೇಶವನ್ನು ಸಂಪೂರ್ಣ ನಶಮುಕ್ತಗೊಳಿಸುವುದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗುರಿಯಾಗಿದೆ," ಎಂದು ವಿವರಿಸಿದರು.

ದೇಶದ ಶೇ. 44 ರಷ್ಟು ಯುವಶಕ್ತಿಯನ್ನು ದುಶ್ಚಟಗಳಿಂದ ಪಾರು ಮಾಡಲು ಪೋಷಕರು, ಸಾರ್ವಜನಿಕರು ಮತ್ತು ಮಾಧ್ಯಮಗಳು ಕೈಜೋಡಿಸಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಕರೆ ನೀಡಿದರು. ಸುದ್ದಿಗೋಷ್ಠಿಯಲ್ಲಿ ಅಭಿಯಾನದ ಸಂಚಾಲಕ ಡಾ. ಎಂ.ಆರ್. ಹುಲಿನಾಯ್ಕರ್, ಡಾ. ರಾಘವೇಂದ್ರ, ಡಾ. ಕೃಷ್ಣಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy